ಬೆಂಗಳೂರು ಸಂಪುಟ: 16 ಸಂಚಿಕೆ: 27 ಪುಟ: 06 ಬುಧವಾರ 18-12-2024

Mail:mussanje2010@gmail.com www.mussanjenews.com

ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಅಂದಿನಿಂದಲೂ ಉಪೇಂದ್ರ ಅಂದ್ರೆ ವಿಶೇಷ ಪ್ರೀತಿ'

'ಸಿನಿಮಾ ತಡವಾಗಿದ್ದಕ್ಕೆ ಕ್ಷಮಿಸಿ, ಲೇಟೆಸ್ಟಾಗಿ ಬರ್ತೀವಿ'

4 ಎಸೆತಗಳಲ್ಲಿ 4 ವಿಕೆಟ್ ಪುಟ 6

## ಯುವಕರು ಅಂತರ್ಜಾಲ ಆಟಗಳಿಗೆ ವ್ಯಸನಿಯಾಗುತ್ತಿದ್ದಾರೆ; ಗೃಹ ಸಚಿವ ಪರಮೇಶ್ವರ್ ಆತಂಕ

# ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳಿಗೆ ಕಡಿವಾಣ

## ಹೈಕೋರ್ಟ್ ತಡೆಯಾಜ್ಞೆ ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೊರೆ

**ಬೆಳಗಾವಿ:** ಆನ್ ಲೈನ್ ಬೆಟ್ಟಿಂಗ್ ಗೇಮ್ ಗಳ ಸಂಸ್ಥೆಗಳ ನಿರ್ಬಂಧಕ್ಕೆ ರಾಜ್ಯ ಉಚ್ಚನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಈ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದೆ. ನ್ಯಾಯಾಲಯ ತಡೆಯಾಜ್ಞೆ ಇದೆ ಎಂದು ಸರ್ಕಾರ ಸುಮ್ಮನೆ ಕೂತಿಲ್ಲ. ಕಾನೂನು ಪ್ರಕಾರ ನಿರಂತರವಾಗಿ ಆನ್ ಲೈನ್ ಬೆಟ್ಟಿಂಗ್ ಗೇಮ್ ಕಡಿವಾಣಕ್ಕೆ ಪ್ರಯತ್ನ ಮಾಡುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.



ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಎಸ್.ಟಿ. ಸೋಮಶೇಖರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಹೆಚ್ಚಿನ ಪ್ರಮಾಣದಲ್ಲಿ ಯುವ ಪೀಳಿಗೆ ಆನ್‌ಲೈನ್ ಗೇಮ್‌ಗಳ ವ್ಯಸನಕ್ಕೆ ತುತ್ತಾಗುತ್ತಿದ್ದಾರೆ. ಆನ್‌ಲೈನ್ ಗೇಮ್ ದೊಡ್ಡ ಪಿಡುಗಾಗಿ ಪರಿಣಮಿಸಿದೆ.

ಇದರ ತಡೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳು ಕಠಿಣ ಕಾನೂನುಗಳನ್ನು ಜಾರಿ ಮಾಡಬೇಕಿದೆ. ಬೆಂಗಳೂರು ನಗರದಲ್ಲಿ 5 ಹಾಗೂ ವಿಜಯನಗರದಲ್ಲಿ ಒಬ್ಬರು ಆನ್ ಲೈನ್ ಬೆಟ್ಟಿಂಗ್ ಆಟದ ದಂಧೆಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸಾಫ್ಟ್‌ವೇರ್ ಉದ್ಯೋಗಿಗಳು ಇದರ ಚಟಕ್ಕೆ ಬಲಿಯಾಗುತ್ತಿರುವುದು ದುರದೃಷ್ಟಕರ ಎಂದರು. ಪುಟ 2

## ಸಚಿವ ಮುನಿಯಪ್ಪ ಸ್ಪೀಕರ್ ಆದರೆ ಒಳ್ಳೆಯದು



**ಬೆಳಗಾವಿ:** ಲೋಕಸಭಾ ಮಾದರಿಯಲ್ಲಿ ಸದನ ನಡೆಸಲು ಲೋಕಸಭೆಯಲ್ಲಿ ಲೋಕಸಭಾ ಸದಸ್ಯರಾಗಿ ಕೆಲಸ ಮಾಡಿರುವ ಸಚಿವ ಕೆ.ಹೆಚ್. ಮುನಿಯಪ್ಪ ರವರಂತಹವರು ಸಭಾಧ್ಯಕ್ಷರಾದರೆ ಒಳ್ಳೆಯದು ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ವಿಧಾನಸಭೆಯಲ್ಲಿಂದು ಹೇಳಿದರು.


ಇಂದು ಸದನ ಆರಂಭವಾಗುತ್ತಿದ್ದಂತೆ ಎದ್ದು ನಿಂತ ಕೆ.ಹೆಚ್. ಮುನಿಯಪ್ಪ ಅವರು, ಲೋಕಸಭಾ ರೀತಿಯಲ್ಲಿ ಈ ಸದನ ಶಿಸ್ತಿನಿಂದ ನಡೆಯಬೇಕು. ಮೊದಲು ಪ್ರಶ್ನೋತ್ತರ ಆಗಬೇಕು. ನೀವು ಹೊಸ ಬದಲಾವಣೆ ಮಾಡಬೇಕು. ಸದನದಲ್ಲಿ ಶಿಸ್ತನ್ನು ಮಾಡಿ ಎಂದು ಹೇಳಿ, ಈಗ ಶಿಸ್ತಿಲ್ಲ. ಅರ್ಧಗಂಟೆಗೂ ಹೆಚ್ಚು ಕಾಲ ಕೋರಂ ಗಂಟೆ ಭಾರಿಸಿದೆ. ಪುಟ 2



ರಾಜ್ಯಾಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿಕೊಂಡು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಜೀ ಅವರನ್ನು ಬಿ.ವೈ ವಿಜಯೇಂದ್ರ ಅವರು ಭೇಟಿಯಾಗಿ ಆಶೀರ್ವಾದ ಪಡೆದರು.

## ನಿವೃತ್ತಿ ಘೋಷಿಸಿದ ಸ್ಪಿನ್ ದಿಗ್ಗಜ ಅಶ್ವಿನ್

**ನವದೆಹಲಿ:** 38 ವರ್ಷದ ಭಾರತೀಯ ಸ್ಪಿನ್ ದಿಗ್ಗಜ ರವಿಚಂದ್ರನ್ ಅಶ್ವಿನ್ ಅವರು ಬುಧವಾರ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ.



ನವೆಂಬರ್ 6, 2011 ರಂದು ದೆಹಲಿಯಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಟೆಸ್ಟ್ ಪಂದ್ಯದ ಮೂಲಕ ಅಂತರಾಷ್ಟ್ರೀಯ ಕ್ರಿಕೆಟ್ ಗೆ ಪಾದಾರ್ಪಣೆ ಮಾಡಿದ್ದ ಆರ್ ಅಶ್ವಿನ್ ಅವರು 106 ಪಂದ್ಯಗಳಲ್ಲಿ 537 ವಿಕೆಟ್ ಗಳನ್ನು ಪಡೆದಿದ್ದಾರೆ.

ಆರ್ ಅಶ್ವಿನ್ ಅವರು ಭಾರತದ ಅತ್ಯಂತ ಯಶಸ್ವಿ ಬೌಲರ್ ಆಗಿ 619 ವಿಕೆಟ್‌ಗಳನ್ನು ಪಡೆದ ಅನಿಲ್ ಕುಂಬ್ಳೆ ನಂತರ ಎರಡನೇ ಸ್ಥಾನದಲ್ಲಿದ್ದಾರೆ.ಹಾಗೆಯೇ 116 ಏಕದಿನ ಪಂದ್ಯಗಳಲ್ಲಿ 114 ಇನಿಂಗ್ಸ್ ಆಡಿರುವ ಅಶ್ವಿನ್ ಪುಟ 2

## ಮೋದಿ.. ಮೋದಿ.. ಎಂದು ಹೇಳುವುದು ಒಂದು ವ್ಯಸನ

ಬೆಂಗಳೂರು: "ನಿಮ್ಮ ಮಾತಿನ ಧಾಟಿಯಲ್ಲಿಯೇ ಪ್ರತಿಕ್ರಿಯಿಸುತ್ತೇನೆ. ನಿಮ್ಮ ಪಕ್ಷ ಮತ್ತು ಅದರ ಹಿಂದಿರುವ ಪರಿವಾರಕ್ಕೆ ಇತ್ತೀಚೆಗೆ ಮೋದಿ, ಮೋದಿ ಮೋದಿ ಎಂದು ಹೇಳುವುದು ಒಂದು ವ್ಯಸನ ಆಗಿದೆ. ಮೋದಿಯವರ ಬದಲಿಗೆ ಅಷ್ಟು ಬಾರಿ ದೇವರ ನಾಮ ಸ್ಮರಣೆ ಮಾಡಿದ್ದರೆ ಏಳು ಜನ್ಮದಲ್ಲಿ ಮಾತ್ರ ಅಲ್ಲ, ನೂರು ಜನ್ಮದಲ್ಲಿಯೂ ನಿಮಗೆ ಸ್ವರ್ಗವೇ ಸಿಗುತ್ತಿತ್ತು, ಕೇವಲ ಅಧಿಕಾರದಲ್ಲಿ ಉಳಿಯಲಿಕ್ಕಾಗಿ ಮಾಡಿರುವ ಪಾಪಕೃತ್ಯಗಳಿಗೆ ಕ್ಷಮೆಯೂ ಸಿಗುತ್ತಿತ್ತು" ಎಂದು ಸಿಎಂ ಸಿದ್ದರಾಮಯ್ಯ ಕೇಂದ್ರ ಗೃಹ ಸಚಿವ ಅಮಿತ್ ಶಾಗೆ ಬಹಿರಂಗ ಪತ್ರ ಬರೆದು ಟೀಕಿಸಿದ್ದಾರೆ.



ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, "ಮೊದಲಿಗೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬಗ್ಗೆ ಭಾರತೀಯ ಜನತಾ ಪಕ್ಷದ ಅಂತರಂಗದ ಅಭಿಪ್ರಾಯವನ್ನು ಬಹಿರಂಗವಾಗಿ ಧೈರ್ಯದಿಂದ ದೇಶದ ಮುಂದೆ ತೆರೆದಿಟ್ಟದ್ದಕ್ಕಾಗಿ ಮತ್ತು ಕೊನೆಗೂ ನಿಮ್ಮ ಜೀವಮಾನದಲ್ಲಿ ಒಂದು ಸತ್ಯವನ್ನಾದರೂ ಹೇಳಿದ್ದಕ್ಕೆ ನಿಮ್ಮನ್ನು ಅಭಿನಂದಿಸುತ್ತೇನೆ. ನಿಮ್ಮ ಮಾತಿನಿಂದ ನಮಗೆ ಆಶ್ಚರ್ಯವಾಗಿಲ್ಲ, ನಮಗೆ ಇದು ಗೊತ್ತಿತ್ತು. ಸಂಸತ್‌ನಲ್ಲಿ (18-12-2024) ಆಡಿದ ನಿಮ್ಮ ಮಾತಿನಿಂದ ಇಡೀ ದೇಶಕ್ಕೆ ನಿಮ್ಮ ಅಂತರಂಗದ ಅರಿವಾಗಿದೆ.. ಬಾಬಾಸಾಹೇಬ್ ಅವರು ಕೊಟ್ಟ ಪುಟ 2

## ಮೋದಿ ಜೀ ಭೇಟಿ; ಪಕ್ಷ ಬಲವರ್ಧನೆಗೆ ಪ್ರೇರಣೆಯ ಕಿರಣಗಳು

**ನವದೆಹಲಿ:** ಮಾನ್ಯ ಪ್ರಧಾನಿ ನರೇಂದ್ರ ಮೋದಿ ಜೀ ಅವರ ಭೇಟಿಯ ಅಪೂರ್ವ ಕ್ಷಣಗಳು ಕರ್ನಾಟಕ ರಾಜ್ಯದಲ್ಲಿ ಪಕ್ಷ ಬಲವರ್ಧನೆಗೆ ದೊರೆತ ಪ್ರೇರಣೆಯ ಕಿರಣಗಳು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸಿಕೊಂಡು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಸನ್ಮಾನ್ಯ ಪ್ರಧಾನಿ ನರೇಂದ್ರ ಮೋದಿ ಜೀ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದುದಾಗಿ ಅವರು ತಿಳಿಸಿದ್ದಾರೆ. ವಿಕಸಿತ ಭಾರತ ನಿರ್ಮಾಣಕ್ಕಾಗಿ ಮಹಾಸಂಕಲ್ಪ ತೊಟ್ಟು ತಪಸ್ವಿ ಸಾಧಕರಂತೆ ದೇಶ ಪುಟ 2

## ದೆಹಲಿಯಲ್ಲಿ 5 ಡಿಗ್ರಿ ಉಷ್ಣಾಂಶ ದಾಖಲು

ನವದೆಹಲಿ: ರಾಷ್ಟ್ರ ರಾಜಧಾನಿಯಲ್ಲಿ ಚಳಿಯ ತೀವ್ರತೆ ಅಧಿಕವಾಗಿದ್ದು, ನಗರದಲ್ಲಿ ದಟ್ಟ ಮಂಜು ಕವಿದ ವಾತಾವರಣವಿದ್ದು, ವೀಕ್ಷಣಾ ಪ್ರಮಾಣ ಕುಸಿದಿದೆ. ಈ ನಡುವೆ ವಾಯುಗುಣಮಟ್ಟ ತೀವ್ರ ಕಳಪೆ ಹಂತದಲ್ಲಿ ಮುಂದುವರೆದಿದೆ. ದೆಹಲಿಯಲ್ಲಿ ಬುಧವಾರ 5 ಡಿಗ್ರಿ ತಾಪಮಾನ ದಾಖಲಾಗಿದ್ದು, ಮಂಗಳವಾರ ಮಧ್ಯ ರಾತ್ರಿ 2.30ರ ಸುಮಾರಿಗೆ 7.4 ಡಿಗ್ರಿ ತಾಪಮಾನ ದಾಖಲಾಗಿತ್ತು ಎಂದು ಐಎಂಡಿ ತಿಳಿಸಿದೆ. ಕೇಂದ್ರ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಅನುಸಾರ, ಬೆಳಗ್ಗೆ 7ಕ್ಕೆ ಎಕ್ಯೂಐ ಪುಟ 2

## ಬಾಣಂತಿಯರ ಸಾವು; ನ್ಯಾಯಾಧೀಶರ ಸುಪರ್ದಿಯಲ್ಲಿ ನ್ಯಾಯಾಂಗ ತನಿಖೆಗೆ ವಹಿಸಿ

ಬೆಳಗಾವಿ: ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಬಾಣಂತಿಯರ ಸಾವಿನ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕೆಂದು ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದರು.



ವಿಧಾನಸಭೆಯಲ್ಲಿ ಇಂದು ನಿಯಮ 69ರಡಿ ವಿಷಯ ಪ್ರಸ್ತಾಪಿಸಿದ ಅವರು, "ಬಾಣಂತಿಯರ ಸಾವಿನ ಪ್ರಕರಣವನ್ನು ಹಾಲಿ ನ್ಯಾಯಾಧೀಶರ ಸುಪರ್ದಿಯಲ್ಲಿ ನ್ಯಾಯಾಂಗ ತನಿಖೆಗೆ ವಹಿಸಬೇಕು. ಕಳಪೆ ಔಷಧಿ ಪೂರೈಸಿದ ಕಂಪನಿಗಳಿಗೆ ಕಠಿಣ ಕ್ರಮದ ಸಂದೇಶ ನೀಡುವಂತಾಗಬೇಕು. ಈ ವಿಚಾರವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಬೇಕು. ಬಾಣಂತಿಯರ ಸಾವಿಗೆ ಬೆಲೆ ಕಟ್ಟಲಾಗದು. ಔಷಧಿ ತಯಾರಿಸುವ ಕಂಪನಿಗಳಿಗೆ ಕಡಿವಾಣ ಹಾಕಲು ಹೊಸ ಕಾಯ್ದೆಯನ್ನು ತನ್ನಿ. ಮೋಸ ಮಾಡುವ ಕಂಪನಿಗಳಿಗೆ ಕಡಿವಾಣ ಹಾಕಿ. ಬಾಣಂತಿಯರಿಗೆ ಬದುಕುವ ಗ್ಯಾರಂಟಿಯನ್ನು ನೀಡಬೇಕು" ಎಂದು ಒತ್ತಾಯಿಸಿದರು. "ಸರ್ಕಾರಿ ಆಸ್ಪತ್ರೆಗಳ ಮೇಲೆ ಜನರಿಗೆ ನಂಬಿಕೆ, ವಿಶ್ವಾಸ ಮೂಡಿಸುವ ಕೆಲಸವಾಗಬೇಕು" ಎಂದ ಅಶೋಕ್, "ಕರ್ನಾಟಕದಲ್ಲಿ ಬೆಚ್ಚಿ ಬೀಳುವಂತಹ ಬಾಣಂತಿಯರ ಸರಣಿ ಸಾವು, ನವಜಾತ ಶಿಶುಗಳ ಸಾವಿನ ಬಗ್ಗೆ ವರದಿಗಳಾಗಿವೆ. ಬಳ್ಳಾರಿ ಮಾತ್ರವಲ್ಲದೆ ದಾವಣಗೆರೆ, ಚಿತ್ರದುರ್ಗ, ರಾಯಚೂರು, ಬೆಳಗಾವಿಯಲ್ಲೂ ಬಾಣಂತಿಯರ ಸಾವುಗಳು ಸಂಭವಿಸಿವೆ. ಆರೋಗ್ಯ ಇಲಾಖೆ, ರೋಗಪೀಡಿತವಾಗಿದ್ದು, ಅನಾರೋಗ್ಯ ಇಲಾಖೆಯಾಗಿದೆ. ಇಲಾಖೆಗೆ ರೋಗ ಬಂದಂತಾಗಿದೆ. ಅಧಿಕಾರಿಗಳು ಒಬ್ಬರ ಮೇಲೆ ಒಬ್ಬರು ಹೇಳುತ್ತಾರೆ. ನಮ್ಮದೇನೂ ತಪ್ಪಿಲ್ಲ. ಔಷಧ ದೋಷದಿಂದಲೇ ಸಾವು ಸಂಭವಿಸಿದೆ ಎಂದು ವೈದ್ಯರು ಹೇಳುತ್ತಾರೆ. 6 ತಿಂಗಳ ಹಿಂದೆಯೇ ಔಷಧದಿಂದ ಪುಟ 2

## ಆಪರೇಷನ್ ಮಾಡಿಸದೇ ನಟ ದರ್ಶನ್ ಬಿಡುಗಡೆ

**ಬೆಂಗಳೂರು:** ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ತೂಗುದೀಪ ಕೊನೆಗೂ ಆಸ್ಪತ್ರೆಯಿಂದ ಬುಧವಾರ ಬೆಳಗ್ಗೆ ಬಿಡುಗಡೆಯಾಗಿದ್ದಾರೆ.



ಕೋರ್ಟ್ ನಿಂದ ಮಧ್ಯಂತರ ಜಾಮೀನು ಸಿಕ್ಕಿ ಬೆನ್ನುನೋವು ಎಂದು ಆಸ್ಪತ್ರೆ ಸೇರಿದ್ದ ದರ್ಶನ್‌ರ ಆಪರೇಷನ್ ಮಾಡಿಸದೇ ಮನೆಗೆ ತೆರಳಿದ್ದಾರೆ ರೇಣುಕಾಸ್ವಾಮಿ ಕೊಲೆ ಕೇಸ್ ಆರೋಪಿ ದರ್ಶನ್ ಅವರು ಬೆನ್ನುನೋವು ಹಿನ್ನೆಲೆ ನವೆಂಬರ್ 1 ರಂದು ಬೆಂಗಳೂರಿನ ಬಿಜಿಎಸ್ ಆಸ್ಪತ್ರೆಗೆ ದಾಖಲಾಗಿದ್ದರು. ಪುಟ 2

## ಆದ್ಯತೆ ಮೇರೆಗೆ ಭದ್ರಾ ಮೇಲ್ದಂಡೆ ಯೋಜನೆ ಮೊದಲ ಹಂತ ಪೂರ್ಣ

**ಬೆಳಗಾವಿ:** ಮಧ್ಯ ಕರ್ನಾಟಕ ಭಾಗದ ಬಹುದಿನದ ಬೇಡಿಕೆಯಾದ ಭದ್ರಾ ಮೇಲ್ದಂಡೆ ಯೋಜನೆಯ ಮೊದಲನೆ ಹಂತವನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸುವುದಾಗಿ ಸಚಿವ ಕೃಷ್ಣ ಬೈರೇಗೌಡ ಅವರು ಮಾಹಿತಿ ನೀಡಿದರು.

ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಎಂ.ಚಂದ್ರಪ್ಪನವರ ಚುಕ್ಕೆ ಗುರುತಿನ ಪ್ರಶ್ನೆಗೆ ಉಪ ಮುಖ್ಯಮಂತ್ರಿಗಳ ಪರವಾಗಿ ಉತ್ತರಿಸಿದ ಸಚಿವ ಕೃಷ್ಣಬೈರೇಗೌಡ, 2003ರಲ್ಲಿ ಯೋಜನೆಗೆ ರೂ.2813 ಕೋಟಿ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ನಂತರ 2015 ರಲ್ಲಿ ಯೋಜನೆಯ ಪರಿಷ್ಕೃತ ಮೊತ್ತ ರೂ.12340 ಕೋಟಿಗೆ ಪುಟ 2

## ಅಮಿತ್ ಶಾ ಕ್ಷಮೆಯಾಚನೆಗೆ ಕಾಂಗ್ರೆಸ್ ಪಟ್ಟು

ನವದೆಹಲಿ: ಬಿ ಆರ್ ಅಂಬೇಡ್ಕರ್ ವಿರುದ್ಧ ಗೃಹ ಸಚಿವ ಅಮಿತ್ ಶಾ ಅವರು ಅವಮಾನಕರ ಹೇಳಿಕೆ ನೀಡಿದ್ದು, ಅವರು ಕ್ಷಮೆಯಾಚಿಸಬೇಕು ಎಂದು ಕಾಂಗ್ರೆಸ್ ಸಂಸದರು ಪಟ್ಟು ಹಿಡಿದ ಕಾರಣ, ಸಂಸತ್ ಸದನದಲ್ಲಿ ಗದ್ದಲದ ವಾತಾವರಣ ನಿರ್ಮಾಣವಾಯಿತು.

ಇಂದು ಸದನ ಆರಂಭವಾಗುತ್ತಿದ್ದಂತೆ, ಮಂಗಳವಾರ ಬಿಆರ್ ಅಂಬೇಡ್ಕರ್ ಕುರಿತು ಗೃಹ ಸಚಿವ ಅಮಿತ್ ಶಾ ಆಡಿದ ಮಾತುಗಳ ಕುರಿತು ಕಾಂಗ್ರೆಸ್ ಸಂಸದರು ಆಕ್ಷೇಪ ವ್ಯಕ್ತಪಡಿಸಿದರು. ಅಲ್ಲದೇ, ಈ ಹೇಳಿಕೆ ಸಂಬಂಧ ಕ್ಷಮೆಯಾಚಿಸಬೇಕು ಎಂದು ಪಟ್ಟು ಹಿಡಿದರು.

ಕಾಂಗ್ರೆಸ್ ಸದಸ್ಯರ ಪ್ರತಿಭಟನೆಗೆ ತಿರುಗೇಟು ನೀಡಿದ ಕೇಂದ್ರ ಸಚಿವ ಅರ್ಜುನ್ ರಾಮ್ ಮೇಘ್ವಾಲ್ , ಕಾಂಗ್ರೆಸ್ ಅಂಬೇಡ್ಕರ್ ಅನ್ನು ಯಾವಾಗಲೂ ಅವಮಾನಿಸಿದೆ. ಇದರಿಂದಲೇ ಲೋಕಸಭಾ ಚುನಾವಣೆಗೆ ಸೋಲು ಅನುಭವಿಸಿದರು. ಅಲ್ಲದೇ, ಕಾಂಗ್ರೆಸ್ ಇದೀಗ ಅಂಬೇಡ್ಕರ್ ಅವರನ್ನು ಗೌರವಿಸದಿದ್ದರೂ, ಅವರ ಹೆಸರನ್ನು ಒತ್ತಾಯ ಪೂರ್ವಕವಾಗಿ ತೆಗೆದುಕೊಳ್ಳುತ್ತಿದೆ ಎಂದು ಕುಟುಕಿದರು.



ಸದನದ ಗದ್ದಲಗಳ ನಡುವೆ, ಪ್ರಶ್ನೋತ್ತರ ಅವಧಿಯನ್ನು ಮುಂದುವರೆಸುವಂತೆ ಸ್ಪೀಕರ್ ಓಂ ಬಿರ್ಲಾ ಅವರು ಸದಸ್ಯರನ್ನು ಕೇಳಿದರೂ, ಗದ್ದಲದ ನಡುವೆ ಅದು ಎರಡು ನಿಮಿಷ ಕೂಡ ಸಾಗದ ಹಿನ್ನೆಲೆ ಮಧ್ಯಾಹ್ನ 2ರವರೆಗೆ ಸದನ ಮುಂದೂಡಲಾಯಿತು.

**ರಾಜ್ಯಸಭೆ ಕೂಡ ಮುಂದೂಡಿಕೆ:** ರಾಜ್ಯ ಸಭೆಯಲ್ಲೂ ಸದಸ್ಯರು ಬಿಆರ್ ಅಂಬೇಡ್ಕರ್ ಕುರಿತು ಕೇಂದ್ರ ಪುಟ 2

## ಕೋರ್ಟ್ ಆದೇಶ ಚರ್ಚೆ ಅಗತ್ಯ

**ಬೆಳಗಾವಿ:** ನ್ಯಾಯಾಲಯಗಳು ನೀಡುವ ಆದೇಶಗಳ ಬಗ್ಗೆ ಸದನದಲ್ಲಿ ಚರ್ಚೆ ಮಾಡುವ ಅವಶ್ಯಕತೆ ಇದೆ ಎಂದು ಗ್ರಾಮೀಣಾಭಿವದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ವಿಧಾನಸಭೆಯಲ್ಲಿಂದು ಹೇಳಿದರು. ನಿಯಮ 69 ರಡಿಯಲ್ಲಿ ಬಾಣಂತಿಯರ ಸಾವಿನಡಿ ಚರ್ಚೆ ನಡೆಯುತ್ತಿದ್ದ ಸಂದರ್ಭದಲ್ಲಿ ಪ್ರತಿಪಕ್ಷ ನಾಯಕ ಆರ್. ಆಶೋಕ್, ಆರೋಗ್ಯ ಇಲಾಖೆಯು ಪಶ್ಚಿಮ ಬಂಗಾಳದ ಕಂಪನಿ ಪೂರೈಸಿದ್ದ ಔಷಧಿ ಸರಿ ಇಲ್ಲ ಎಂದು ಕಪ್ಪುಪಟ್ಟಿಗೆ ಆ ಕಂಪನಿಯನ್ನು ಸೇರಿಸಿತ್ತು. ಇದಕ್ಕೆ ಆ ಕಂಪನಿ ನ್ಯಾಯಾಲಯದಲ್ಲಿ ತಡೆ ತಂದಿತ್ತು ಎಂದು ಹೇಳಿದ ಸಂದರ್ಭದಲ್ಲಿ ಪುಟ 2

# ರೈತನ ಮಗನಾದ ನನಗೆ ಈ ದೇಶದ ಸಂವಿಧಾನ ಎಲ್ಲವನ್ನೂ ಕೊಟ್ಟಿದೆ

ನವದೆಹಲಿ: ಅತ್ಯಂತ ಬಡ ರೈತನ ಮಗನಾದ ನನಗೆ ಈ ದೇಶದ ಸಂವಿಧಾನ ಎಲ್ಲವನ್ನೂ ಕೊಟ್ಟಿದೆ ಎಂದು ರಾಜ್ಯಸಭೆಯಲ್ಲಿ ನಿನ್ನೆ ಭಾವಪೂರ್ಣವಾಗಿ ಮಾತನಾಡಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸಂವಿಧಾನದ ಬಲದಿಂದಲೇ ನಾನು ಮುಖ್ಯಮಂತ್ರಿ, ಪ್ರಧಾನಮಂತ್ರಿ ಆಗುವಂತೆ ಆಯಿತು ಎಂದರು.

ನಮ ಸಂವಿಧಾನ ವಿಶ್ವದ ಅತ್ಯುತ್ತಮ ಸಂವಿಧಾನಗಳಲ್ಲಿ ಒಂದು. ಅಂತಹ ಮಹೋನ್ನತ ಸಂವಿಧಾನವನ್ನು ನಾವು ಹೊಂದಿದ್ದೇವೆ. ಇದರ ಸಂರಚನೆ ನಮ ವೈವಿಧ್ಯತೆ ಮತ್ತು ಒಕ್ಕೂಟ ವ್ಯವಸ್ಥೆಯ ರಚನೆಯನ್ನು ಗುರುತಿಸುವಾಗ ಪ್ರಜಾಪ್ರಭುತ್ವದ ವಿವಿಧ ಸಾಂಸ್ಥಿಕ ಸ್ತಂಭಗಳ ನಡುವೆ ಅಧಿಕಾರದ ಸಮತೋಲನವನ್ನು ಸಂವಿಧಾನವು ಅತ್ಯಂತ ಬಲವಾಗಿ ಎತ್ತಿ ಹಿಡಿದಿದೆ ಎಂದು ಅವರು ಹೇಳಿದರು.

ಸಂವಿಧಾನವನ್ನು ಅಳವಡಿಸಿಕೊಂಡ 75 ವರ್ಷಗಳ ಸಂದರ್ಭದಲ್ಲಿ ರಾಜ್ಯಸಭೆಯಲ್ಲಿ ಭಾಷಣ ಮಾಡಿದ ಅವರು, ಸಂವಿಧಾನ ನನಗೆ ಎಲ್ಲವನ್ನೂ ಕೊಟ್ಟಿದೆ. ಒಬ್ಬ ಬಡ ರೈತನ ಮಗನಾಗಿ, ದೂರದ ಹಳ್ಳಿಯಿಂದ ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಲು ಸಾಧ್ಯವಾಗಿದ್ದರೆ ಅದು ನಮ ಸಂವಿಧಾನದಿಂದ ಮಾತ್ರ ಎಂದರು. ಕಳೆದ 75 ವರ್ಷಗಳ ಅವಧಿಯಲ್ಲಿ ಸಂವಿಧಾನದ ಚೌಕಟ್ಟಿನಲ್ಲಿ ಭಾರತದ ಬೆಳೆದ ರೀತಿ, ಮಾಡಿದ ಸಾಧನೆಗಳ ಬಗ್ಗೆ ಅನೇಕ ಮಹತ್ವಪೂರ್ಣ ಅಂಶಗಳನ್ನು ಸದನದಲ್ಲಿ ಹಂಚಿಕೊಂಡರು. ಆಧುನಿಕ ಭಾರತವನ್ನು ರೂಪಿಸುವಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿಯ ಸಂವಿಧಾನ ಅಸಾಧಾರಣ ಕೊಡುಗೆ ನೀಡಿದೆ. ಬಾಬಾ ಸಾಹೇಬ್ ಅವರ ನೇತೃತ್ವದಲ್ಲಿ ರಚನೆಯಾದ ನಮ ಸಂವಿಧಾನವು ಅನೇಕ ಒತ್ತಡಗಳು ಮತ್ತು ನಮ ಕಾಲದ ರಾಜಕೀಯವನ್ನು ತಡೆದುಕೊಂಡು ನಿಂತಿದೆ ಎಂದು ಅವರು ಹೇಳಿದರು.ಸಂವಿಧಾನದ ಮೇಲಿನ ಚರ್ಚೆಯ ಸಂದರ್ಭದಲ್ಲಿ ತುರ್ತು ಪರಿಸ್ಥಿತಿ ಸಂದರ್ಭವನ್ನು ನೆನಪು ಮಾಡಿಕೊಂಡ ಮಾಜಿ ಪ್ರಧಾನಿಗಳು, ತುರ್ತು ಪರಿಸ್ಥಿತಿಯ ಕಾಲ ಕರಾಳ



ಅವಧಿ. ಐವತ್ತು ವರ್ಷಗಳ ಹಿಂದೆ ತುರ್ತು ಪರಿಸ್ಥಿತಿಯನ್ನು ಘೋಷಿಸಿದಾಗ, ಈ ರಾಷ್ಟ್ರದ ಬಹುತೇಕ ರಾಜಕೀಯ ವಿರೋಧಿಗಳೆಲ್ಲರೂ ಜೈಲು ಪಾಲಾದರು. ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿದ್ದ ಎಲ್ಲರನ್ನೂ ಜೈಲಿಗೆ ಕಳುಹಿಸಲಾಯಿತು ಎಂದು ಅವರು ಹೇಳಿದರು.

ತುರ್ತು ಪರಿಸ್ಥಿತಿ ಅವಧಿಯಲ್ಲಿ ಭಾರತ ಅನೇಕ ಪಾಠಗಳನ್ನು ಕಳಿತುಕೊಂಡಿತು. ಆ ಸಮಯದಲ್ಲಿಯೇ ರಾಷ್ಟ್ರವು ಸಂವಿಧಾನವು ನಮಗೆ ನೀಡಿದ ಸ್ವಾತಂತ್ರ್ಯ ಎಂತಹುದು ಎಂಬುದನ್ನು ಅರಿತುಕೊಂಡಿತು ಎಂದ ಮಾಜಿ ಪ್ರಧಾನಿಗಳು, ಯುವ ಪೀಳಿಗೆಯು ಪ್ರಜಾಪ್ರಭುತ್ವವನ್ನು ಸಂರಕ್ಷಿಸಲು ತುರ್ತು ಪರಿಸ್ಥಿತಿ ಸಮಯದಲ್ಲಿ ಅನೇಕರು ಮಾಡಿದ ತ್ಯಾಗವನ್ನು ಸರಿಸಬೇಕೆಂದು ಮನವಿ ಮಾಡಿದರು.

ಸಂವಿಧಾನದ ಪಾವಿತ್ರ್ಯತೆಯನ್ನು ಎತ್ತಿ ಹಿಡಿಯಲು ನಿರಂತರ ಪ್ರಯತ್ನಗಳು ನಡೆಯಬೇಕು ಎಂದು ಕರೆ ನೀಡಿದ ಅವರು, ಇಂತಹ ಪ್ರಯತ್ನವನ್ನು ನಾವು ಎಂದಿಗೂ ಕೈಬಿಡಬಾರದು ಹಾಗೂ ಸಂವಿಧಾನಕ್ಕೆ ಕೊಡುಗೆ ನೀಡಿದ ಡಾ.ಅಂಬೇಡ್ಕರ್ ಮತ್ತು ಇತರರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ನಾವು ನಮ ಸಂವಿಧಾನ ಅಳವಡಿಸಿಕೊಂಡ ಶತಮಾನೋತ್ಸವವನ್ನು ಆಚರಿಸೋಣ ಮತ್ತು ಈ ರಾಷ್ಟ್ರದ ಭವ್ಯ ಭವಿಷ್ಯದಲ್ಲಿ ಅದರ ಅನೇಕ ಶತಮಾನಗಳನ್ನು ಆಚರಿಸೋಣ ಎಂದು ಅವರು ಕರೆ ನೀಡಿದರು

## ಟಿ.ಬಿ.ಜಯಚಂದ್ರ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ



**ಬೆಳಗಾವಿ:** ಬೆಳಗಾವಿ: ಶಿರಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಿರಿಯ ಕಾಂಗ್ರೆಸ್ ಮುಖಂಡ ಟಿ.ಬಿ.ಜಯಚಂದ್ರ ಅವರು ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿನ್ನೆ ವಿಧಾನಸಭೆಯಲ್ಲಿ ಪ್ರಶಸ್ತಿ ಪ್ರದಾನ ಮಾಡಿದರು. ಸಭಾಧ್ಯಕ್ಷ ಯು.ಟಿ.ಖಾದರ್, ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಸದನದ ಕಾರ್ಯಕಲಾಪಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಜೊತೆಗೆ ಉತ್ತಮ ಸಂಸದೀಯ ಪಟುವಾಗಿ ಚರ್ಚೆಯ ಗುಣಮಟ್ಟ ಹೆಚ್ಚಿಸಲು ಅವರು ನೀಡಿರುವ ಕೊಡುಗೆಯನ್ನು ಗುರುತಿಸಿ ಈ ಪ್ರಶಸ್ತಿಗೆ ಅವರನ್ನು ಆಯ್ಕೆ ಮಾಡಲಾಗಿದೆ.

7ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಅವರು ಪ್ರಸ್ತುತ ನವದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ವಿಧಾನಸಭೆಯಲ್ಲಿ ಪ್ರತಿಪಕ್ಷದ ಉಪನಾಯಕರಾಗಿ, ಕೃಷಿ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ, ಮುಜರಾಯಿ ಹಾಗೂ ಸಣ್ಣ ನೀರಾವರಿ ಸಚಿವರಾಗಿ ಕಾರ್ಯನಿರ್ವಹಿಸಿದ ಅನುಭವ ಅವರದ್ದಾಗಿದೆ. ಅಲ್ಲದೆ, ಈ ಮುನ್ನ ಕೂಡ ಅವರು ನವದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿಯಾಗಿದ್ದರು.

ಕೃಷಿ ಹಾಗೂ ನೀರಾವರಿ ಯೋಜನೆಗಳನ್ನು ರೂಪಿಸುವಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಾ ಬಂದಿರುವ ಇವರು, ಈ ಸಂಬಂಧ ವಿದೇಶಗಳಿಗೂ ಭೇಟಿ ನೀಡಿ ಆಳವಾದ ಅಧ್ಯಯನ ನಡೆಸಿದ್ದಾರೆ. ತುಮಕೂರು ಜಿಲ್ಲೆಗೆ ನೀರಾವರಿ ಸೌಲಭ್ಯ ಕಲ್ಪಿಸಲು ಅವಿರತವಾಗಿ ಶ್ರಮಿಸಿ ಗಮನಸೆಳೆದಿದ್ದಾರೆ.ಜಯಚಂದ್ರ ಅವರಿಗೆ ಈ ಪ್ರಶಸ್ತಿ ಸಂದಿರುವ ಸಂದರ್ಭದಲ್ಲಿ ಜನಪ್ರತಿನಿಧಿಗಳು ಪಕ್ಷಭೇದವಿಲ್ಲದೆ ಅವರನ್ನು ಅಭಿನಂದಿಸಿದ್ದಾರೆ.

## ಬೆಂ.ನಗರ ಜಿಲ್ಲಾ ಸಹಕಾರ ಒಕ್ಕೂಟ ಅಧ್ಯಕರಾಗಿ ಜೆ.ಮಂಜುನಾಥ್ ಆಯ್ಕೆ



**ಬೆಂಗಳೂರು;** ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಪದಾಧಿಕಾರಿಗಳ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಜೆ.ಮಂಜುನಾಥ್ ,ಉಪಾಧ್ಯಕ್ಷರಾಗಿ ಕೆ.ಸಿ.ಕೃಷ್ಣಪ್ಪ, ಖಜಾಂಚಿಯಾಗಿ ಹೆಚ್.ಎನ್. ಗೌತಮ್ ಆಯ್ಕೆಯಾಗಿದ್ದಾರೆ. ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಕಛೇರಿಯಲ್ಲಿ ನಡೆದ ಪದಾಧಿಕಾರಿಗಳ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ

## ಮುಡಾ ಕೇಸ್‌ನಿಂದ ಹಿಂದೆ ಸರಿಯುವಂತೆ ಒತ್ತಡ ಆರೋಪ

**ಮೈಸೂರು:** ಮುಡಾ ಪ್ರಕರಣದಿಂದ ಹಿಂದೆ ಸರಿಯಿರಿ ಎಂದು ನನಗೆ ಹಾಗೂ ನನ್ನ ಕುಟುಂಬಕ್ಕೆ ಆಮಿಷ, ಒತ್ತಡ ಹೇರಲಾಗುತ್ತಿದೆ ಎಂದು ಆರೋಪಿಸಿ ದೂರುದಾರ ಸ್ನೇಹಮಯಿ ಕೃಷ್ಣ ಅವರು ಲೋಕಾಯುಕ್ತ ಕಚೇರಿಗೆ ದೂರು ನೀಡಿದ್ದಾರೆ.

ಮೈಸೂರಿನಲ್ಲಿ ಈ ಕುರಿತು ಗಂಭೀರ ಆರೋಪ ಮಾಡಿರುವ ಆರ್ ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ, ಮುಡಾ ಪ್ರಕರಣದಿಂದ ಹಿಂದೆ ಸರಿಯಿರಿ ಎಂದು ಒತ್ತಡ ಹಾಕಲಾಗುತ್ತಿದೆ. ನನಗೆ ಹಾಗೂ ನನ್ನ ಕುಟುಂಬಕ್ಕೆ ಹರ್ಷ,

ಶ್ರೀನಿಧಿ ಎಂಬವವರು ಆಮೀಷ ಒಡ್ಡಿದ್ದಾರೆ. ಮತ್ತೊಬ್ಬ ಆರ್ ಟಿಐ ಕಾರ್ಯಕರ್ತ ಗಂಗರಾಜು ಅವರಿಗೆ ಮೂರು ಕೋಟಿ ರೂ ಹಣ ನೀಡಿದ್ದೇವೆ. ಮುಂಗಡ ಹಣವಾಗಿ ಒಂದೂವರೆ ಕೋಟಿ ರೂಪಾಯಿ ನೀಡಿರುತ್ತೇವೆ ಎಂದು ಹೇಳಿದ್ದಾರೆ ಎಂದು ಆರೋಪಿಸಿದರು.

ಪಾರ್ವತಿ ಅವರ ಆಪ್ತ ಸಹಾಯಕ ಹರ್ಷ ಎಂದು ಹೇಳಿಕೊಂಡಿದ್ದ ವ್ಯಕ್ತಿ. ಆರಂಭದಲ್ಲಿ ನನ್ನ ಮೇಲೆ ಒತ್ತಡ ತಂದರು. ನಾನು ಮನೆಯಲ್ಲಿ ಇಲ್ಲದ ವೇಳೆ ನನ್ನ ಮನೆ ಬಳಿ ಬಂದಿದ್ದಾರೆ. ನನ್ನ ಮಗನಿಗೂ ಅವರು ಆಮೀಷ ಒಡ್ಡಿದ್ದಾರೆ. ಈ ಕುರಿತು ಸಮಗ್ರ ತನಿಖೆ ಆಗಬೇಕು ಎಂದು ಆಗ್ರಹಿಸಿ ಸಿಸಿಟಿವಿ ದೃಶ್ಯ ಸಮೇತ ಲೋಕಾಯುಕ್ತ ಎಸ್ಪಿ ಉದೇಶ್ ಅವರಿಗೆ ಸ್ನೇಹಮಯಿ ಕೃಷ್ಣ ದೂರು ನೀಡಿದ್ದಾರೆ.

## ಸಚಿವರ ಕಾರ್ಯಕ್ಕೆ ಫಲಾನುಭವಿಗಳು ಫುಲ್ ಖುಷ್



**ಬೆಳಗಾವಿ** : ಗೃಹಲಕ್ಷ್ಮೀ ಯೋಜನೆಯ ಆಯ್ದ ಕೆಲವು ಫಲಾನುಭವಿಗಳೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸುವರ್ಣ ವಿಧಾನಸೌಧಕ್ಕೆ ಆಗಮಿಸಿದರು.

ಕುವೆಂಪು ನಗರದಲ್ಲಿರುವ ನಿವಾಸದಿಂದ ಸುವರ್ಣ ವಿಧಾನಸೌಧಕ್ಕೆ ವಿಶೇಷ ವಾಹನದಲ್ಲಿ ಫಲಾನುಭವಿಗಳೊಂದಿಗೆ ಸಚಿವರು ಆಗಮಿಸಿದರು.

ಗೃಹ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಯಾವುದೇ ಮಧ್ಯವರ್ತಿಗಳ ಕಾಟವಿಲ್ಲದೆ, ಎಲ್ಲರಿಗೂ ಯೋಜನೆಗಳನ್ನು ತಲುಪಿಸುವುದೇ ನಮ್ಮ ಉದ್ದೇಶ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳು ತಲುಪವಂತಾಗಬೇಕು. ಗೃಹಲಕ್ಷ್ಮೀ ಯೋಜನೆ ಮೂಲಕ ಪ್ರತಿ ತಿಂಗಳು ಸಿಗುವ 2 ಸಾವಿರ ರೂಪಾಯಿ ಲಕ್ಷಾಂತರ ಹೆಣ್ಣುಮಕ್ಕಳಿಗೆ ಸಹಾಯವಾಗಿದೆ. ಒಬ್ಬರು ಗೃಹಲಕ್ಷ್ಮಿ ಯೋಜನೆಯ ಹಣದಿಂದ ಗ್ರಂಥಾಲಯ ತೆರೆದರೆ, ಗದಗ ಗಜೇಂದ್ರದಢದ ಅತ್ತೆ-ಸೊಸೆ ಸೇರಿ ತಮ್ಮ ಜಮೀನಿನಲ್ಲಿ ಬೋರ್ವೆಲ್ ಕೊರೆಸಿದ್ದಾರೆ. ಕಣ್ಣಿನ ಶಸ್ತ್ರಚಿಕಿತ್ಸೆ, ವೈದ್ಯಕೀಯ ಖರ್ಚು ವೆಚ್ಚಗಳು, ಮಕ್ಕಳಿಗೆ ಶಾಲಾ ಫೀಜು, ಮಕ್ಕಳಿಗೆ ಬೈಕ್ ಕೊಡಿಸಿರುವುದು.. ಹೀಗೆ ಅನೇಕ ರೂಪದಲ್ಲಿ ಗೃಹಲಕ್ಷ್ಮೀ ಯೋಜನೆಯ ಹಣ ಬಡ ಮಹಿಳೆಯರಿಗೆ ಸಹಾಯವಾಗುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಗೃಹಲಕ್ಷ್ಮೀಯರ ಜೊತೆಗೆ ತೃತೀಯ ಲಿಂಗಿಯರಿಗೂ ಗೃಹಲಕ್ಷ್ಮೀ ಯೋಜನೆಯ ಹಣ ತಲುಪಿಸುವ ಕೆಲಸ ಆಗುತ್ತಿದೆ. ಯೋಜನೆಯಿಂದ ಆದ ಲಾಭದ ಬಗ್ಗೆ ಫಲಾನುಭವಿಗಳು ಹೇಳಿಕೊಳ್ಳುವಾಗ ಯೋಜನೆ ಜಾರಿಗೆ ತಂದಿದ್ದಕ್ಕೂ ಸಾರ್ಥಕ ಎನಿಸುತ್ತದೆ. ನಮ್ಮ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಎಲ್ಲರಿಗೂ ತಲುಪಬೇಕು ಎಂಬುದೇ ನಮ್ಮ ಆಸೆ ಎಂದು ಸಚಿವರು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಗೃಹಲಕ್ಷ್ಮೀ ಫಲಾನುಭವಿಗಳು ಸಂವಾದ ನಡೆಸಲಿದ್ದು, ವಿಧಾನಸಭೆ ಅಧಿವೇಶನದ ಕಲಾಪ ವೀಕ್ಷಣೆ ಮಾಡುವುದಕ್ಕೂ ವ್ಯವಸ್ಥೆ ಮಾಡಲಾಗಿದೆ ಎಂದರು.

## ಬಾಣಂತಿಯರ ಸಾವು; ನ್ಯಾಯಾಂಗ ತನಿಖೆಗೆ ವಹಿಸಿ

**ಮೊದಲ ಪುಟದಿಂದ:**

ಸತ್ತಿದ್ದಾರೆ ಎಂದು ಹೇಳುತ್ತಿದ್ದಾರೆ. ನಕಲಿ ವೈದ್ಯರ ಹಾವಳಿ ಕೂಡ ಕಂಡುಬರುತ್ತಿದೆ. ಆರೋಗ್ಯ ಇಲಾಖೆ ಕ್ರಿಯಾಶೀಲವಾಗಿಲ್ಲ" ಎಂದು ವಾಗ್ದಾಳಿ ನಡೆಸಿದರು.

"ಕೆ.ಸಿ. ಜನರಲ್ ಆಸ್ಪತ್ರೆಗೆ ಭೇಟಿ ನೀಡಿದ್ದ ಲೋಕಾಯುಕ್ತರು, ಕಾರ್ಯ ನಿರ್ವಹಿಸದ ವೆಂಟಿಲೇಟರ್, ಬಾಣಂತಿಯರಿಗೆ ಬಿಸಿನೀರು ನೀಡದಿರುವುದು ಮೊದಲಾದ ಕೊರತೆಗಳು ಕಂಡುಬಂದಿರುವುದನ್ನು ತಿಳಿಸಿದ್ದಾರೆ. ಅವಧಿ ಮೀರಿದ ಔಷಧಗಳು ವಿಲೇವಾರಿಯಾಗಿಲ್ಲ. ಡ್ರಗ್ ಮಾಫಿಯಾದಲ್ಲಿ ಸರ್ಕಾರ ಸಿಲುಕಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯಕ್ಕೆ ತಕ್ಕ ಔಷಧಿ ದಾಸ್ತಾನು ಇಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ದರ ಏರಿಕೆ ಮಾಡಲಾಗಿದೆ" ಎಂದಾಗ, ಮಧ್ಯಪ್ರವೇಶಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ "ವೈದ್ಯಕೀಯ ಶಿಕ್ಷಣ ಇಲಾಖೆಯ ಆಸ್ಪತ್ರೆಗಳಲ್ಲಿ ಹೆಚ್ಚಳ ಮಾಡಲಾಗಿದೆ. ನಮ್ಮ ಆಸ್ಪತ್ರೆಗಳಲ್ಲಿ ಆಗಿಲ್ಲ" ಎಂದು ಸ್ಪಷ್ಟನೆ ನೀಡಿದರು.

ಚರ್ಚೆ ಮುಂದುವರೆಸಿದ ಅಶೋಕ್ ಅವರು, "ವೈದ್ಯಕೀಯ ಶಿಕ್ಷಣ ಇಲಾಖೆ ಆಸ್ಪತ್ರೆಗಳು ಬೇರೆ ರಾಜ್ಯದಲ್ಲಿದೆಯೇ? 100 ವಿವಿಧ ಪರೀಕ್ಷೆಗಳ ಬೆಲೆ ಹೆಚ್ಚಳ ಮಾಡಲಾಗಿದೆ. ಕೋವಿ□□□ನಿಂದ ಈಗತಾನೇ ಚೇತರಿಸಿಕೊಳ್ಳುತ್ತಿದ್ದೇವೆ. ಬೆಲೆ ಏರಿಕೆ ಮಾಡಿದರೆ ಹೇಗೆ? ಎಂದು ಪ್ರಶ್ನಿಸಿದರು.

"ಬಾಣಂತಿಯರಿಗೆ ನೀಡಲಾಗಿದ್ದ ಐವಿ ದ್ರಾವಣದಿಂದಲೇ ಅಂಗಾಂಗ ವೈಫಲ್ಯವಾಗಿ ಮೃತಪಟ್ಟಿರುವುದು ಎಂದು ಹೇಳಲಾಗಿದೆ. ಆದರೆ ವರದಿ ಬೇರೆ ರೀತಿ ಕೊಟ್ಟಿದ್ದಾರೆ. ಔಷಧ ಪೂರೈಸಿದ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸಿದರೆ ಇನ್ನು ಒಂದು ವರ್ಷದಲ್ಲಿ ಬೇರೆ ಹೆಸರಿನಲ್ಲಿ ಅದೇ ಕಂಪನಿಯೇ ಔಷಧ ಪೂರೈಸುವಂತಹ ವ್ಯವಸ್ಥೆ ಇದೆ" ಎಂದು ಹೇಳಿದರು.

"ನ್ಯಾಯಾಲಯದ ಆದೇಶದ ಮೇಲೆ ಅವರನ್ನು ಬಿಟ್ಟಿದ್ದೀರಿ" ಎಂದಾಗ, ಮಧ್ಯಪ್ರವೇಶಿಸಿದ ಉಪಸಭಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿ ಅವರು, "ನ್ಯಾಯಾಲಯವು ತಡೆಯಾಜ್ಞೆ ಕೊಡುತ್ತದೆ. ಜೀವಕ್ಕೆ ಯಾರು ಜವಾಬ್ದಾರರು? ಒಂದು ಲ್ಯಾಬ್ ಸರಿಯಿಲ್ಲ ಎಂದರೆ, ಇನ್ನೊಂದು ಲ್ಯಾಬ್ ಸರಿ ಎಂದರೆ ಹೇಗೆ?" ಎಂದು ಪ್ರಶ್ನಿಸಿದರು.

ಆಗ ಅಶೋಕ್ ಅವರು "ಸರ್ಕಾರ ಏಕೆ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲಿಲ್ಲ?" ಎಂದು ಪ್ರಶ್ನೆ ಮಾಡಿದರು. ಈ ಹಂತದಲ್ಲಿ ಮಧ್ಯಪ್ರವೇಶಿಸಿದ ಸಚಿವ ಪ್ರಿಯಾಂಕ್ ಖರ್ಗೆ, "ನ್ಯಾಯಾಂಗದವರು ಕಾರ್ಯಾಂಗದ ಶಾಸನ ರಚಿಸುವ ಕೆಲಸ ಮಾಡುವುದಾದರೆ ನಾವು ಏಕೆ ಇರಬೇಕು. ಆಡಳಿತದಲ್ಲಿ ಹಸ್ತಕ್ಷೇಪ ಎಷ್ಟು ಸರಿ? ನಮ್ಮ ರಕ್ಷಣೆ ಯಾರು ಮಾಡುತ್ತಾರೆ?" ಎಂದು ಕೇಳಿದರು.

ಮಾತು ಮುಂದುವರೆಸಿದ ಅಶೋಕ್, "ಕಳಪೆ ಔಷಧ ಪೂರೈಸಿದ ಕಂಪನಿ ವಿಚಾರದಲ್ಲಿ ನ್ಯಾಯಾಲಯದ ಆದೇಶವಿದೆ ಎಂದರೆ ಸಾವಿಗೆ ಯಾರು ನ್ಯಾಯ ಕೊಡುತ್ತಾರೆ. ಕಲಬುರಗಿಯಲ್ಲಿ ನಿನ್ನೆ ಮೃತಪಟ್ಟಿದ್ದಾರೆ" ಎಂದು ಹಲವು ನಿದರ್ಶನ ಮತ್ತು ಅಂಕಿಅಂಶಗಳ ಮೂಲಕ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

"ಕ್ಯಾನ್ಸರ್‌ಗೆ ನೀಡುವಂತಹ ಔಷಧಿಯನ್ನು 40 ರೂ. ಗೆ ಪಡೆದು ಜನರು ತೆಗೆದುಕೊಳ್ಳುತ್ತಿರುವ ವಿಡಿಯೋವನ್ನು ಮಹಿಳೆಯೊಬ್ಬರು ಹಾಕಿದ್ದಾರೆ. ಹೀಗಾದರೆ ಸರ್ಕಾರ

**ಮೊದಲ ಪುಟದಿಂದ:**

## ಗೇಮ್‌ಗಳಿಗೆ ಕಡಿವಾಣ

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ಹಲವು ಶಾಸಕರು ನ್ಯಾಯಾಲಯದ ತಡೆಯಾಜ್ಞೆ ತೆರವುಗೊಳಿಸಿ ಆನ್ ಲೈನ್ ಗೇಮ್ ಗಳನ್ನು ನಿಷೇಧಿಸಬೇಕು ಎಂದರು.

## ಮುನಿಯಪ್ಪ ಸ್ಪೀಕರ್

ಯಾರೂ ಅದಕ್ಕೆ ಗಮನ ಕೊಟ್ಟಿಲ್ಲ. ಸದನ ಶಿಸ್ತಿನಿಂದ ನಡೆಯುವಂತಾಗಲು ಬದಲಾವಣೆ ತನ್ನಿ ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು.

ಆಗ ಸಭಾಧ್ಯಕ್ಷ ಯು.ಟಿ. ಖಾದರ್, ನೀವು ಹೇಳುವುದು ಸರಿ ಇದೆ. ಲೋಕಸಭಾ ಮಾದರಿಯಲ್ಲೇ ನಮಗೂ ಸದನ ನಡೆಯಬೇಕು ಎಂಬ ಅಪೇಕ್ಷೆ ಇದೆ. ನಿಮ್ಮ ಸಲಹೆ ಸೂಚನೆಯನ್ನು ಒಪ್ಪುತ್ತೇನೆ. ಲೋಕಸಭೆಯಲ್ಲಿ ಸುದೀರ್ಘವಾಗಿ ಕೆಲಸ ಮಾಡಿರುವ ನಿಮ್ಮಂತರ ಸಭಾಧ್ಯಕ್ಷರ ಪೀಠದಲ್ಲಿ ಕೂರಬೇಕು ಎಂದು ಹೇಳಿದರು.

ಆಗ ಪ್ರತಿಪಕ್ಷ ನಾಯಕ ಆರ್. ಅಶೋಕ್, ಮುನಿಯಪ್ಪ ಅವರಿಗೆ ಆಹ್ವಾನ ನೀಡುತ್ತಿರುವುದನ್ನು ನೋಡಿದರೆ ಮುಂದೆ ಸಚಿವರಾಗುತ್ತೀರೇನೋ ಎಂಬ ಅನುಮಾನ ಇದೆ ಎಂದರು. ಹಾಗೇನಿಲ್ಲ ನಾನು ಇಲ್ಲೆ ಇರುತ್ತೇನೆ ಎಂದು ಹೇಳಿ ಈ ಬಗ್ಗೆಗಿನ ಹೆಚ್ಚಿನ ಚರ್ಚೆಗೆ ತೆರೆ ಎಳೆದು, ಮುಂದಿನ ಕಲಾಪವನ್ನು ಕೈಗೆತ್ತಿಕೊಂಡರು.7ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಅವರು ಪ್ರಸ್ತುತ ನವದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ವಿಧಾನಸಭೆಯಲ್ಲಿ ಪ್ರತಿಪಕ್ಷದ ಉಪನಾಯಕರಾಗಿ, ಕೃಷಿ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ, ಮುಜರಾಯಿ ಹಾಗೂ ಸಣ್ಣ ನೀರಾವರಿ ಸಚಿವರಾಗಿ ಕಾರ್ಯನಿರ್ವಹಿಸಿದ ಅನುಭವ ಅವರದ್ದಾಗಿದೆ. ಅಲ್ಲದೆ, ಈ ಮುನ್ನ ಕೂಡ ಅವರು ನವದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿಯಾಗಿದ್ದರು.

ಕೃಷಿ ಹಾಗೂ ನೀರಾವರಿ ಯೋಜನೆಗಳನ್ನು ರೂಪಿಸುವಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಾ ಬಂದಿರುವ ಇವರು, ಈ ಸಂಬಂಧ ವಿದೇಶಗಳಿಗೂ ಭೇಟಿ ನೀಡಿ ಆಳವಾದ ಅಧ್ಯಯನ ನಡೆಸಿದ್ದಾರೆ. ತುಮಕೂರು ಜಿಲ್ಲೆಗೆ ನೀರಾವರಿ ಸೌಲಭ್ಯ ಕಲ್ಪಿಸಲು ಅವಿರತವಾಗಿ ಶ್ರಮಿಸಿ ಗಮನಸೆಳೆದಿದ್ದಾರೆ.ಜಯಚಂದ್ರ ಅವರಿಗೆ ಈ ಪ್ರಶಸ್ತಿ ಸಂದಿರುವ ಸಂದರ್ಭದಲ್ಲಿ ಜನಪ್ರತಿನಿಧಿಗಳು ಪಕ್ಷಭೇದವಿಲ್ಲದೆ ಅವರನ್ನು ಅಭಿನಂದಿಸಿದ್ದಾರೆ.

## ನಿವೃತ್ತಿ ಘೋಷಿಸಿದ ಅಶ್ವಿನ್

6303 ಎಸೆತಗಳಲ್ಲಿ 156 ವಿಕೆಟ್ ಪಡೆದಿದ್ದಾರೆ. ಇನ್ನು 65 ಟಿ20 ಪಂದ್ಯಗಳಲ್ಲಿ ಟೀಮ್ ಇಂಡಿಯಾವನ್ನು ಪ್ರತಿನಿಧಿಸಿರುವ ಅಶ್ವಿನ್ 72 ವಿಕೆಟ್ ಕಬಳಿಸಿದ್ದಾರೆ. ಈ ಮೂಲಕ ಟೀಮ್ ಇಂಡಿಯಾ ಪರ ಮೂರು ಸ್ವರೂಪಗಳಲ್ಲೂ 50 ಕ್ಕಿಂತ ಹೆಚ್ಚು ವಿಕೆಟ್ ಕಬಳಿಸಿದ ಟೀಮ್ ಇಂಡಿಯಾ ಬೌಲರ್ ಎನಿಸಿಕೊಂಡಿದ್ದಾರೆ.

ಸದ್ಯ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಗಾಗಿ ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ಅಶ್ವಿನ್ ಸರಣಿ ಮುಕ್ತಾಯಕ್ಕೂ ಮುನ್ನವೆ ನಿವೃತ್ತಿಯ ನಿರ್ಧಾರ ಘೋಷಿಸಿದ್ದಾರೆ.

## ಹೇಳುವುದು ಒಂದು ವ್ಯಸನ

ಸಂವಿಧಾನದಡಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವ ಸಂಸತ್ ನಲ್ಲಿ ನಿಂತು ಅವರ ಸ್ಮರಣೆಯನ್ನು ವ್ಯಸನ ಎಂದು ತುಚ್ಛೀಕರಿಸುವ ನಿಮ್ಮ ಧಾಷ್ಟಕ್ಕೆ ಶಹಭಾಸ್ ಅನ್ನಲೇಬೇಕು" ಎಂದು ವಾಗ್ದಾಳಿ ನಡೆಸಿದರು.

ಸೂರ್ಯ - ಚಂದ್ರ ಇರುವವರೆಗೆ ಅಂಬೇಡ್ಕರ್ ಸ್ಮರಣೆ: "ಅಮಿತ್ ಶಹಾ ಅವರೇ, 'ಬಾಬಾಸಾಹೇಬರ ಬಗ್ಗೆ ತಮಗೆ ಅಪಾರ ಅಭಿಮಾನ ಇದೆ, ಗೌರವ ಇದೆ, ನನ್ನ ಮಾತುಗಳನ್ನು ತಿರುಚಲಾಗಿದೆ' ಎಂದೆಲ್ಲ ಸ್ಪಷ್ಟೀಕರಣ ಕೊಟ್ಟು ಆತ್ಮವಂಚನೆ ಮಾಡಿಕೊಳ್ಳಬೇಡಿ. ಅದನ್ನು ಸಮರ್ಥಿಸಿಕೊಂಡು ದೇಶವನ್ನು ಎದುರಿಸಿ. ಅಂಬೇಡ್ಕರ್ ನಮಗೆ ವ್ಯಸನ ಅಲ್ಲ, ನಿತ್ಯ ಸ್ಮರಣೆ. ನಮ್ಮ ಉಸಿರು ಇರುವವರೆಗೆ, ಈ ಭೂಮಿಯಲ್ಲಿ ಸೂರ್ಯ - ಚಂದ್ರ ಇರುವವರೆಗೆ ಅಂಬೇಡ್ಕರ್ ಸ್ಮರಣೆ ಇರಲಿದೆ. ನೀವು ತುಚ್ಛೀಕರಿಸಿದಷ್ಟೂ ಪುಟಿದು ಪುಟಿದು ಮೇಲೆದ್ದು ಬಂದು ಅವರು ನಮ್ಮ ಮುನ್ನಡೆಯ ಹಾದಿಗೆ ಬೆಳಕಾಗುತ್ತಾರೆ. ನಿಮ್ಮ ದುರಹಂಕಾರದ ಮಾತಿಗೆ ನಿಮ್ಮ ಬೆನ್ನ ಹಿಂದಿರುವ ಚೇಲಾಗಳು ಮೇಜುಕುಟ್ಟಿ ಸಂಭ್ರಮಿಸಿರಬಹುದು. ಆದರೆ ಅಂಬೇಡ್ಕರ್ ಅವರಿಂದಾಗಿ ಸಮಾನತೆ ಮತ್ತು ಘನತೆಯ ಬದುಕನ್ನು ಪಡೆದಿರುವ ದೇಶದ ಕೋಟ್ಯಂತರ ಜನ ನಿಮಗೆ ಛೀಮಾರಿ ಹಾಕುತ್ತಿದ್ದಾರೆ ಎನ್ನುವುದು ತಿಳಿದಿರಲಿ" ಎಂದಿದ್ದಾರೆ.

"ಅಂಬೇಡ್ಕರ್ ಎಂಬ ಮನುಷ್ಯ ಈ ಭೂಮಿಯಲ್ಲಿ ಹುಟ್ಟದೇ ಇರುತ್ತಿದ್ದರೆ, ನನಗೆ ಮುಖ್ಯಮಂತ್ರಿಯಾಗುವ ಅವಕಾಶವೇ ಬರುತ್ತಿರಲಿಲ್ಲ. ನಾನು ಊರಲ್ಲಿ ದನ-ಕುರಿ ಮೇಯಿಸಿಕೊಂಡು ಇರಬೇಕಾಗುತ್ತಿತ್ತು. ನಮ್ಮ ಪಕ್ಷದ ಹಿರಿಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆಯವರು ರಾಜಕೀಯ ಕ್ಷೇತ್ರದಲ್ಲಿ ಉನ್ನತ ಸ್ಥಾನಗಳನ್ನು ಪಡೆದು ಎಐಸಿಸಿಯ ಅಧ್ಯಕ್ಷ ಸ್ಥಾನವನ್ನು ಅಲಂಕರಿಸುತ್ತಿರಲಿಲ್ಲ. ಕಲಬುರ್ಗಿಯ ಯಾವುದಾದರೂ ಕಾರ್ಖಾನೆಯಲ್ಲಿ ಕಾರ್ಮಿಕರಾಗಿರುತ್ತಿದ್ದರು. ಈ ವಾಸ್ತವ ಸದಾ ನಮ್ಮ ನೆನಪಲ್ಲಿರುತ್ತದೆ. ನೀವು ಹೇಳುವ ವ್ಯಸನ ನಮ್ಮ ಪಾಲಿನ ಅಂಬೇಡ್ಕರ್ ಸ್ಮರಣೆ, ನಮ್ಮನ್ನೆಲ್ಲ ಇಲ್ಲಿಗೆ ತಂದು ನಿಲ್ಲಿಸಿ ನಮಗೆ ಸ್ಥಾನಮಾನ, ಗೌರವ ಮತ್ತು ಜನರ ಸೇವೆ ಮಾಡುವ ಅವಕಾಶವನ್ನು ಕೊಟ್ಟಿದೆ ಎನ್ನುವುದನ್ನು ನಾವು ಮರೆತಿಲ್ಲ" ಎಂದಿದ್ದಾರೆ.

ಸಂವಿಧಾನ ಇಲ್ಲದಿದ್ದರೆ ನೀವು ಗೃಹ ಸಚಿವರೇ ಆಗ್ತಿರಲಿಲ್ಲ: "ನಾನು ಮಾತ್ರ ಅಲ್ಲ, ಬಾಬಾಸಾಹೇಬ್ ಅಂಬೇಡ್ಕರ್ ಮತ್ತು ಅವರು ಕೊಟ್ಟಿರುವ ಸಂವಿಧಾನ ಇಲ್ಲದೇ ಇರುತ್ತಿದ್ದರೆ ನೀವು ಕೂಡಾ ಗೃಹಸಚಿವರಾಗಿ ಬದುಕು ಕೊಟ್ಟ ಮಹಾತ್ಮನನ್ನೇ ತುಚ್ಛೀಕರಿಸುವ ಅವಕಾಶ ನಿಮಗೆ ಸಿಗುತ್ತಿರಲಿಲ್ಲ. ನೀವು ನಿಮ್ಮೂರಿನಲ್ಲಿ ಎಲ್ಲಾದರೂ ಗುಜರಿ ವ್ಯಾಪಾರ ಮಾಡಿಕೊಂಡು ಇರಬೇಕಾಗುತ್ತಿತ್ತು.

ದೇಶದ ಪ್ರಧಾನಿ ಮತ್ತು ನಿಮ್ಮ ಸಹದ್ಯೋಗಿ ನರೇಂದ್ರ ಮೋದಿ ಅವರು ಕೂಡಾ ರೈಲ್ವೇ ಸ್ಟೇಷನ್‌ನಲ್ಲಿ ಚಹಾ ಮಾರಿಕೊಂಡೇ ಇರಬೇಕಾಗಿತ್ತೋ ಏನೋ? ಅವರಿಗೂ ಪ್ರಧಾನಿಯಾಗುವ ಅವಕಾಶವೇ ಸಿಗುತ್ತಿರಲಿಲ್ಲ. ಇದನ್ನು ಪ್ರಧಾನಿಯವರೂ ಒಪ್ಪಿಕೊಳ್ಳಬಹುದು ಎಂದು ನಂಬಿದ್ದೇನೆ, ನೀವೂ ಒಪ್ಪಿಕೊಂಡು ಬಿಡಿ" ಎಂದು ತಿಳಿಸಿದ್ದಾರೆ.

"ಅಮಿತ ಶಾ ಅವರೇ, ಇತಿಹಾಸವನ್ನು ಓದಿರುವ ನಮ್ಮಂತಹವರಿಗೆ ನಿಮ್ಮೊಳಗಿನ ಅಂಬೇಡ್ಕರ್ ದ್ವೇಷ ಹೊಸದಲ್ಲ. ಬಾಬಾಸಾಹೇಬ್ ಅಂಬೇಡ್ಕರ್ ಮತ್ತು ಅವರು ಬರೆದಿರುವ ದೇಶದ ಸಂವಿಧಾನವನ್ನು ಅವರು ಬದುಕಿರುವಾಗಲೇ ನಿಮ್ಮ ಮಾತೃಸಂಸ್ಥೆಯಾದ ಆರ್‌ಎಸ್‌ಎಸ್ ಯಾಕೆ ತಿರಸ್ಕರಿಸಿತ್ತು? ಆರ್‌ಎಸ್‌ಎಸ್ ನಾಯಕರಾಗಿದ್ದ ಹೆಡಗೆವಾರ್, ಗೋಲ್ವಾಲ್ಕರ್ ಮತ್ತು ಸಾವರ್ಕರ್ ಸಂವಿಧಾನವನ್ನು ವಿರೋಧಿಸಿ ನೀಡಿರುವ ಹೇಳಿಕೆಗಳೇನು ಎನ್ನುವ ವಿವರಗಳೆಲ್ಲ ಇತಿಹಾಸದ ಪುಟಗಳಲ್ಲಿ ಇವೆ. ನಿಮ್ಮ ಸುಳ್ಳುಗಳು ಮತ್ತು ಆತ್ಮವಂಚನೆಯ ನಡವಳಿಕೆಗಳಿಂದ ಅದನ್ನು ಮರೆಮಾಚಬಹುದು, ಆದರೆ ಅಳಿಸಿಹಾಕಲಾಗುವುದಿಲ್ಲ ಎನ್ನುವುದು ನೆನಪಿರಲಿ. ಆ ಅಭಿಪ್ರಾಯವನ್ನೇ ನೀವು ಸಂಸತ್‌ನಲ್ಲಿ ಆಡಿದ್ದೀರಿ" ಎಂದು ವಾಗ್ದಾಳಿ ನಡೆಸಿದ್ದಾರೆ.

ಮೊದಲ ಪುಟದಿಂದ

## ಚರ್ಚೆ ಅಗತ್ಯ

ಸಭಾಧ್ಯಕ್ಷ ಪೀಠದಲ್ಲಿದ್ದ ಉಪಾಧ್ಯಕ್ಷ ರುದ್ರಪ್ಪ ಲಮಾಣಿ ಅವರು, ನ್ಯಾಯಾಲಯಗಳು ಈ ರೀತಿ ತಡೆಗಳನ್ನು ನೀಡಿದರೆ ಕಷ್ಟ. ಇದು ಜನರ ಜೀವನದ ಪ್ರಶ್ನೆ. ಈ ರೀತಿಯ ತಡೆಗಳನ್ನು ನ್ಯಾಯಾಲಯಗಳು ನೀಡಿರುವುದು ದುರ್ದೈವ ಎಂದರು. ಈಗ ನ್ಯಾಯಾಲಯಗಳೆ ಶಾಸನ ಮಾಡುವ ಅದನ್ನು ಅನುಷ್ಠಾನ ಮಾಡುವ ಕೆಲಸ ಮಾಡುತ್ತಿವೆ. ನನ್ನ ಇಲಾಖೆಗೆ ಸಂಬಂಧಿಸಿದಂತೆ ಇಂತಹ ರಸ್ತೆ ಆಗಬೇಕು ಎಂಬ ಆದೇಶವನ್ನು ನೀಡಿದೆ. ಹೀಗಾದರೆ ಹೇಗೆ. ನಮಗೆ ರಕ್ಷಣೆ ಬೇಕಾಗಿದೆ. ನ್ಯಾಯಾಲಯ ಕೆಲ ಆದೇಶಗಳ ಬಗ್ಗೆ ಚರ್ಚೆ ಅವಶ್ಯ ಎಂದರು. ಆಡಳಿತದಲ್ಲಿ ನ್ಯಾಯಾಲಯದ ಹಸ್ತಕ್ಷೇಪಗಳು ಆಗುತ್ತಿವೆ. ಶಾಸನ ರಚನೆ, ಅನುಷ್ಠಾನ ಎಲ್ಲವನ್ನು ನ್ಯಾಯಾಲಯವೇ ಮಾಡುವುದಾದರೆ ನಾವು ಏಕೆ ಇರಬೇಕು. ಈ ಬಗ್ಗೆ ಚರ್ಚೆ ನಡೆಸುವ ಅವಶ್ಯಕತೆ ಇದೆ ಎಂದು ಹೇಳುವ ಬಿಜೆಪಿ ಸದಸ್ಯರೊಬ್ಬರು ನ್ಯಾಯಾಲಯದ ಆದೇಶದ ಬಗ್ಗೆ ಚರ್ಚೆ ಆಗಬೇಕು ಎಂಬುದನ್ನು ನೆನಪಿಸಿಕೊಂಡರು.

## ಮೊದಲ ಹಂತ ಪೂರ್ಣ

ಸರ್ಕಾರ ಅನುಮೋದನೆ ನೀಡಿದೆ. 2020 ರಲ್ಲಿ ಪರಿಷ್ಕೃತ ಯೋಜನೆ ಮೊತ್ತ ರೂ.21473.67 ಕೋಟಿಗೆ ಏರಿಕೆಯಾಗಿದೆ. ಇದಕ್ಕೆ ತಕ್ಕಹಾಗೆ ಯೋಜನೆಯ ಮೂಲ ವ್ಯಾಪ್ತಿ ವಿಸ್ತೀರ್ಣ ಹಾಗೂ ಕುಡಿಯುವ ನೀರಿನ ಯೋಜನೆಗಳು ಸಹ ಸೇರ್ಪಡೆಯಾಗಿವೆ. 2027-28ನೇ ಸಾಲಿನ ಮಾರ್ಚ್ ಅಂತ್ಯಕ್ಕೆ ಯೋಜನೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದ್ದು, ಇನ್ನೂ ರೂ.11,358.54 ಕೋಟಿ ಅನುದಾನ ಬೇಕಾಗುತ್ತದೆ. ಕೇಂದ್ರ ಸರ್ಕಾರ ಆಯವ್ಯಯದಲ್ಲಿ ಘೋಷಿಸಿದಂತೆ ರೂ.5300 ಕೋಟಿ ಅನುದಾನವನ್ನು ಇನ್ನೂ ಬಿಡುಗಡೆ ಮಾಡಿಲ್ಲ. ಅನುದಾನ ಲಭಿಸಿದರೆ ಯೋಜನೆ ಪೂರ್ಣಗೊಳಿಸಲು ಸಹಾಯವಾಗಲಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು. 1957 ರಲ್ಲಿ ದಿವಂಗತ ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪನವರು ಮಧ್ಯ ಕರ್ನಾಟಕ ಬರ ಪೀಡಿತ ಜಿಲ್ಲೆಗಳಿಗೆ ನೀರನ್ನು ನೀಡಲು ಮಹತ್ವಾಂಕ್ಷೆ ಭದ್ರಾ ಯೋಜನೆಯ ಬಗ್ಗೆ ಚಿಂತಿಸಿದ್ದರು. 2003ರಲ್ಲಿ ಅನುಮೊದನೆ ನೀಡಿದ ಯೋಜನಾ ವೆಚ್ಚ ಇಂದು 21473.67 ಕೋಟಿಗಳಷ್ಟು ಹೆಚ್ಚಾಗಿದೆ. ಇನ್ನೂ ತಡವಾದರೆ ಎಸ್.ಆರ್. ರೇಟ್ ಏರಿಕೆಯಾಗಿ ಯೋಜನೆ ವೆಚ್ಚವು ಇನ್ನೂ ಹೆಚ್ಚಾಗಲಿದೆ. ಪಕ್ಕದ ತೆಲಂಗಾಣ ರಾಜ್ಯದಲ್ಲಿನ ಸರ್ಕಾರ 5 ವರ್ಷದಲ್ಲಿ ರೂ.1.20 ಲಕ್ಷ ಕೋಟಿ ಖರ್ಚು ಮಾಡಿ 18 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಕಲ್ಪಿಸಿದೆ. ರಾಜ್ಯವೂ ಸಹ ಇಂತಹದೇ ಇಚ್ಛಾ ಶಕ್ತಿಯನ್ನು ಪ್ರದರ್ಶಿಸಬೇಕು. ಕೇಂದ್ರ ಸರ್ಕಾರ ಘೋಷಿಸಿದ ಅನುದಾನ ನೀಡಿಲ್ಲ ಎಂದು ನೆಪ ಹೇಳದೆ, ರಾಜ್ಯ ಸರ್ಕಾರವೇ ಅನುದಾನ ನೀಡಿ ಯೋಜನೆ ಪೂರ್ಣಗೊಳಿಸಬೇಕು ಎಂದರು.

## ಪ್ರೇರಣೆಯ ಕಿರಣಗಳು

ಕಟ್ಟುವ ಕಾಯಕದಲ್ಲಿ ತಮ್ಮನ್ನು ಸಮರ್ಪಿಸಿಕೊಂಡಿರುವ ಹೆಮ್ಮೆಯ ಪ್ರಧಾನಿ ಮೋದಿಜೀಯವರ ಕಾರ್ಯಶೈಲಿ ನಮ್ಮಂಥ ಕಾರ್ಯಕರ್ತರಿಗೆ ನಿತ್ಯ ಚೈತನ್ಯದ ಚಿಲುಮೆಯಾಗಿದೆ. ಅವರ ಆಶೀರ್ವಾದದ ಮಾರ್ಗ ದರ್ಶನ ರಾಜ್ಯದಲ್ಲಿ ಪಕ್ಷ ಕಟ್ಟುವ ಕಾರ್ಯಕ್ಕೆ ಅದಮ್ಯ ಉತ್ಸಾಹ ತುಂಬಿದೆ ಎಂದು ವಿವರಿಸಿದ್ದಾರೆ. ಇಂದಿನ ಅವರ ಭೇಟಿಯ ಸಂದರ್ಭದ ಮಾತುಗಳು ಸಂಘಟನೆಯ ಬಲವೃದ್ಧಿಯ ಜೊತೆ ಜೊತೆಗೇ ರಾಷ್ಟ್ರ ಬಲಿಷ್ಠಗೊಳಿಸುವ ಮಹಾ ಕಾರ್ಯದಲ್ಲಿ ಯುವಜನರ ಸಹಭಾಗಿತ್ವ ನಿರೀಕ್ಷೆ ಮೀರಿ ತೊಡಗಿಸಿ ಕೊಳ್ಳುವಂತೆ ಕಾರ್ಯಕ್ರಮಗಳನ್ನು ರೂಪಿಸಲು ಪ್ರೇರಣೆ ನೀಡಿತು ಎಂದಿದ್ದಾರೆ. ಭಾರತದ ಆರ್ಥಿಕ, ಔದ್ಯೋಗಿಕ, ಶೈಕ್ಷಣಿಕ ಕ್ಷೇತ್ರಗಳ ಪ್ರಗತಿ ಜಾಗತಿಕ ಮಟ್ಟದಲ್ಲಿ ಅಗ್ರ ಸಾಧನೆಗೈಯಲು ಮಹತ್ವದ ಪಾತ್ರ ವಹಿಸಲಿದ್ದು ಈ ನಿಟ್ಟಿನಲ್ಲಿ ಕರ್ನಾಟಕದ ಕೊಡುಗೆ ಮುಂಚೂಣಿ ಸ್ಥಾನದಲ್ಲಿರುವಂತೆ ಕಾಳಜಿ ವಹಿಸಲು ಕೇಂದ್ರ ಸರ್ಕಾರದ ಯೋಜನೆಗಳು ಜನರಿಗೆ ತಲುಪುವಂತಾಗಬೇಕು, ಇದಕ್ಕಾಗಿ ಪಕ್ಷದ ಕಾರ್ಯ ಕರ್ತರು ಯೋಜಿತವಾಗಿ ತೊಡಗಿಸಿಕೊಳ್ಳಲು ಕಾರ್ಯ ಕ್ರಮ ರೂಪಿಸಲು ಮಾನ್ಯ ಪ್ರಧಾನಿಗಳು ಸೂಚಿಸಿದರು ಎಂದು ಮಾಹಿತಿ ನೀಡಿದ್ದಾರೆ.

## ಉಷ್ಣಾಂಶ ದಾಖಲು

442 ದಾಖಲಾಗಿದ್ದು, ಮಂಗಳವಾರ ಇದೇ ಹೊತ್ತಿಗೆ ಎಕ್ಯೂಐ 421 ಇತ್ತು. ಐಟಿಒದಲ್ಲಿ ವಾಯುಗುಣಮಟ್ಟ 458 ದಾಖಲಾಗುವ ಮೂಲಕ ತೀವ್ರ ಕಳಪೆ ಹಂತದಲ್ಲಿದೆ. ಇನ್ನು ಆಲಿಪುರ್‌ನಲ್ಲಿ 471, ಜವಾಹರ್ ಲಾಲ್ ನೆಹರು ಸ್ಟೇಡಿಯಂನಲ್ಲಿ 443, ಡಿಟಿಯುನಲ್ಲಿ 432, ಐಜಿಐ ವಿಮಾನ ನಿಲ್ದಾಣದಲ್ಲಿ 418, ಆರ್‌ಕೆ ಪುರಂನಲ್ಲಿ 464, ಡಿಯು ಉತ್ತರ ಕ್ಯಾಂಪಸ್‌ನಲ್ಲಿ 436 ದಾಖಲಾಗಿದೆ.ಈ ನಡುವೆ ಕೆಲವು ಪ್ರದೇಶದಲ್ಲಿ ತೀವ್ರ ಕಳಪೆ ಬದಲಾಗಿ ಎಕ್ಯೂಐ ಕಳಪೆ ವರ್ಗದಲ್ಲಿ ಕಂಡಿದೆ. ಚಾಂದಿನಿ ಚೌಕ್‌ನಲ್ಲಿ ಎಕ್ಯೂಐ 374, ಲೋದಿ ರೋಡ್‌ನಲ್ಲಿ 348, ದಿಲ್ಶಾದ್ ಗಾರ್ಡನ್‌ನಲ್ಲಿ 344, ಎನ್‌ಎಸ್‌ಐಟಿ ದ್ವಾರಕಾದಲ್ಲಿ 367 ದಾಖಲಾಗಿದೆ. ಈ ತೀವ್ರ ಚಳಿಯ ನಡುವೆಯೇ 78ನೇ ಗಣರಾಜ್ಯೋತ್ಸ ಪರೇಡ್‌ಗೆ ಕರ್ತವ್ಯ ಪಥ್‌ನಲ್ಲಿ ರಿಹರ್ಸಲ್ ನಡೆಸಿದ್ದಾರೆ.

## ಕಾಂಗ್ರೆಸ್ ಪಟ್ಟು

ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಗೆ ಕ್ಷಮೆಯಾಚಿಸುವಂತೆ ಪಟ್ಟು ಹಿಡಿದು, ಗದ್ದಲವಾದ ಪರಿಣಾಮ ಅಲ್ಲೂ ಕೂಡ ಸದನವನ್ನು ಮಧ್ಯಾಹ್ನದವರೆಗೆ ಮುಂದೂಡಲಾಯಿತು.


## ದರ್ಶನ್ ಬಿಡುಗಡೆ

ಬಳ್ಳಾರಿ ಜೈಲಿನಿಂದ ಮಧ್ಯಂತರ ಜಾಮೀನಿನ ಮೇಲೆ ಹೊರಬಂದಿದ್ದ ನಟ ಆಸ್ಪತ್ರೆಯಲ್ಲಿಯೇ ಇದ್ದು ಚಿಕಿತ್ಸೆ ಪಡೆದುಕೊಂಡರು. ಇದೀಗ ಕೋರ್ಟ್ ನಿಂದ ಜಾಮೀನು ಮಂಜೂರಾದ ಹಿನ್ನೆಲೆಯಲ್ಲಿ ಇಂದು ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದಾರೆ.

ತೀವ್ರ ಬೆನ್ನುನೋವು ಎಂದು ಅನಾರೋಗ್ಯ ಕಾರಣ ನೀಡಿ ಆಸ್ಪತ್ರೆಗೆ ದಾಖಲಾಗಿದ್ದರು.ಡಿಸೆಂಬರ್ 11 ಕ್ಕೆ ಶಸ್ತ್ರಚಿಕಿತ್ಸೆ ಮಾಡಲಾಗುತ್ತಿದೆ ಎಂದು ಕೋರ್ಟ್‌ಗೆ ದರ್ಶನ್ ಪರ ವಕೀಲ ಸಿವಿ ನಾಗೇಶ್ ಮಾಹಿತಿ ನೀಡಿದ್ದರು. ಆ ಬಳಿಕ ಆಪರೇಷನ್ ಬದಲು ಫಿಜಿಯೋ ಥೆರಪಿ ನೀಡಲು ವೈದ್ಯರು ಸೂಚಿಸಿದ್ದರು. ಹೀಗಾಗಿ, ಶಸ್ತ್ರಚಿಕಿತ್ಸೆ ನಡೆಸಿಲ್ಲ ಎನ್ನಲಾಗಿದೆ.

## ಮೂಲಸೌಕರ್ಯ ಕಲ್ಪಿಸಲು ಮನವಿ

ಚಾಮರಾಜನಗರ: ಚಾಮರಾಜನಗರ ಜಿಲ್ಲೆಗೆ ಮತ್ತೊಂದು ನವೋದಯ ವಿದ್ಯಾಲಯ ಮಂಜೂರು ಮಾಡಬೇಕು ಹಾಗೂ ಜಿಲ್ಲೆಯ ಹೊಂಡರಬಾಳಿನಲ್ಲಿರುವ ನವೋದಯ ಶಾಲೆಗೆ ಮತ್ತಷ್ಟು



ಮೂಲಸೌಕರ್ಯ ಕಲ್ಪಿಸುವಂತೆ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಕೇಂದ್ರ ಶಿಕ್ಷಣ ಸಚಿವರಿಗೆ ಮನವಿ ಮಾಡಿದರು.

ನವದೆಹಲಿಯಲ್ಲಿ ಕೇಂದ್ರ ಶಿಕ್ಷಣ ಸಚಿವರಾದ ಧರ್ಮೇಂದ್ರ ಪ್ರಧಾನ್ ಅವರನ್ನು ಖುದ್ದು ಭೇಟಿ ಮಾಡಿ ಮನವಿ ಸಲ್ಲಿಸಿದ ಸಂಸದರಾದ ಸುನೀಲ್ ಬೋಸ್ ಅವರು ಗಡಿ ಜಿಲ್ಲೆಯಲ್ಲಿ ಆದ್ಯತೆಯ ಮೇರೆಗೆ ಮತ್ತೊಂದು ನವೋದಯ ಶಾಲೆ ಆರಂಭಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಚಾಮರಾಜನಗರ ಜಿಲ್ಲೆ ಪ್ರಸ್ತುತ ಶೈಕ್ಷಣಿಕ ವಿಷಯದಲ್ಲಿ ಗೋಚರ ಪ್ರಗತಿಯನ್ನು ತೋರುತ್ತಿದೆ. ಸಾಮಾಜಿಕವಾಗಿ ಜಿಲ್ಲೆ ಹಿಂದುಳಿದಿದ್ದು, ಇತರ ರಾಜ್ಯಗಳೊಂದಿಗೆ ಗಡಿಯನ್ನು ಹಂಚಿಕೊಂಡಿದ್ದು ರಾಜ್ಯದ ಗಡಿಯ ಕೊನೆಯಲ್ಲಿದೆ. ಇಡೀ ಜಿಲ್ಲೆಗೆ ಒಂದು ನವೋದಯ ಶಾಲೆ ಇದ್ದು, ಇದು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ವಿದ್ಯಾಲಯದ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸುವವರ ಸಂಖ್ಯೆ ಪ್ರತಿವರ್ಷ ಹೆಚ್ಚಳವಾಗಿದೆ. ಪ್ರತೀ ವರ್ಷವೂ ಸಹ ಆಕಾಂಕ್ಷಿಗಳ ಸಂಖ್ಯೆ ಹೆಚ್ಚುತ್ತಲೇ ಇದೆ.

ಗ್ರಾಮೀಣ ಭಾಗದ ಮಕ್ಕಳ ಅಗತ್ಯಗಳನ್ನು ಪೂರೈಸಲು ಹಾಗೂ ಅವರನ್ನು ಉತ್ತೇಜಿಸಲು ಜಿಲ್ಲೆಯ ಶೈಕ್ಷಣಿಕ ಪ್ರಗತಿಗಾಗಿ ಮತ್ತೊಂದು ನವೋದಯ ವಿದ್ಯಾಲಯದ ಅಗತ್ಯವನ್ನು ಗುರುತಿಸಲಾಗಿದೆ. ಹಾಗಾಗಿ ಇನ್ನೊಂದು ನವೋದಯ ಶಾಲೆಯನ್ನು ಮಂಜೂರು ಮಾಡಿ ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸಬೇಕು ಎಂದು ಲೋಕಸಭಾ ಸದಸ್ಯರು ಮನವಿ ಮಾಡಿದರು.

ಅಲ್ಲದೇ ಜಿಲ್ಲೆಯ ಹೊಂಡರಬಾಳಿನಲ್ಲಿ ಇರುವ ಜವಾಹರ್ ನವೋದಯ ವಿದ್ಯಾಲಯ ವಸತಿ ಶಾಲೆಯಲ್ಲಿ 460 ವಿದ್ಯಾರ್ಥಿಗಳು ಮತ್ತು 60 ಸಿಬ್ಬಂದಿ ಮತ್ತು ಅವರ ಕುಟುಂಬದ ಸದಸ್ಯರು ಉಳಿದುಕೊಂಡಿದ್ದಾರೆ. ಸಂಸ್ಥೆಗೆ ಕೆಲ ಸೌಲಭ್ಯಗಳ ಅಗತ್ಯವಿದ್ದು, ಇದಕ್ಕಾಗಿ ಶಾಲಾ ಮಟ್ಟದಲ್ಲಿ ವ್ಯವಸ್ಥೆ ಮಾಡಲು ಅನುದಾನದ ಕೊರತೆಯಿದೆ. ಹಾಗಾಗಿ ತಾವು ಮೂಲ ಸೌಕರ್ಯ ಕಲ್ಪಿಸಲು ಅಗತ್ಯ ಅನುದಾನ ನೀಡಬೇಕು ಎಂದು ಒತ್ತಾಯಿಸಿದರು.

ವಿದ್ಯಾಲಯದ ವಸತಿನಿಲಯಗಳ ಡಾರ್ಮೆಟರಿ ಮತ್ತು ಶೈಕ್ಷಣಿಕ ಬ್ಲಾಕ್‌ಗಳಲ್ಲಿ ಬಿಸಿ ನೀರು ಸೌಲಭ್ಯವುಳ್ಳ 10 ವಾಟರ್ ಪ್ಯೂರಿಫೈಯರ್ ವ್ಯವಸ್ಥೆ, ಶಾಲೆಯ ಆಂತರಿಕ ರಸ್ತೆಗಳ ಸುಧಾರಣೆ, 80 ಡ್ಯುಯಲ್ ಡೆಸ್ಕ್‌ಗಳೊಂದಿಗೆ ಹೆಚ್ಚುವರಿಯಾಗಿ 2 ತರಗತಿ ಕೊಠಡಿಗಳ ನಿರ್ಮಾಣ, ಕೌಶಲ ಪ್ರಯೋಗಾಲಯಗಳಿಗಾಗಿ ಎರಡು ಕೊಠಡಿಗಳನ್ನು ನಿರ್ಮಾಣ ಮಾಡಿಕೊಡಬೇಕು. ಈ ಎಲ್ಲಾ ಸೌಲಭ್ಯಗಳನ್ನು ಆದ್ಯತೆ ಮೇರೆಗೆ ಒದಗಿಸಿಕೊಡುವಂತೆ ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಕೇಂದ್ರ ಶಿಕ್ಷಣ ಸಚಿವರಿಗೆ ಮನವಿ ಮಾಡಿದರು.

# ಮಹಿಳೆಯರು ಆರ್ಥಿಕವಾಗಿ ಸ್ವತಂತ್ರರಾಗಬೇಕು



ಮಾಲೂರು : ಮಹಿಳೆಯರು ಆರ್ಥಿಕವಾಗಿ ಸ್ವತಂತ್ರರಾಗಬೇಕು ಹೆಣ್ಣು ಮಕ್ಕಳು ಉತ್ತಮ ವಿದ್ಯಾಭ್ಯಾಸದೊಂದಿಗೆ ಹಾರ್ದಿಕ ಪ್ರಗತಿಯಲ್ಲಿ ಸಾಧನೆ ಮಾಡಿದಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದು ಜಿಲ್ಲೆಯ ನಿರ್ದೇಶಕರಾದ ಸಿ ಎಚ್ ಪದ್ಮಯ ಹೇಳಿದರು.

ತಾಲ್ಲೂಕಿನ ಲಕ್ಕೂರು ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿರುವ ಗಡಿನಾಡು ಸಾಂಸ್ಕೃತಿಕ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಹಣಕಾಸಿನ ಸಂಸ್ಥೆಯಲ್ಲ ಇದು ಸಮಾಜ ಸೇವೆ ಸಂಸ್ಥೆಯಾಗಿದೆ ಇಲ್ಲಿ ಸುಮಾರು 60 ಲಕ್ಷಕ್ಕೂ ಹೆಚ್ಚು ಮಹಿಳಾ ಸಂಘಗಳು ಆರ್ಥಿಕ ಸಹಕಾರ ಪಡೆದು ಅಭಿವೃದ್ಧಿ ಹೊಂದುತ್ತಿದ್ದಾರೆ ಅಲ್ಲದೆ ಸಂಸ್ಥೆಯಿಂದ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ವಾತ್ಸಲ್ಯ ಶಿಕ್ಷಣ ಗೆಳತಿ ಹೊಲಿಗೆ ಟ್ಯೂಶನ್ ಕ್ಲಾಸ್ ಕೌಟುಂಬಿಕ ಸಾಮರಸ್ಯ ಪೌಷ್ಟಿಕ ಆಹಾರ ಮತ್ತು ಆರೋಗ್ಯ ತಪಾಸಣಾ ಶಿಬಿರ ಸ್ವಉದ್ಯೋಗ ಪ್ರೇರಣಾ ಶಿಬಿರ ಸರ್ಕಾರಿ ಸೌಲಭ್ಯಗಳು ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಪ್ರತಿ ತಿಂಗಳು ಸದಸ್ಯರಿಗೆ ಮಾಹಿತಿ ನೀಡಿ ಆರ್ಥಿಕವಾಗಿ ಸಾಮಾಜಿಕವಾಗಿ ಅಭಿವೃದ್ಧಿ ಹೊಂದಲು ಸದಸ್ಯರು ಇದರ ಪ್ರಯೋಜನ ಪಡೆದುಕೊಂಡು ಉತ್ತಮ ಜೀವನವನ್ನು ನಡೆಸಲು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ವಂಶೋದಯ ಆಸ್ಪತ್ರೆಯ ವೈದ್ಯಾಧಿಕಾರಿ ಹಾಗೂ ಲಯನ್ಸ್ ಕ್ಲಬ್ ಅಧ್ಯಕ್ಷೆ ಡಾ. ಸುನೀತಾ ಪ್ರಭು ಮಾತನಾಡಿ, ಮಹಿಳೆಯರಲ್ಲಿ ಇತ್ತೀಚಿಗೆ ಸ್ತನ ಕ್ಯಾನ್ಸರ್ ಕಾಯಿಲೆ ಹೆಚ್ಚಾಗುತ್ತಿದ್ದು ಪ್ರತಿ ಎಂಟು ನಿಮಿಷಕ್ಕೆ ಒಂದು ಮಹಿಳೆ ಗರ್ಭಕಂಠದ ಕ್ಯಾನ್ಸರ್ ನಿಂದ ಮೃತ ಪಡುತ್ತಿದ್ದಾರೆ. ಪ್ರಾರಂಭದಲ್ಲಿ ನಡೆದು ಕ್ಯಾನ್ಸರ್ ಮುಕ್ತ ದೇಶವನ್ನಾಗಿಸಬೇಕು ಮಹಿಳೆ ಮಹಿಳೆಯರಲ್ಲೇ ಹೆಚ್ಚಾಗಿ ಇರುವ ಕಾರಣ ಪ್ರತಿಯೊಬ್ಬ ಪಾಲಕರು ತಮ್ಮ ಮನೆಯಲ್ಲಿರುವ 9 ರಿಂದ 14 ವರ್ಷದ ಒಳಗಿನ ಹೆಣ್ಣು ಮಕ್ಕಳಿಗೆ ತಪ್ಪದೇ ಎಚ್ ಪಿ ವಿ ಲಸಿಕೆಯನ್ನು 6 ತಿಂಗಳಲ್ಲಿ 2 ಡೋಸ್ ವೇಳಾಪಟ್ಟಿಯಂತೆ ನೀಡಿದಾಗ ಇದನ್ನು ತಡೆಗಟ್ಟುವ ಕೆಲಸ ಮಾಡಬಹುದು 15 ವರ್ಷಕ್ಕಿಂತ ಹೆಚ್ಚಿನ ವಯಸ್ಸಿನ ಹೆಣ್ಣು ಮಕ್ಕಳಿಗೆ ಆರು ತಿಂಗಳಲ್ಲಿ ಮೂರು ಡೋಸ್ ನೀಡಬೇಕು ಅಲ್ಲದೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ಸತೀಶ್.ಹೆಚ್ , ಗ್ರಾ.ಪಂ. ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಚೇತನ್ ಗೌಡ, ಕರವೇ ಜಿಲ್ಲಾ ಮಹಿಳಾ ಅಧ್ಯಕ್ಷೆ ಲತಾಬಾಯಿ ಮಾಡಿಕ್, ಜ್ಞಾನ ವಿಕಾಸ ಸಮನ್ವಯ ಅಧಿಕಾರಿ ಉಷಾರಾಣಿ , ಕೃಷಿ ಅಧಿಕಾರಿ ಮಧುರಾಜ್ ವಿಚಕ್ಷಣಾಧಿಕಾರಿ ತಿಪ್ಪೇಸ್ವಾಮಿ, ಜೀವನ್, ಮೇಲ್ವಿಚಾರಕರಾದ ಪುರುಷೋತ್ತಮ್, ರಮೇಶ್, ಕವಿತಾ ನೇತ್ರ, ಮಂಜುನಾಥ್, ಲತಾ, ರಂಜಿತ್, ಆದಿನಾರಾಯಣ್ ಸೇವಾ ಪ್ರತಿನಿಧಿಗಳು ಸೇವಾದಾರರು ಕೇಂದ್ರದ ಸದಸ್ಯರು ಹಾಜರಿದ್ದರು.

# ಕುಮಾರಸ್ವಾಮಿ ಅವರ ಜನಪರ ಅಭಿವೃದ್ಧಿ ಕೆಲಸಗಳು ಇಂದಿಗು ಜನಮನದಲ್ಲಿ ಆದರ್ಶನೀಯ

**ಶಿಡ್ಲಘಟ್ಟ** : ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು 18 ತಿಂಗಳು ಮುಖ್ಯಮಂತ್ರಿಯಾಗಿದ್ದಾಗ ಮಾಡಿದ ಜನಪರ ಅಭಿವೃದ್ಧಿ ಕೆಲಸಗಳು ಇಂದಿಗು ಜನಮನದಲ್ಲಿ ಆದರ್ಶನೀಯ ಮಾದರಿಯಾಗಿವೆ ಎಂದು ನಗರ ಸಭೆ ಅಧ್ಯಕ್ಷರ ಎಂ.ವಿ.ವೆಂಕಟಸ್ವಾಮಿ ತಿಳಿಸಿದರು. ನಗರದ ಆಶಾಕಿರಣ ಅಂಧ ಮಕ್ಕಳ ಶಾಲೆ ಆವರಣದಲ್ಲಿ ಮಾಜಿ ಮುಖ್ಯಮಂತ್ರಿ ಹಾಗು ಭಾರತ ಸರಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರ 65 ನೇ ಹುಟ್ಟು ಹಬ್ಬವನ್ನು ಕೇಕ್ ಕಟ್ ಮಾಡಿ ಆಶಾಕಿರಣ ಅಂಧ ಮಕ್ಕಳಿಗೆ ಸಾಮೂಹಿಕ ವಾಗಿ ಹೊದಿಕೆಗಳನ್ನು ಹಾಗು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಒಳರೋಗಿಗಳಿಗೆ ಬ್ರೇಡ್ ಹಣ್ಣು ಹಂಪಲುಗಳನ್ನು ವಿತರಣೆ ಮಾಡಿ ಬಿ.ಎನ್.ರವಿಕುಮಾರ್ ಅಭಿಮಾನಿಗಳಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕೇಂದ್ರದ ಎನ್.ಡಿ.ಎ.ಸರ್ಕಾರದಲ್ಲಿ ಮಂತ್ರಿಯಾಗಿರುವ ಅವರು ದೂರದೃಷ್ಟಿ ಯೋಜನೆಗಳನ್ನು ಮಾಡಲು ಪಣತೊಟ್ಟಿದ್ದು ಆ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದಾರೆ ಎಂದರು. ಜೆಡಿಎಸ್ ಮುಖಂಡ ಶಂಕರ್ ಮಾತನಾಡಿ ಕುಮಾರ ಸ್ವಾಮಿ ಅವರು ಮುಖ್ಯಮಂತ್ರಿ ಅವಧಿಯಲ್ಲಿ ರೈತರ ಪರ ವಿಶೇಷವಾದ ಕಾಳಜಿಯನ್ನು ವಹಿಸಿ ರಾಜ್ಯದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿದ ಧೀಮಂತ ನಾಯಕರು ಅವರ ಜನಪರ ಕಾರ್ಯಕ್ರಮಗಳ ಮೂಲಕ ಮನೆ ಮಾತಾಗಿದ್ದರು ಜತೆಗೆ ಚಿಕ್ಕಬಳ್ಳಾಪುರ ಹಾಗು ಕೋಲಾರ ಜಿಲ್ಲೆಗಳಿಗೆ ಅವರು ಕೊಟ್ಟಿರುವ ಕೊಡುಗೆ ಅಪಾರ ಎಂದು ಅವರ ಅವಧಿಯ ಸಾಧನೆಗಳ ಬಗ್ಗೆ ನುಡಿದರು. ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಮಂಜುನಾಥ್,ಲಕ್ಷ್ಮಣ್,ಕೃಷ್ಣಮೂರ್ತಿ,ಸುರೇಶ್ ಮುಖಂಡರಾದ ಮನೋಹರ್,ನವೀನ್, ಗುತ್ತಿಗೆದಾರಮಂಜುನಾಥ್,ರಾಮಚಂದ್ರಪ್ಪ, ಶ್ರೀಧರ್,ಆಸಿಫ್ ನಿಜಾಂ ,ಮಂಜುನಾಥ್, ನರಸಿಂಹಮೂರ್ತಿ, ಪ್ರದೀಪ್, ಶಂಶಿರ್ ಸೇರಿದಂತೆ ಮುಖಂಡರು ಹಾಗು ಕಾರ್ಯಕರ್ತರು ಹಾಜರಿದ್ದರು.

# ಮಕ್ಕಳ ಸ್ನೇಹಿ ಪರಿಸರ ರೂಪಿಸುವುದು ಪ್ರತಿಯೊಬ್ಬರ ಜವಾಬ್ದಾರಿ: ವೆಂಕಟೇಶ್

**ಚಾಮರಾಜನಗರ:** ಪ್ರತಿ ಮಗುವನ್ನು ಮಕ್ಕಳ ಸ್ನೇಹಿ ಪರಿಸರದಲ್ಲಿ ಬೆಳೆಸಿದಾಗ ಮಾತ್ರ ಉತ್ತಮ ಸಮಾಜ ನಿರ್ಮಿಸಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ತಿಳಿಸಿದರು.



ನಗರದ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಎಂಬ ಶೀರ್ಷಿಕೆಯಡಿ ಆರ್.ಟಿ.ಇ ಕಾಯ್ದೆಯ ಅನುಷ್ಠಾನ ಹಾಗೂ ಮಕ್ಕಳೊಂದಿಗೆ ಸಂವಾದ ಮತ್ತು ಅಹವಾಲು ಸ್ವೀಕಾರ ಕಾರ್ಯಕ್ರಮ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳನ್ನು ಉತ್ತಮ ವಾತಾವರಣದಲ್ಲಿ ಬೆಳೆಸಬೇಕು. ಆಗ ಮಾತ್ರ ಸದೃಢ ಸಮಾಜ ನಿರ್ಮಾಣವಾಗಲು ಸಾಧ್ಯವಾಗಲಿದೆ. ಮಕ್ಕಳಿಗೆ ಸಾಮಾಜಿಕ ನ್ಯಾಯ, ಸಹೋದರತ್ವ, ಭ್ರಾತೃತ್ವ ಭಾವನೆಗಳಿಂದ ಕೂಡಿದ ಮೌಲ್ಯಯುತ ಶಿಕ್ಷಣ ನೀಡಬೇಕು. ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಮೂಡಿಸಲು ಶಾಲೆಯಲ್ಲಿ ಶಿಕ್ಷಣದ ಜೊತೆಗೆ ರಕ್ಷಣೆ ಎಂಬ ಶೀರ್ಷಿಕೆಯಡಿ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ ಹಾಗೂ ರಾಜ್ಯ ಸರ್ಕಾರದ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಜೊತೆಗೂಡಿ ರಾಜ್ಯಾದ್ಯಂತ ಆರ್.ಟಿ.ಇ ಕಾಯ್ದೆ ಅನುಷ್ಠಾನದ ಬಗ್ಗೆ ಸಂವಾದ, ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮಕ್ಕಳಿಗೆ ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಮ್ಮುಖದಲ್ಲಿ ಈ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಆರ್.ಟಿ.ಇ ಕಾಯ್ದೆಯು ಮಕ್ಕಳ ಪ್ರತಿಭೆಗಳನ್ನು ಹೊರ ತರಲು ಅನೇಕ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆ ಕಾರ್ಯಕ್ರಮಗಳನ್ನು ನಡೆಸಲು ಅವಕಾಶ ಕಲ್ಪಿಸಿದೆ ಎಂದು ಅವರು ತಿಳಿಸಿದರು.

ಸಂವಿಧಾನದದಲ್ಲಿ ಪ್ರತಿಯೊಬ್ಬರಿಗೂ ಬದುಕುವ ಹಕ್ಕನ್ನು ನೀಡಿದೆ. ವಿಶ್ವಸಂಸ್ಥೆಯಲ್ಲಿ ಮಕ್ಕಳ ಹಕ್ಕುಗಳ ಒಡಂಬಡಿಕೆ ಅಂಗೀಕಾರವಾದ ನಂತರ ದೇಶದಲ್ಲಿ ಮಕ್ಕಳ ಹಕ್ಕು ಕಾಯ್ದೆಗಳಿಗೆ ತಿದ್ದುಪಡಿ ತರಲಾಗಿದೆ. ಅದರಲ್ಲಿ ಬಹಳ ಮುಖ್ಯವಾದದ್ದು ಬಾಲ ನ್ಯಾಯ ಕಾಯ್ದೆ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ ಎಂದು ತಿಳಿಸಿದರು.

ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಕುರಿತು ಮೊದಲ ಬಾರಿಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮಕ್ಕಳೊಂದಿಗೆ ಸಂವಾದ ನಡೆಸಿ ಮಕ್ಕಳ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲಾಗುತ್ತದೆ. ಈ ಸಂವಾದದಲ್ಲಿ ಮಕ್ಕಳ ಪ್ರಶ್ನೆಗಳನ್ನು ಆಧರಿಸಿ ಆಯೋಗದ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಆಯೋಗದ ಸದಸ್ಯರಾದ ವೆಂಕಟೇಶ್ ಹೇಳಿದರು.ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಮಕ್ಕಳೊಂದಿಗೆ ಸಂವಾದ ನಡೆಯಿತು. ಮಕ್ಕಳು ಕೇಳಿದ ಪ್ರಶ್ನೆಗಳಿಗೆ ಜಿಲ್ಲಾಮಟ್ಟದ ಅಧಿಕಾರಿಗಳು ಉತ್ತರಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಉಪನಿರ್ದೇಶಕರಾದ ರಾಮಚಂದ್ರ ರಾಜೇ ಅರಸ್, ಜಿಲ್ಲಾ ಕಾರ್ಮಿಕ ಅಧಿಕಾರಿ ಎಂ. ಸವಿತಾ, ತಾಲೂಕು ವೈದ್ಯಾಧಿಕಾರಿ ಡಾ. ಶ್ರೀನಿವಾಸ್, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ, ಬಾಲನ್ಯಾಯ ಮಂಡಳಿ ಸದಸ್ಯರಾದ ಸರಸ್ವತಿ, ಗಂಗಾಧರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಅರಿವು



**ಶಿರಾ:** ಮಾದಕ ದ್ರವ್ಯಗಳ ಸೇವನೆ ಮತ್ತು ಮಾರಾಟ ಎಲ್ಲವೂ ಶಿಕ್ಷಾರ್ಹ ಅಪರಾಧಗಳಾಗಿವೆ. ಮಾದಕ ವ್ಯಸನಿಗೆ ಸಮಾಜದಲ್ಲಿ ಬೆಲೆಯಿರುವುದಿಲ್ಲ. ವ್ಯಸನಿಗಳ ಶರೀರ ಮತ್ತು ಮನಸ್ಸುಗಳ ಮೇಲೆ ಸ್ವಾಧೀನವಿರುವುದಿಲ್ಲ. ವಿದ್ಯಾರ್ಥಿಗಳು ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಸಮಾಜಕ್ಕೆ ಅರಿವು ಮೂಡಿಸಬೇಕು. ಎಲ್ಲರೂ ವ್ಯಸನಮುಕ್ತ ಭಾರತಕ್ಕಾಗಿ ಪಣ ತೊಡಬೇಕು. ಮಾದಕ ವಸ್ತುಗಳ ಸಾಗಾಟ, ಮಾರಾಟ ಗಮನಕ್ಕೆ ಬಂದಾಗ ಧೈರ್ಯವಾಗಿ ಕಾಲೇಜು ಮುಖ್ಯಸ್ಥರಿಗೆ ಅಥವಾ ಪೊಲೀಸರಿಗೆ ಮಾಹಿತಿ ತಿಳಿಸುವ ಕೆಲಸ ಮಾಡಬೇಕು ಎಂದು ತಾವರೆಕೆರೆ ಪಿಎಸ್‌ಐ ಚಂದ್ರಶೇಖರ್‌ಹೇಳಿದರು.

ಅವರು ತಾಲ್ಲೂಕಿನ ತಾವರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯ ತಾವರೆಕೆರೆ ಗ್ರಾಮದ ಶ್ರೀ ಸಿದ್ದಾರ್ಥ ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿಗಳಿಗೆ ಸೋಮವಾರ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ದಲ್ಲಿ ಮಾತನಾಡಿದರು.

ಮಾದಕ ದ್ರವ್ಯದ ಕುರಿತು ಯುವಜನತೆಗೆ ಅದರಲ್ಲೂ ವಿದ್ಯಾರ್ಥಿಗಳಿಗೆ ಹೆಚ್ಚಿನ ಅರಿವು ಅಗತ್ಯವಾಗಿದೆ. ಮಾದಕ ವ್ಯಸನವು ನಮ್ಮ ಸಮಾಜವನ್ನು ಕಾಡುವ ಅತಿ ದೊಡ್ಡ ಸಮಸ್ಯೆಯಾಗಿದ್ದು, ಮಾದಕ ದ್ರವ್ಯ ಸೇವನೆಯೂ ದೇಹದ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಬೀರ ಬಹುದು. ಈ ನಿಟ್ಟಿನಲ್ಲಿ ಜಾಗೃತಿ ಅಗತ್ಯವಿದೆಎಂದು ವಿವರಿಸಿದರು

ಕಾರ್ಯಕ್ರಮದಲ್ಲಿಕಾಲೇಜಿನ ಪ್ರಾಂಶುಪಾಲರು ಹನುಮಂತರಾಯ,ಹಾಗೂ ಸಹ ಶಿಕ್ಷಕರು ಸೇರಿದಂತೆ ಗ್ರಾಮ ಪಂಚಾಯತಿ ಸದಸ್ಯರು ಹಾಜರಿದ್ದರು..

## ಸುದ್ದಿ ಸಂಜೆ

### ಹಗಲಲ್ಲೂ ಉರಿವ ಬೀದಿ ದೀಪ

ಶಿರಾ: ನಿರ್ವಹಣೆ ಕೊರತೆಯಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಹಗಲು ಹೊತ್ತಿನಲ್ಲಿಯೇ ಬೀದಿ ದೀಪಗಳು ಉರಿಯುತ್ತಿವೆ.ವಿದ್ಯುತ್ ಪೋಲು ತಡೆಗೆ ಸರಕಾರ ಹಲವು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರೂ ಶಿರಾ ನಗರಸಭೆಯಲ್ಲಿ ನಿರ್ವಹಣೆಯಿಲ್ಲದೇ ಹಗಲಿನಲ್ಲಿಯೂ ದೀಪಗಳು ಉರಿದು ವಿದ್ಯುತ್ ಪೋಲಾಗುತ್ತಿವೆ.ಅಧಿಕಾರಿಗಳ ನಿರ್ಲಕ್ಷ್ಯ: ಸಂಜೆ ಆಗುತ್ತಲೇ ಬೀದಿ ದೀಪಗಳು ಬೆಳಗುವಂತೆ ನೋಡಿಕೊಳ್ಳುವುದು ನಿಯಮ. ಆದರೆ, ಶಿರಾದ ಅಮರ ಪುರ ರಸ್ತೆಯ ಕಲ್ಲು ಕೋಟೆ ಪ್ರಮುಖ ರಸ್ತೆಯಲ್ಲಿ ಹಗಲಲ್ಲಿ ಬೆಳಗುತ್ತವೆ. ನಗರಸಭೆ ಮತ್ತು ಬೆಸ್ಕಾಂ ಅಧಿಕಾರಿಗಳು, ಜನಪ್ರತಿನಿಧಿಗಳು ಗಮನಿಸದಿರುವುದು ವಿಪರ್ಯಾಸದ ಸಂಗತಿ ಎಂಬುದು ಸಾರ್ವಜನಿಕರ ಅಭಿಪ್ರಾಯ. ನಿರಂತರ ಉರಿಯುವ ದೀಪಗಳು: ಕಳೆದೊಂದು ವಾರದಿಂದ ನಿರಂತರವಾಗಿ ಹಗಲಲ್ಲಿ ಬೀದಿ ದೀಪಗಳು ಉರಿಯುತ್ತಿವೆ. ಇವುಗಳನ್ನು ನೋಡಿ ಅನೇಕ ಸಲ ಪ್ರಜ್ಞಾವಂತ ನಾಗರಿಕರು ಅಧಿಕಾರಿಗಳಿಗೆ ತಿಳಿಸಿದ್ದಾರೆ. ಸಾರ್ವಜನಿಕರು ಹೇಳಿದ ನಂತರ ಕೆಲವು ಕಂಬಗಳಲ್ಲಿರುವ ವಿದ್ಯುತ್ ದೀಪ ಕಟ್ ಮಾಡಿದ್ದಾರೆ ವಿನಃ ಸರಿಯಾದ ವ್ಯವಸ್ಥೆ ಮಾಡಿಲ್ಲ ಎನ್ನುತ್ತಾರೆ ಸ್ಥಳೀಯ ನಾಗರೀಕರು

### ಅರಾಧನಾ ಸಮಿತಿ ಸದಸ್ಯರಾಗಿ ಮೇಘರಾಜ್ ಬಳಗೇರಿ ನೇಮಕ



**ಕುಕನೂರು:** ಯಲಬುರ್ಗಾ ವಿಧಾನ ಸಭಾ ಕ್ಷೇತ್ರದ ಆರಾಧನಾ ಯೋಜನೆಯ ಅನುಷ್ಠಾನ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರಾಗಿ ಬಂಜಾರ ಸಮುದಾಯದ ಯುವ ನಾಯಕ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಯುವ ಧುರೀಣ ಮೇಘರಾಜ್ ಬಳಗೇರಿ ಅವರನ್ನು ನೇಮಿಸಲಾಗಿದೆ. ಧಾರ್ಮಿಕ ದತ್ತಿ ಇಲಾಖೆಗೆ ಒಳಪಡುವ ದೇವಸ್ಥಾನಗಳ ನಿರ್ವಹಣೆ, ಆಡಳಿತ, ಉಸ್ತುವಾರಿಗಳನ್ನೊಳಗೊಂಡ ಆರಾಧನಾ ಅನುಷ್ಠಾನ ಸಮಿತಿಯು 8 ಜನ ಸದಸ್ಯರನ್ನು ಒಳಗೊಂಡಿರುತ್ತದೆ. ಸರಕಾರದ ಅಧಿಕಾರಿಗಳು, ಸರಕಾರೇತರ ಸದಸ್ಯರು ಇದ್ದು ಸಮಿತಿಗೆ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಸದಸ್ಯರು ಅಧ್ಯಕ್ಷರಾಗಿರುತ್ತಾರೆ. ವಿಧಾನಸಭಾ ಕ್ಷೇತ್ರಗಳಲ್ಲಿ ಬರುವ ಧಾರ್ಮಿಕ ದತ್ತಿ ಇಲಾಖೆಯ ದೇವಸ್ಥಾನಗಳ ಅಭಿವೃದ್ಧಿ ಕಾರ್ಯಕ್ಕೆ ಆರಾಧನಾ ಯೋಜನೆಯ ಅನುಷ್ಠಾನ ಸಮಿತಿನೆರವಾಗುತ್ತಾದೆ.

### ಪುನರ್ ವಿಂಗಡಣೆಗೆ ಆಗ್ರಹ



ಚೇಳೂರು: ನೂತನ ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಒಕ್ಕೂಟದ ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಚೇಳೂರು- ಮಂಚೇನಹಳ್ಳಿ ತಾಲ್ಲೂಕುಗಳಿಗೆ ಪ್ರತ್ಯೇಕ ನಿರ್ದೇಶಕರುಗಳ ಸ್ಥಾನಗಳು ನೀಡಿ ಕ್ಯಾಂಪ್ ಆಫೀಸ್ ಮಂಜೂರಾತಿ ನೀಡಬೇಕೆಂದು ಚಿಕ್ಕಬಳ್ಳಾಪುರ ಜಿಲ್ಲಾ ಗಾಣಿಗ ಕ್ಷೇಮಾಭಿವೃದ್ಧಿ ಒಕ್ಕೂಟದ ಸದಸ್ಯರಾದ ಚೇಳೂರು ಜೆ.ಕೆ.ಆನಂದ್ ರವರು ರಾಜ್ಯ ಸರಕಾರವನ್ನು ಒತ್ತಾಯಿಸಿದ್ದಾರೆ. ಅವರು ಚೇಳೂರು ಪ್ರವಾಸಿ ಮಂದಿರದಲ್ಲಿ ಮಾತನಾಡಿ ಜಿಲ್ಲೆಯಲ್ಲಿ 6 ತಾಲ್ಲೂಕುಗಳಿದ್ದು ಜೊತೆಗೆ ನೂತನ ತಾಲ್ಲೂಕುಗಳಾದ ಚೇಳೂರು ಮಂಚೇನಹಳ್ಳಿ ಅಸ್ತಿತ್ವಕ್ಕೆ ಬಂದಿದ್ದು ಇದರ ಪ್ರಕಾರ 8 ತಾ.ಗಳಾಗಿವೆ. ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಒಕ್ಕೂಟದ ನಾಮಕರಣಗೊಂಡ ಮೇಲೆ ಹಾಲಿ ಜಿಲ್ಲೆಯ 6 ತಾ.ಗಳಿಂದ 6 ನಿರ್ದೇಶಕರು ಹಾಗೂ 1 ಮಹಿಳಾ ಸ್ಥಾನ ಇದ್ದು ನೂತನ ತಾಲ್ಲೂಕುಗಳಿಗೆ ಹಾಲಿ ಜಿಲ್ಲೆಯಲ್ಲಿ ಇರುವ 850 ಹಾ.ಉ.ಸ.ಸಂಘಗಳು ಸಮಾನಂತರವಾಗಿ 100 ರಿಂದ 120 ಪ್ರಾಥಮಿಕ ಸಹಕಾರ ಸಂಘಗಳು ಜಿಲ್ಲೆಯ ಪ್ರತಿ ತಾಲ್ಲೂಕಿಗೂ ಹಂಚಿಕೆ ಮಾಡುವ ಅವಕಾಶ ಇದೆ. ಪ್ರತ್ಯೇಕ ಹಾಲು ಒಕ್ಕೂಟ ರಚನೆಗೆ ಬಳಿಕ ಕ್ಷೇತ್ರ ವಿಂಗಡಣೆ ವಿಚಾರದಲ್ಲಿ ರಾಜಕೀಯ ಲೆಕ್ಕಾಚಾರದ ಚರ್ಚೆ ನಡೆಯುತ್ತಿದೆ ಸಹಕಾರಿ ಕಾಯ್ದೆ ಅನ್ವಯ ಜಿಲ್ಲೆಯಲ್ಲಿ ತಾಲ್ಲೂಕಿಗೆ ಒಬ್ಬರಂತೆ 8 ನಿರ್ದೇಶಕರನ್ನು 4 ತಾಲ್ಲೂಕುಗಳಿಗೆ ಒಬ್ಬರಂತೆ ಇಬ್ಬರೂ ಮಹಿಳಾ ಸ್ಥಾನವನ್ನ ವಿಂಗಡಿಸಿ ಹೆಚ್ಚುವರಿ ಕ್ಷೇತ್ರ ಮಾಡಿದ್ದಲ್ಲಿ ಆರ್ಥಿಕ ನಷ್ಟ ಮತ್ತು ದುಂದು ವೆಚ್ಚ ಹೊರೆ ಬೀಳಲಿದೆ. ಮಂಚೇನಹಳ್ಳಿ ತಾಲ್ಲೂಕುಗಳಿಗೆ ನಿರ್ದೇಶಕರ ಸ್ಥಾನ ಗಳು ಮೀಸಲಿಡಲಾಗುತ್ತಿದೆ ಎಂಬುದು ತಿಳಿದು ಬಂದಿದ್ದರಿಂದ ನೂತನ ತಾಲ್ಲೂಕುಗಳಾದ ಚೇಳೂರು ಮತ್ತು ಮಂಚೇನಹಳ್ಳಿಗೆ ಇಬ್ಬರು ನಿರ್ದೇಶಕರನ್ನು ಆಯ್ಕೆ ಮಾಡಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡಿ ಹಾಲಿನ ಡೈರಿಗಳನ್ನು ಅಭಿವೃದ್ಧಿ ಮಾಡಲು ಸರಕಾರ ಸಹಕಾರ ನೀಡಲು ಮನವಿ ಮಾಡಿದ್ದಾರೆ.

# ಗೌರವಧನ ನೀಡಲು ಬೇಕಿಲ್ಲದ ಯುಜಿಸಿ ನಿಯಮಾವಳಿ
# ಅತಿಥಿ ಉಪನ್ಯಾಸಕ ನೇಮಕಾತಿಗೆ ಏಕೆ? ಜಿಲ್ಲಾಧ್ಯಕ್ಷ ಮುನಿರಾಜು ಎಂ.ಅರಿಕೆರೆ

**ಚಿಕ್ಕಬಳ್ಳಾಪುರ:** ಹೆಚ್ಚುವರಿ ಕಾರ್ಯಭಾರದ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ ಸರಿಯಾಗಿ ಗೌರವಧನ ನೀಡಲು ಮೀನಾಮೇಷ ಎಣಿಸುವ ಕಾಲೇಜು ಶಿಕ್ಷಣ ಇಲಾಖೆ,ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯುಜಿಸಿ ನಿಯಮಾವಳಿ ಅನ್ವಯಿಸಲು ಹೊರಟಿರುವುದು ಏಕೆ ಎಂದು ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಅರಿಕೆರೆ ಮುನಿರಾಜ ಪ್ರಶ್ನಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಅತಿಥಿ ಉಪನ್ಯಾಸಕರ ಸಂಘದ ವತಿಯಿಂದ ನಡೆಸಿದ ಸುದ್ದಿ ಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರ ಬಗ್ಗೆ ಮಾನವೀಯ ಅಂತಃಕರಣವುಳ್ಳ ಅಧಿಕಾರಿ ಮತ್ತು ಸಿಬ್ಬಂದಿಯ ಕೊರತೆಯಿದೆ ಎಂಬ ಅನುಮಾನವಿದೆ. ಏಕೆಂದರೆ ಪ್ರತಿವರ್ಷ ಅತಿಥಿ ಉಪನ್ಯಾಸಕರ ನೇಮಕಾತಿ ಪ್ರಕ್ರಿಯೆ ನಡೆಯುವಾಗಲೆಲ್ಲಾ ಅನಗತ್ಯವಾಗಿ ಹೊಸ ಹೊಸ ನಿಯಮಾವಳಿ ತಂದು ನೊಂದಿರುವ ನಮಗೆ ಅನಗತ್ಯ ಆಘಾತವನ್ನು ಉಂಟು ಮಾಡುತ್ತಿದ್ದಾರೆ.ಇದನ್ನು ನಿಲ್ಲಿಸಿ ಒಮ್ಮೆ ನೇಮಕಾತಿ ಹೊಂದಿದವರನ್ನು ನಿವೃತ್ತಿ ಆಗುವವರೆಗೆ ಮುಂದುವರೆಸಲು ಕ್ರಮವಹಿಸಬೇಕು ಎಂದು ಆಗ್ರಹಿಸಿದರು.



ನೇಮಕಾತಿಗೆ ಮಾತ್ರ ಯುಜಿಸಿ ನಿಯಮಾವಳಿ ಅನ್ವಯಿಸುವ ಸರ್ಕಾರ ಮತ್ತು ಇಲಾಖೆ ಗೌರವ ಧನ ನೀಡುವಲ್ಲಿ ಕೂಡ ಯುಜಿಸಿ ನಿಯಮಾವಳಿಯಂತೆ ನಡೆದುಕೊಳ್ಳಬೇಕಲ್ಲ ಎಂದು ಪ್ರಶ್ನಿಸಿದ ಅವರು ಯುಜಿಸಿ ಪ್ರಾಧ್ಯಾಪಕರಿಗೆ ತಿಂಗಳ ಮೊದಲಲ್ಲೇ ವೇತನ ಬಿಡುಗಡೆ ಮಾಡಲು ಮಾತ್ರ ಇಲಾಖೆ ಬಳಿ ಅನುದಾನ ಇರುತ್ತದೆ. ಆದರೆ ಆತಿಥಿ ಉಪನ್ಯಾಸಕರಿಗೆ ಗೌರವ ಧನ ನೀಡುವಾಗ ಇರುವುದಿಲ್ಲವೆ?

ವೇತನ ತಾರತಮ್ಯ ಮಾಡುತ್ತಿರುವುದೇಕೆ..?ಗೌರವಧನವನ್ನೇ ನಂಬಿ ಜೀವನ ನಡೆಸುವ ಅತಿಥಿ ಉಪನ್ಯಾಸರಿಗೆ ಗೌರವ ಧನ ನೀಡುವಲ್ಲಿ ಎಸಗುತ್ತಿರುವ ತಾರತಮ್ಯ ಕೂಡಲೇ ನಿಲ್ಲಸಬೇಕು.15 ದಿನಗಳಿಗೆ ಮಾತ್ರ ಗೌರವಧನ ನೀಡಿರುವುದು ಸರಿಯಲ್ಲ ಇಲಾಖೆಯ ಇಂತಹ ನಡೆಯನ್ನು ಅತಿಥಿ ಉಪನ್ಯಾಸಕರ ಸಂಘ ಸಹಿಸುವುದಿಲ್ಲ ಎಂದರು.

ಗೌರವಾಧ್ಯಕ್ಷ ಸದಾಶಿವ ಮಾತನಾಡಿ 2024ರ ಜನವರಿಯಲ್ಲಿ ನಡೆದ ಮುಷ್ಕರದ ಸಂದರ್ಭದಲ್ಲಿ ಸರ್ಕಾರ ವಾಗ್ದಾನ ನೀಡದಂತೆ ನಿವೃತ್ತಿ ಆಗುವ ಅಥಿತಿ ಉಪನ್ಯಾಸಕರಿಗೆ 5 ಲಕ್ಷ ಇಡಿಗಂಟನ್ನು ಈವರೆಗೂ ಕೊಟ್ಟಿಲ್ಲ. ಈ ಕೂಡಲೇ ನಿವೃತ್ತರಾದವರ ಪಟ್ಟಿ ತಯಾರಿಸಿ ಇಡುಗಂಟನ್ನು ಕೂಡಲೇ ಬಿಡುಗಡೆ ಮಾಡಬೇಕು. ಅತಿಥಿ ಉಪನ್ಯಾಸಕರಿಗೆ ವಾರ್ಷಿಕ ಐದು ಲಕ್ಷ ಆರೋಗ್ಯ ವಿಮೆ ನೀಡುವುದಾಗಿ ಹೇಳಿತ್ತು.ಅದೂ ಕೂಡ ಒಂದು ವರ್ಷವಾದರೂ ಜಾರಿಯಾಗಿಲ್ಲ.

ಮಹಿಳಾ ಅಥಿತಿ ಉಪನ್ಯಾಸರಿಗೆ ಹೆರಿಗೆ ಸಂದರ್ಭದಲ್ಲಿ ಮೂರು ತಿಂಗಳ ವೇತನ ಸಹಿತ ರಜೆ ನೀಡುವ ವಿಚಾರದಲ್ಲಿ ಕೂಡ ಇದುವರೆಗೂ ಸ್ಪಷ್ಟ ಆದೇಶ ಆಗಿಲ್ಲಾ. ಯುಜಿಸಿ ಉಪನ್ಯಾಸಕರಿಗೆ ಸಮಾನವಾಗಿ ಕೆಲಸ ಪಡೆಯುವ ಕಾಲೇಜು ಶಿಕ್ಷಣ ಇಲಾಖೆ, ಸಮಾಜ ಕೆಲಸಕ್ಕೆ ಸಮಾನ ವೇತನ ನೀಡುವುದನ್ನೇ ಮರೆತಿದೆ.ಬದಲಿಗೆ ವೇತನ ಹೆಚ್ಚುವರಿ ಎಂಬ ತುಪ್ಪವನ್ನು ಮೂಗಿಗೆ ಸವರಿ ನಮ್ಮ ನಮ್ಮಲ್ಲೇ ಅರ್ಹರು, ಅನರ್ಹರು ಎಂಬ ಬೇಧಭಾವ ಮಾಡಿ ಅನಾರೋಗ್ಯಕರ ಸ್ಪರ್ಧೆಗೆ ಅವಕಾಶ ಮಾಡಿ ಪರಸ್ಪರ ಕಚ್ಚಾಡುವಂತೆ ಮಾಡಿದೆ. 20-25 ವರ್ಷ ಕಾಲ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರಿಗೆ ಹೊಸದಾಗಿ ಯುಜಿಸಿ ನಿಯಮಾವಳಿ ಅನ್ವಯಿಸಲು ಹೊರಡಿರುವುದು ಸರ್ವಥಾ ಸರಿಯಲ್ಲಾ. ಈ ನಡೆಯನ್ನು ಕೂಡಲೇ ಕೈಬಿಟ್ಟು ಒಟ್ಟು ಅತಿಥಿ ಉಪನ್ಯಾಸಕರ ಹಿತಕಾಯಲಿ ಎಂದು ಆಗ್ರಹಿಸಿದರು.

ವೇದಿಕೆಯಲ್ಲಿ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೆಂಕಟರಮಣ,ಜಿಲ್ಲಾ ಪದಾಧಿಕಾರಿಗಳಾದ ರಾಘವೇಂದ್ರ,ಸತ್ಯನಾರಾಯಣ, ವೆಂಕಟೇಶ್, ಗಂಗಾಧರಪ್ಪ ಇದ್ದರು.

**24 ವರ್ಷಗಳಿಂದ ಅತಿಥಿ ಉಪನ್ಯಾಸಕನಾಗಿಯೇ ದುಡಿದಿರುವ ನಾನು ಇಲಾಖೆಯ ಅವೈಜ್ಞಾನಿಕ ತೀರ್ಮಾನ, ಅಮಾನವೀಯ ನಡೆ, ಮತ್ತು ಅಭದ್ರತೆಯೆಂಬ ಬಳುವಳಿಯ ಕಾರಣ 52 ವರ್ಷ ವಯಸ್ಸಾದರೂ ಮಧುವೆ ಆಗಿಲ್ಲ. ನನಗೆ ಬರುವ ಅಲ್ಪ ಗೌರವಧನದಲ್ಲಿ ನನ್ನನ್ನು ಸಾಕಿಕೊಳ್ಳುವುದೇ ಕಷ್ಟವಾಗಿರುವಾಗ,ಬಾಳಸಂಗಾತಿಗೆ ಹೊಸಬಾಳ ಹೇಗೆ ಕೊಡಲಿ ಹೇಳಿ? ಎಂದ ಅವರು ನಾನು ಅಂಗವಿಕಲ ಆಗಿದ್ದರೂ ಪ್ರತಿ ಬಾರಿ ನೇಮಕಾತಿಯಲ್ಲಿ ರಾಜ್ಯಕ್ಕೆ 2ನೇ ರ್‍ಯಾಂಕ್‌ನಲ್ಲಿದ್ದೇನೆ.ಆದರೂ ನನಗೆ ಪೂರ್ಣ ಕಾರ್ಯಭಾರವಿಲ್ಲದೆ ಕೇವಲ 7 ಗಂಟೆಗೆ ದುಡಿಯುತ್ತಿದ್ದೇನೆ.10-12ಸಾವಿರ ಪಡೆದು ಬದುಕುವುದಾದರೂ ಹೇಗೆ?ಎಂಬುದನ್ನು ಇಲಾಖೆ ಅರ್ಥ ಮಾಡಿಕೊಳ್ಳಬೇಕು.ಭಾಗ್ಯಗಳ ಸರದಾರ ಸಿದ್ದರಾಮಣ್ಣ ಅತಿಥಿ ಉಪನ್ಯಾಸಕರಿಗೆ ಸೇವೆ ಖಾಯಂ ಭಾಗ್ಯ ನೀಡಲಿ,ತಿಂಗಳ ಮೊದಲಲ್ಲೇ ಗೌರವಧನ ಬಿಡುಗಡೆ ಮಾಡಲಿ ಎಂದರು.**

**- ಹಿರಿಯ ಅತಿಥಿ ಉಪನ್ಯಾಸಕ ಮಂಜುನಾಥ್**

# ವಿಜೃಂಭಣೆಯ ಶ್ರೀ ಮಳ್ಳೂರಾಂಭ ದೇವಿಯ ಬ್ರಹ್ಮ ರಥೋತ್ಸವ



**ಶಿಡ್ಲಘಟ್ಟ :** ತಾಲ್ಲೂಕಿನ ಕಸಬಾ ಹೋಬಳಿಯ ದೇವರುಗಳ ತವರೂರು ದೇವರಿಗೆ ಮಡಿಲು ತುಂಬಿದ ಊರೆಂದೇ ಹೆಸರಾದ ದೇವರಮಳ್ಳೂರು ಗ್ರಾಮದಲ್ಲಿ ಗ್ರಾಮ ದೇವತೆ ಶ್ರೀ ಮಳ್ಳೂರಾಂಭ ದೇವಿಯ ಬ್ರಹ್ಮ ರಥೋತ್ಸವವು ಶ್ರದ್ಧಾ ಭಕ್ತಿಯಿಂದ ಸಡಗರ ಸಂಭ್ರಮ ದಿದಲೂ ಆಚರಿಸಲಾಯಿತು. ನಾನಾ ಕಡೆಯಿಂದ ಆಗಮಿಸಿದ್ದ ಸಾವಿರಾರು ಭಕ್ತರು ತಾಯಿಯ ದರ್ಶನ ಪಡೆದು ಬ್ರಹ್ಮರಥೋತ್ಸವಕ್ಕೆ ಸಾಕ್ಷಿಯಾದರು.

ತಾಲ್ಲೂಕಿನ ದೇವರಮಳ್ಳೂರು ಗ್ರಾಮದ ಗ್ರಾಮ ದೇವತೆ ಶ್ರೀಮಳ್ಳೂರಾಂಭ ದೇವಿಯ ಬ್ರಹ್ಮರಥೋತ್ಸವವು ವಿಜೃಂಭಣೆಯಿಂದ ನಡೆಯಿತು, ಸುತ್ತ ಮುತ್ತಲ ಗ್ರಾಮಗಳಿಂದ ಆಗಮಿಸಿದ್ದ ಸಹಸ್ರಾರು ಸಂಖ್ಯೆಯ ಭಕ್ತರು ಬ್ರಹ್ಮರಥೋತ್ಸವದಲ್ಲಿ ಪಾಲ್ಗೊಂಡು ತಾಯಿ ಮಳ್ಳೂರಾಂಭ ದೇವಿಯ ದರ್ಶನ ಪಡೆದರು.

ಅಲಂಕೃತ ರಥದಲ್ಲಿ ಶ್ರೀಮಳ್ಳೂರಾಂಭ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ದೇವಾಲಯದ ಸುತ್ತಲೂ ಪ್ರದಕ್ಷಿಣೆ ಹಾಕುವ ಮೂಲಕ ರಥೋತ್ಸವಕ್ಕೆ ಪೂಜೆ ಸಲ್ಲಿಸುವ ಮೂಲಕ ಕ್ಷೇತ್ರದ ಶಾಸಕ ಬಿ.ಎನ್.ರವಿಕುಮಾರ್ ಹಾಗೂ ಉಪ ತಹಸೀಲ್ದಾರ್ ಪೂರ್ಣಿಮಾ ಚಾಲನೆ ನೀಡಿದರು.

ಶಾಸಕರಾದ ಮೇಲೂರು ಬಿ.ಎನ್.ರವಿಕುಮಾರ್ ಮಾತನಾಡಿ ಸಾದಲಿಯ ಸಾದಲಮ್ಮತಾಯಿ, ಮೈಸೂರಿನ ಚಾಮುಂಡೇಶ್ವರಿ ತಾಯಿ, ದೇವರಮಳ್ಳೂರಿನ ಮಳ್ಳೂರಾಂಭ ದೇವಿಯು ಸಮಾನ ಕಾಲದ ದೇವತೆಗಳಾಗಿದ್ದು, ನಾಡನ್ನು ಕಾಯುತಿರುವ ಶಕ್ತಿ ದೇವತೆಗಳು ಎಂದು ಇತಿಹಾಸ ಪ್ರಸಿದ್ಧ ದೇವರಗಳ ಬಗ್ಗೆ ಮನನ ಮಾಡಿದರು.

ಕಾಲ ಕಾಲಕ್ಕೆ ಮಳೆ ಬೆಳೆಯಾಗಿ ಈ ನಾಡಿನ ಎಲ್ಲಾ ರೈತರು ಹಾಗು ಬಡವರ ಬದುಕಿಲ್ಲಿ ಎಲ್ಲವೂ ಒಳ್ಳೆಯದಾಗಲಿ, ಉತ್ತಮ ಬದುಕು ನೆಮ್ಮೆಲ್ಲರದ್ದಾಗಲಿ ಎಂದು ತಾಯಿ ಮಳ್ಳೂರಾಂಭ ದೇವಿಯಲ್ಲಿ ಪ್ರಾರ್ಥಿಸಿದ್ದು, ಎಲ್ಲಾರ ಬದುಕು ಹಸನಾಗಲಿ ಎಂದು ಆಶಿಸಿದರು.

ಉತ್ಸವ ಮೂರ್ತಿಗಳನ್ನೊತ್ತ ದೇವಾಲಯದ ಸುತ್ತಲೂ ಮೂರು ಸುತ್ತು ಪ್ರದಕ್ಷಿಣೆ ಮಾಡಿದ ನಂತರ ಊರಿನ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ರಸ್ತೆಯ ಅಕ್ಕಪಕ್ಕದಲ್ಲಿ ನಿಂತು ರಥೋತ್ಸವದ ವೈಭವವನ್ನು ಕಣ್ತುಂಬಿಕೊಂಡರು. ಭಕ್ತಿಯಿಂದ ಪೂಜೆ ಸಲ್ಲಿಸಿ ನಮಿಸಿದರು.

ತಮಟೆ, ವೀರಗಾಸೆ, ಡೊಳ್ಳು ಕುಣಿತ ಇನ್ನಿತರೆ ಜನಪದ ಕಲಾ ತಂಡಗಳು ಬ್ರಹ್ಮ ರಥೋತ್ಸವದ ಮೆರವಣಿಗೆಗೆ ಇನ್ನಷ್ಟು ಮತ್ತಷ್ಟು ಕಳೆ ಕಟ್ಟಿದ್ದವು.ಜಾತ್ರೆಯಲ್ಲಿ ವಿಶೇಷವಾದ ಬರಗು, ಬತಾಸು, ಜಿಲೇಬಿ ಅಂಗಡಿಗಳು, ಪೀಪಿ, ತುತ್ತೂರಿ,ಬೊಂಬೆ ಇನ್ನಿತರೆ ಮಕ್ಕಳ ಆಟಿಕೆಗಳ ಅಂಗಡಿಗಳು ತಲೆ ಎತ್ತಿದ್ದು ಭರ್ಜರಿ ವ್ಯಾಪಾರವೂ ನಡೆದಿತ್ತು. ಚಳಿಯನ್ನೂ ಲೆಕ್ಕಿಸದೆ ಐಸ್ ಕ್ರೀಂ ತಿಂದವರೂ ಇದ್ದರು ಕಲ್ಲಂಗಡಿಯ ಸವಿಯನ್ನು ಸವಿದವರಿಗೇನು ಕಡಿಮೆಯಿರಲಿಲ್ಲ, ಸಾವಿರಾರು ಭಕ್ತರಿಗೆ ಅನ್ನ ಸಂತರ್ಪಣೆ ಯನ್ನು ಸಂಘಟಕರಿಂದ ಹಮ್ಮಿಕೊಳ್ಳಲಾಗಿತ್ತು.

ಜಾತ್ರಾ ಮಹೋತ್ಸವದಲ್ಲಿ ಉಪ ತಹಸೀಲ್ದಾರ್ ಪೂರ್ಣಿಮಾ,ಸಿಪಿಐ ಎಂ.ಶ್ರೀನಿವಾಸ್,ದೇವಾಲಯ ಸಮಿತಿಯ ಅಧ್ಯಕ್ಷ ವಕೀಲ ಮುನಿರಾಜುಗೌಡ, ಸುಬ್ರಮಣ್ಯಪ್ಪ, ವೇಣುಗೋಪಾಲ್, ದೇವರಮಳ್ಳೂರು ಗ್ರಾಮ ಪಂಚಾಯತಿ ಅಧ್ಯಕ್ಷೆ ಸುಶೀಲಮ್ಮ ಮುನಿಸ್ವಾಮಿ, ಸದಸ್ಯ ವೆಂಕಟೇಶ್ ಚಕ್ರವರ್ತಿ, ಮುಖಂಡರಾದ ಬಂಕ್ ಮುನಿಯಪ್ಪ,ಬಿಜೆಪಿ ಮುಖಂಡ ಸೀಕಲ್ ಆನಂದಗೌಡ ,ತಾದೂರು ರಘು, ನಗರಸಭೆ ಸದಸ್ಯರಾದ ನಾರಾಯಣಸ್ವಾಮಿ, ಸುರೇಂದ್ರಗೌಡ,ರೆಡ್ಡಿ ಸ್ವಾಮಿ ಜಗದೀಶ್ ಮತ್ತಿತರರು ಭಾಗವಹಿಸಿದ್ದರು.

## ಒರಿಗಾಮಿ ಮಕ್ಕಳ ಕಲಿಕೆಗೆ ಸಹಕಾರಿ




**ಚಾಮರಾಜನಗರ :** ಕಲೆಯ ಮೂಲಕ ಓರಿಗಾಮಿ ಮಕ್ಕಳ ಕಲಿಕೆಗೆ ಸಹಕಾರಿಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಹನುಮ ಶೆಟ್ಟಿ ಹೇಳಿದರು. ಅವರು ಇಲ್ಲಿಗೆ ಸಮೀಪದ ಮಲ್ಲಯ್ಯನಪುರದಲ್ಲಿರುವ ಆದರ್ಶ ವಿದ್ಯಾಲಯದಲ್ಲಿ ರಂಗವಾಹಿನಿ ಸಂಸ್ಥೆ ಶಾಲಾ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ಓರಿಗಾಮಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.ಓರಿಗಾಮಿ ಎಂಬುದು ಕಾಗದದ ಕಲೆಯ ಒಂದು ರೂಪವಾಗಿದೆ.ಇದು ಜಪಾನಿ ಕಲೆ, ಈ ಕಲಾ ಪ್ರಕಾರವು ಶ್ರೀಮಂತ ಇತಿಹಾಸವನ್ನು ಹೊಂದಿದೆ. ಓರಿಗಾಮಿ ವಿವಿಧ ಶೈಲಿಗಳ ಮೂಲಕ ಪ್ರಪಂಚಾದ್ಯಂತ ಜನರನ್ನು ಆಕರ್ಷಿಸುತ್ತದೆ. ಇದರಿಂದ ಮಕ್ಕಳಲ್ಲಿ ಸೃಜನಶೀಲತೆ ಹೆಚ್ಚುತ್ತದೆ ಎಂದರು. ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಓರಿಗಾಮಿ ತಜ್ಞರಾದ ಹೆಚ್ ವಿ ಮುರುಳಿಧರ ಮಾತನಾಡಿ, ಓರಿ ಎಂದರೆ ಮಡಿಸಿದ ಗಾಮಿ ಎಂದರೆ ಕಾಗದ ಎಂಬ ಅರ್ಥ.ಇದು ಒಂದು ಜಪಾನ್ ಕಲೆ. ಓರಿಗಾಮಿ ಕಲೆಯ ಮೂಲಕ ಕಲಿಕೆ. ಕಲೆಯಿಂದ ಮಕ್ಕಳಲ್ಲಿ ಭಾಷೆ ಪರಿಸರ ಅಧ್ಯಯನ ಗಣಿತ ಕಲಿಕೆಯಲ್ಲಿ ಜ್ಞಾನ ಹೆಚ್ಚಾಗುತ್ತದೆ. ಓರಿಗಾಮಿ ತತ್ವಗಳ ಅನ್ವಯಗಳು ಪೀಠೋಪಕರಣ ವಿನ್ಯಾಸ , ಗೃಹಲಂಕಾರ, ವಾಸ್ತುಶಿಲ್ಪ ಅನುಷ್ಠಾನದ ಕಲೆ, ರೋಬೋಟಿಕ್ಸ್ ವಿನ್ಯಾಸ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಪರಿಹಾರಗಳಿಗೆ ಇದು ವಿಸ್ತರಿಸಿದೆ. ಇದರಿಂದ ಮಕ್ಕಳಲ್ಲಿರುವ ಸೃಜನಶೀಲತೆಯನ್ನು ಹೆಚ್ಚಿಸಿ ಮಕ್ಕಳನ್ನು ಬುದ್ಧಿವಂತರನ್ನಾಗಿ ಮಾಡುತ್ತದೆ ಎಂದರು. ರಂಗವಾಹಿನಿಯ ಅಧ್ಯಕ್ಷ ಸಿಎಂ ನರಸಿಂಹಮೂರ್ತಿ ಪ್ರಾಸ್ತಾವಿಕ ಭಾಷಣ ಮಾಡಿದರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಮಹದೇವಸ್ವಾಮಿ, ಕನ್ನಡ ಅಧ್ಯಾಪಕರಾದ ಶಿವಕುಮಾರ , ಆರ್ಕಪ್ಪ , ಗಣಿತ ಅಧ್ಯಾಪಕರಾದ ಶಾಲಿನಿ, ಮತ್ತಿತರರು ಭಾಗವಹಿಸಿದ್ದರು. ವಿದ್ಯಾರ್ಥಿಗಳು ಓರಿಗಾಮಿಯ ವಿವಿಧ ಕಲಾ ಕೃತಿ ರಚಿಸಿ ಗಣ್ಯರಿಂದ ಮೆಚ್ಚುಗೆಗೆ ಪಾತ್ರರಾದರು.

## ಪರಿಹಾರ ವಿತರಣೆ ಮಾಡಬೇಕೆಂದು ಸಚಿವರಿಗೆ ಮನವಿ



**ಮುಳಬಾಗಿಲು:** ಚಂಡಮಾರುತ ಜಡಿ ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ವಿಶೇಷ ತಂಡ ರಚನೆ ಮಾಡಿ ಪ್ರತಿ ಎಕರೆಗೆ 3 ಲಕ್ಷ ಪರಿಹಾರ ವಿತರಣೆ ಮಾಡಬೇಕೆಂದು ರೈತ ಸಂಘದಿಂದ ತೋಟಗಾರಿಕೆ ಅಧಿಕಾರಿ ಶ್ರೀನಿವಾಸ್ ಮುಖಾಂತರ ಸಚಿವರಿಗೆ ಮನವಿ ನೀಡಿ ಒತ್ತಾಯಿಸಲಾಯಿತು.


ರೈತರ ಬದುಕು ದಿನೇ ದಿನೇ ದುಸ್ತರವಾಗುತ್ತಿದೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆಯುತ್ತಿರುವ ಬೆಳೆಗೆ ರೋಗ ಒಂದುಕಡೆಯಾದರೆ ಮತ್ತೊಂದು ಕಡೆ ರೋಗ ನಿಯಂತ್ರಣಕ್ಕೆ ಬಂದರೆ ಅತಿವೃಷ್ಠಿ ಅನಾವೃಷ್ಠಿ ಹಾವಳಿಗೆ ಸಿಲುಕಿ ರೈತರ ನೆಮ್ಮದಿಯನ್ನು ಕಸಿದುಕೊಳ್ಳುತ್ತಿದ್ದರು ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವಲ್ಲಿ ಸರ್ಕಾರ ವಿಪಲವಾಗಿದೆ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಸರ್ಕಾರಗಳ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.

90 ದಿನಗಳ ಪರಿಶ್ರಮ ರಾತ್ರಿ ಹಗಲು ನಿದ್ದೆ ಇಲ್ಲದೆ ಮನೆ ಮಕ್ಕಳಂತೆ ಬೆಳೆಸಿದ್ದ ಟೊಮೋಟೊ, ಕ್ಯಾಪ್ಸಿಕಂ, ಮತ್ತಿತರ ಸಾವಿರಾರು ಹೆಕ್ಟರ್ ವಾಣಿಜ್ಯ ಬೆಳೆಗಳು ಸಮೃದ್ದವಾಗಿ ಉತ್ತಮ ಪಸಲು ಬಂದು ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಇದ್ದು, ತಮ್ಮ ಕಷ್ಟವೆಲ್ಲಾ ಪರಿಹಾರ ವಾಗುತ್ತಿದೆ ಎಂಬ ನಿರೀಕ್ಷೆಯಲ್ಲಿದ್ದ ರೈತರ ಬಾಳಿಗೆ ಬಂಗಾಳಕೊಲ್ಲಿ ವಾಯುಬಾರ ಕುಸಿತ ಬೆಂಕಿ ಇಟ್ಟು ಜಡಿ ಮಳೆಯಿಂದ ಸಂಪೂರ್ಣವಾಗಿ ಕಣ್ಣುಂದೆಯೇ ಬೆಳೆ ಪಸಲು ನಾಶವಾಗಿ ಹಾಕಿದ ಬಂಡವಾಳ ಕೈಗೆ ಸಿಗುತ್ತಿಲ್ಲ, ಮಾಡಿದ ಸಾಲ ತೀರಿಸಲಾಗದೆ ಸರ್ಕಾರ ನೀಡುವ ಪರಿಹಾರಕ್ಕಾಗಿ ಜಾತಕ ಪಕ್ಷಿಗಳಂತೆ ಕಾಯುತ್ತಿರುವ ಅನ್ನದಾತರ ರಕ್ಷಣೆಗೆ ಜಿಲ್ಲಾಡಳಿತ ಸರ್ಕಾರ ನಿಲ್ಲಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಕಾರ್ಯದ್ಯಕ್ಷ ಹೆಬ್ಬಣಿ ಆನಂದ್‌ರೆಡ್ಡಿ ಮಾತನಾಡಿ ಚಂಡ ಮಾರುತಗಳ ಹಾವಳಿಯಿಂದ ನಷ್ಟವಾಗಿರುವ ರೈತರ ಬೆಳೆ ಸಮೀಕ್ಷೆ ಮಾಡಲು ಜಿಲ್ಲಾಡಳಿತ ವಿಶೇಷ ಕಂದಾಯ ಹಾಗೂ ತೋಟಗಾರಿಕಾ ಅಧಿಕಾರಿಗಳನ್ನು ನೇಮಿಸಬೇಕು ರೈತರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ದ ಕ್ರಮ ಕೈಗೊಂಡು ಯಾವುದೇ ತಾರತಮ್ಯವಿಲ್ಲದೆ ಪ್ರತಿಯೊಬ್ಬ ರೈತರ ತೋಟಗಳಿಗೂ ಬೇಟಿ ಕೊಟ್ಟು ಪರೀಶೀಲನೆ ಮಾಡಿ ವರದಿ ನೀಡಿಬೇಕೆಂದು ಒತ್ತಾಯಿಸಿದರು. ಹದಗೆಟ್ಟಿರುವ ಕೃಷಿ ಉದ್ಯಮದಲ್ಲಿ1 ಎಕರೆ ಬೆಳೆ ಮಾಡಬೇಕಾದರೆ ಕನಿಷ್ಠ 3 ಲಕ್ಷ ಬಂಡವಾಳ ಬೀಳುತ್ತಿದೆ. ಸರ್ಕಾರ ಈ ವಿಚಾರವನ್ನು ಗಂಬೀರವಾಗಿ ಪರಿಗಣಿಸದೆ ಪ್ರತಿ ಹೆಕ್ಟರ್‌ಗೆ ರೂ 6500 ನೀಡುವ ಮುಖಾಂತರ ರೈತರ ಸ್ವಾಭಿಮಾನವನ್ನು ಅವಮಾನ ಮಾಡುತ್ತಿದೆ. ಅಂಕಿ ಅಂಶಗಳ ಪ್ರಕಾರ ಮಾಹಿತಯನ್ನು ಅಧಿಕಾರಿಗಳಿಂದ ಪಡೆದು ಕನಿಷ್ಠ ಪ್ರತಿ ಎಕರೆಗೆ 3 ಲಕ್ಷ ನಷ್ಟ ಪರಿಹಾರ ವಿತರಣೆ ಮಾಡುವ ಮುಖಾಂತರ ಸಂಕಷ್ಟದಲ್ಲಿರುವ ರೈತ ಕುಲವನ್ನು ರಕ್ಷಣೆ ಮಾಡಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ರೈತರ ಉಳಿವಿಗಾಗಿ ರೈತರೇ ಬೀದಿಗಿಳಿದು ಸರ್ಕಾರಗಳ ವಿರುದ್ದ ದಂಗೆ ಹೇಳುವ ಕಾಲ ದೂರವಿಲ್ಲ ಎಂದು ಎಚ್ಚರಿಕೆಯೊಂದಿಗೆ ಮನವಿ ನೀಡಿ ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತೋಟಗಾರಿಕೆ ಅಧಿಕಾರಿಗಳು ಶ್ರೀನಿವಾಸ್ ರವರು ಜಡಿ ಮಳೆಯಿಂದ ನಷ್ಟವಾಗಿರುವ ಬೆಳೆ ಸಮೀಕ್ಷೆ ಮಾಡಲು ಮಾನ್ಯ ಜಿಲ್ಲಾಧಿಕಾರಿಗಳು ಈಗಾಗಲೇ ಕಿರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಪರಿಹಾರ ಹೆಚ್ಚಳದ ಬಗ್ಗೆ ಸರ್ಕಾರಕ್ಕೆ ಅಂಕಿ ಅಂಶಗಳ ಪ್ರಕಾರ ಪತ್ರ ಬರೆಯುವ ಭರವಸೆಯನ್ನು ನೀಡಿದರು. ಮನವಿ ನೀಡುವಾಗ ರಾಜೇಶ್, ಸುನಿಲ್‌ಕುಮಾರ್, ಭಾಸ್ಕರ್, ಈಕಂಬಳ್ಳಿ ಮಂಜುನಾಥ್, ಪಾರುಕ್‌ಪಾಷ, ತಿಮ್ಮಣ್ಣ, ರಾಮಕೃಷ್ಣಪ್ಪ, ಗಣೇಶ್, ವೆಂಕಟೇಶ್ ಪದ್ಮಘಟ್ಟ ದರ್ಮ, ಅಂಬ್ಲಿಕಲ್ ಮಂಜುನಾಥ್ ಮುಂತಾದವರಿದ್ದರು.

## ಕೋಲಾರಮ್ಮ ಕಬಡ್ಡಿ ಉತ್ಸವ-2024; ಬಹುಮಾನ ವಿತರಣೆ



ಮಾಲೂರು ,: ಕೋಲಾರ ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ವತಿಯಿಂದ ಕೋಲಾರ ನಗರದಲ್ಲಿ ಹಮ್ಮಿಕೊಂಡಿದ್ದ ಕೋಲಾರಮ್ಮ ಕಬಡ್ಡಿ ಉತ್ಸವ – 2024 ಹೊನಲು ಬೆಳಕಿನ ಟೂರ್ನಿಯಲ್ಲಿ ಮಾಲೂರಿನ ಸಮಾಜ ಸೇವಕರು ಹಾಗೂ ಯುವ ನಾಯಕ ಕೆ.ಎನ್. ಸುನೀಲ್ ನಂಜೇಗೌಡ ರವರು ಭಾಗವಹಿಸಿ ಕ್ರೀಡಾ ಪಟುಗಳಿಗೆ ಶುಭ ಹಾರೈಸಿ ವಿಜೇತರಾದ ತಂಡಗಳಿಗೆ ಬಹುಮಾನ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಸಂಸದ ಎಸ್. ಮುನಿಸ್ವಾಮಿ, ಬೆಂಗಳೂರು ಪೂರ್ವ ಡೆಪ್ಯೂಟಿ ಕಮಿಷನರ್ ಆಫ್ ಪೋಲಿಸ್ ಡಿ.ದೇವರಾಜ್, ಅಂತರರಾಷ್ಟ್ರೀಯ ಕಬಡ್ಡಿ ಆಟಗಾರರಾದ ಬಿ. ಸಿ. ಸುರೇಶ್ , ಬಿ. ಸಿ. ರಮೇಶ್ , ಸಿ.ಎಂ.ಆರ್. ಶ್ರೀನಾಥ್ , ಓಂ ಶಕ್ತಿ ಚಲಪತಿ , ಪುರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಎ. ರಾಜಪ್ಪ, ನೊಸಗೆರೆ ಗ್ರಾ.ಪಂ.ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಬ್ಯಾಲಹಳ್ಳಿ ಕೆ.ಚಂದ್ರು , ಅಯೋಜಕ ಪ್ರಭು, ಹಾಗೂ ಅನೇಕ ಜನಪ್ರತಿನಿಧಿಗಳು, ಮುಖಂಡರು, ಕ್ರೀಡಾಪಟುಗಳು ಹಾಜರಿದ್ದರು.

## 50 ಸಾವಿರ ರೂ. ವೈಯುಕ್ತಿಕ ಸಹಾಯ



**ಮುಳಬಾಗಿಲು:** ತಾಲ್ಲೂಕಿನ ಬಾಳಸಂದ್ರ ಮೋರಾರ್ಜಿ ದೇಸಾಯಿ ಶಾಲೆಯ ಮಕ್ಕಳು ಶೈಕ್ಷಣಿಕ ಪ್ರವಾಸದಲ್ಲಿ ಮುರುಡೇಶ್ವರ ಬೀಚ್ ಬಳಿ ಆಟವಾಡುತ್ತಲೇ ಪುಟ್ಟಾಣಿ ಮಕ್ಕಳು ತಮ್ಮ ಜೀವನದ ಅಂತ್ಯವನ್ನು ಕಂಡದ್ದು ತುಂಬ ನೋವಾಗಿದೆ.4 ಹೆಣ್ಣು ಮಕ್ಕಳ ಪೋಷಕರನ್ನು ಮತ್ತು ಕುಟುಂಬವನ್ನು ಭೇಟಿ ಮಾಡಿ ಅಂದರೆ ಪೂಜಾರ ಹಳ್ಳಿ ಶ್ರಾವಂತಿ, ಹೆಬ್ಬಣಿ ಲಾವಣ್ಯ, ಎನ್. ಗಡ್ದೂರು ದೀಕ್ಷಾ, ದೊಡ್ಡಗುಟ್ಟಹಳ್ಳಿ ವಂದನಾ ಇವರುಗಳ ಮನೆಗೆ ಭೇಟಿ ನೀಡಿ ಸಾಂತ್ವನ ತಿಳಿಸಿದರು.

ನನ್ನ ವೈಯುಕ್ತಿಕವಾಗಿ 50 ಸಾವಿರ ರೂಪಾಯಿಗಳನ್ನು ನೀಡಿ ಕಾರ್ಯಕ್ರಮಗಳು ನಡೆಸಲು ಪ್ರಾರ್ಥಿಸಿ ಮುಂದಿನ ದಿನಗಳಲ್ಲಿ ನಿಮ್ಮೊಂದಿಗೆ ನಾವಿರುತ್ತೇವೆಂದು ಧೈರ್ಯ ತುಂಬಲಾಯಿತು. ನಂತರ ಮಾತನಾಡಿದ ಶಾಸಕರು ಈ ವಿದ್ಯಾರ್ಥಿಗಳ ಕುಟುಂಬಗಳು ಕಡು ಬಡತನದಿಂದ ಜೀವನ ಮಾಡುತ್ತಿದ್ದು ಇವರಿಗೆ ಬೇಕಾಗಿರುವ ವಸತಿ ಸೌಲಭ್ಯ, ಇನ್ನಿತರೆ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ಒದಗಿಸಿ ಅವರ ಕುಟುಂಬಕ್ಕೆ ನೆರವು ಮಾಡಿಕೊಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಮುಖಂಡರಾದ ಕಾಡೇನಹಳ್ಳಿ ನಾಗರಾಜ್ , ನಲ್ಲೂರು ರಘುಪತಿ, ಗೀತಾ ಆನಂದ ರೆಡ್ಡಿ , ಡಾಕ್ಟರ್ ಪ್ರಕಾಶ್, ಸೋಮೇಗೌಡ, ನಗವಾರ ಸತ್ಯಣ್ಣ, ಎಂ.ಗೊಲ್ಲಹಳ್ಳಿ ಪ್ರಭಾಕರ್, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ತುಳಸಿ ರಾಮಶೆಟ್ಟಿ, ಗೌಸು ಸಾಬ್, ರಮಣಪ್ಪ, ಚಿಕ್ಕ ನರಸಿಂಹಯ್ಯ, ಗ್ರಾಮ ಪಂಚಾಯತಿ ಅಧ್ಯಕ್ಷರಾದ ಕಾಡೇನಹಳ್ಳಿ ಅಶೋಕ್, ಟಿ.ಕೆ ಭಾಸ್ಕರ್ ರೆಡ್ಡಿ, ಬಾಲಸಂದ್ರ ರಮೇಶ್, ಹಾಗೂ ತಾಲೂಕಿನ ಅಧಿಕಾರಿಗಳು, ಶಾಲಾ ಪ್ರಾಂಶುಪಾಲರು, ಗ್ರಾಮ ಪಂಚಾಯತಿ ಸದಸ್ಯರು, ಊರಿನ ಮುಖಂಡರು ಉಪಸ್ಥಿತರಿದ್ದರು.

### 3 ದಿನಗಳ ರಂಗ ತರಂಗ ರಂಗೋತ್ಸವ ಮುಕ್ತಾಯ

## ಜಾಯ್‌ಪುಲ್ ಜಯಶೇಖರ್‌ಗೆ ರಂಗಭೀಷ್ಮ ಪ್ರಶಸ್ತಿ ಪ್ರದಾನ



ಚಾಮರಾಜನಗರ : ನಗರದ ರಂಗತರಂಗ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ರಂಗ ತರಂಗ ರಂಗೋತ್ಸವ 3 ದಿನಗಳ ಪೌರಾಣಿಕ ನಾಟಕಗಳ ಉತ್ಸವ ಹಾಗೂ ರಂಗ ನಿರ್ದೇಶಕ ಜೆ.ಜಾಯ್‌ಪುಲ್ ಜಯಶೇಖರ್ ಅವರಿಗೆ ರಂಗಭೀಷ್ಮ ಪ್ರಶಸ್ತಿ ಪ್ರದಾನ ಸಮಾರಂಭವು ನಡೆಯಿತು.

ನಗರದ ವರನಟ ಡಾ.ರಾಜಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಭಾನುವಾರ ನಡೆದ ರಂಗೋತ್ಸವದ ಸಮಾರೋಪ ಸಮಾರಂಭದಲ್ಲಿ ರಂಗ ನಿರ್ದೇಶಕ ಜೆ.ಜಾಯ್‌ಪುಲ್ ಜಯಶೇಖರ್ ಅವರಿಗೆ ರಂಗತರಂಗ ಟ್ರಸ್ಟ್ ನೀಡುವ 'ರಂಗ ಭೀಷ್ಮ' ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ನಗರಸಭೆ ಅಧ್ಯಕ್ಷ ಎಸ್.ಸುರೇಶ್ ಹಾಗೂ ಬಿಎಸ್‌ವಿ ಪ್ರತಿಷ್ಠಾನದ ಅಧ್ಯಕ್ಷ ಬಿ.ವಿ.ನಾಗಪ್ಪಶೆಟ್ಟಿ ಅವರು ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಸನ್ಮಾನ ಸ್ವೀಕರಿಸಿದ ಜಯಶೇಖರ್ ಮಾತನಾಡಿ, ನನ್ನನ್ನು ಗುರುತಿಸಿ ಸನ್ಮಾನಿಸಿದ ಟ್ರಸ್ಟ್‌ಗೆ ಧನ್ಯವಾದಗಳು. ಇಂತಹ ಉತ್ತಮ ಕಾರ್ಯ ಮುಂದುವರಿಯಲಿ ಎಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ನಗರಸಭಾ ಅಧ್ಯಕ್ಷ ಸುರೇಶ್ ಜಿಲ್ಲೆಯು ಜನಪದ ಕಲೆಗಳ ತವರೂರು. ಹಲವು ಕಲಾವಿದರನ್ನು ಹುಟ್ಟು ಹಾಕಿದ ಪ್ರದೇಶ. ಹೆಸರಾಂತ ಸಾಹಿತಿಗಳು, ಚಿತ್ರ ಕಲಾವಿದರು, ರಂಗ ಕಲಾವಿದರು ಇಲ್ಲಿದ್ದಾರೆ. ಮಲೆ ಮಹದೇಶ್ವರ, ಬಿಳಿಗಿರಿ ರಂಗನಾಥಸ್ವಾಮಿ ನೆಲೆಸಿರುವ ಪ್ರದೇಶವಿದೆ ಎಂದು ತಿಳಿಸಿದರು. ರಂಗತರಂಗ ಟ್ರಸ್ಟ್ ಎಲೆಮರೆ ಕಾಯಿಯಂತೆ ಇರುವ ರಂಗ ಕಲಾವಿದರನ್ನು ಗುರುತಿಸಿ ಗೌರವಿಸುತ್ತಿರುವುದು ಹೆಮ್ಮೆಯ ಕಾರ್ಯ. ಸಾಂಸ್ಕೃತಿಕ ಚಟುವಟಿಕೆಗಳ ಜೊತೆಗೆ ಕಲಾವಿದರನ್ನು ಗುರುತಿಸುವುದು, ನಾಟಕಗಳನ್ನು ಪ್ರದರ್ಶನ ಮಾಡುವುದು ಒಳ್ಳೆಯ ಬೆಳವಣಿಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ವೆಂಕಟನಾಗಪ್ಪ ಶೆಟ್ಟಿ ಅವರು ಮಾತನಾಡಿ, ಪೌರಾಣಿಕ ರಂಗಕಲೆ ಗ್ರಾಮೀಣ ಪ್ರದೇಶದಲ್ಲಿ ಈಗಲೂ ಜೀವಂತವಾಗಿದೆ. ನಮ್ಮ ಜಿಲ್ಲೆಯ ಕಲಾವಿದರು ಜಿಲ್ಲೆ, ರಾಜ್ಯ, ಅಂತರರಾಜ್ಯ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ ಎಂದು ತಿಳಿಸಿದರು. ರಂಗತರಂಗ ಟ್ರಸ್ಟ್ ಕಳೆದ 30 ವರ್ಷಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿದೆ. 50 ವರ್ಷಗಳನ್ನು ಪೂರೈಸಿ ತನ್ನ ಉದ್ದೇಶಗಳನ್ನು ಈಡೇರಿಸಿಕೊಳ್ಳಲಿ ಎಂದು ಶುಭ ಕೋರಿದರು. ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷ ಸೋಮಶೇಖರ ಬಿಸಲವಾಡಿ ಮಾತನಾಡಿ, ಟ್ರಸ್ಟ್ ಇದುವರೆಗೆ ವರನಟ ಡಾ.ರಾಜಕುಮಾರ್, ಕೆ.ಎಸ್.ಅಶ್ವಥ್, ಬಿ.ಎಂ.ರಾಮಚಂದ್ರ, ಮಂಡ್ಯ ರಮೇಶ್, ಪ್ರೊ.ಎಚ್.ಎಸ್.ಉಮೇಶ್ ಅವರಿಗೆ ನೀಡಲಾಗಿದೆ ಎಂದು ತಿಳಿಸಿದರು. ರಂಗೋತ್ಸವದಲ್ಲಿ 3 ದಿನಗಳ ಕಾಲ ದಕ್ಷಯಜ್ಞ, ಕುರುಕ್ಷೇತ್ರ, ಶನಿ ಪ್ರಭಾವ ನಾಟಕಗಳನ್ನು ಪ್ರದರ್ಶಿಸಲಾಯಿತು. ಇದೇ ಸಂದರ್ಭದಲ್ಲಿ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಎ.ಡಿ.ಸಿಲ್ವಾ, ಎಂ.ಪಿ.ರಾಜು, ಹಾರ್ಮೋನಿಯಂ ಮಾಸ್ಟರ್ ಆರ್.ಶಿವಣ್ಣ, ಎಚ್.ಮಹದೇವ್, ವರಲಕ್ಷ್ಮಿ ಅವರನ್ನು ಸನ್ಮಾನಿಸಲಾಯಿತು.

## ಸುದ್ದಿ ಸಂಜೆ

## ವಾಸ್ತವ ಸಮಸ್ಯೆಗಳಿಗೆ ಕನ್ನಡಿ ಕಿಶೋರಿ ಪಾರ್ಲಿಮೆಂಟ್



ಕುಕನೂರು : ಪಟ್ಟಣದ ಹಳೇ ತಹಸೀಲ್ದಾರ್ ಆಫೀಸ್ ಆವರಣದಲ್ಲಿ ನಡೆದ ಕನಸು ಕಿಶೋರಿ ಸಂಘಟನೆಯ ಕಿಶೋರಿ ಪಾರ್ಲಿಮೆಂಟ್ ಅಣಕು ಪ್ರದರ್ಶನವು ತಾಲೂಕಿನ ಪ್ರಚಲಿತ ಸಮಸ್ಯೆಗಳ ಬಗ್ಗೆ ಕನ್ನಡಿ ಹಿಡಿಯಿತು.
ಅಜಿಮ್ ಪ್ರೇಮ್ ಜೀ ಪ್ರಯೋಜಕತ್ವದ ಸರಕಾರೇತರ ಸಂಸ್ಥೆ ವಿಸ್ತಾರ್ ಮತ್ತು ಪಟ್ಟಣ ಪಂಚಾಯತ್ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳು ನಡೆಸಿಕೊಟ್ಟ ಕಿಶೋರಿ ಪಾರ್ಲಿಮೆಂಟ್ ವೇದಿಕೆ ಕಾರ್ಯಕ್ರಮ ತಾಲೂಕಿನ ಸಾರ್ವಜನಿಕರ ಸುತ್ತ ಮುತ್ತಲೇ ಇರುವ ವಾಸ್ತವಿಕ ಸಮಸ್ಯೆಗಳನ್ನು ಪಟ್ಟಿ ಮಾಡಿ ಕಿಶೋರಿ ಪಾರ್ಲಿಮೆಂಟ್ ಮೂಲಕ ಆಯಾ ವಾರ್ಡ್ ಮತ್ತು ಪಂಚಾಯತ್ ಪ್ರತಿನಿಧಿಗಳ ಗಮನಕ್ಕೆ ತರಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪತ್ರಕರ್ತ ರುದ್ರಪ್ಪ ಭಂಡಾರಿ,ವಿಸ್ತಾರ್ ಸಂಘಟನೆಯ ಶಾಲಾ ಮಕ್ಕಳಿಂದ ನಡೆಸಿಕೊಟ್ಟ ಕಿಶೋರಿ ಪಾರ್ಲಿಮೆಂಟ್ ವೇದಿಕೆ ಕಾರ್ಯಕ್ರಮ ಶಾಲಾ ಮಕ್ಕಳಲ್ಲಿ ಸಂವಿಧಾನ, ಪ್ರಜಾಪ್ರಭುತ್ವ ವ್ಯವಸ್ಥೆ ಬಗ್ಗೆ ತಿಳುವಳಿಕೆ ಮೂಡಿಸುತ್ತದೆ. ಮಂತ್ರಿಮಂಡಲ ರಚನೆ ಮಾಡಿ ಸಭಾಪತಿಗಳ ಮುಂದೆ ವಾಸ್ತವಿಕ ಸಮಸ್ಯೆಗಳನ್ನು ಗಮನಕ್ಕೆ ತಂದು ಪ್ರಸ್ತುತ ಪಡಿಸಿದ್ದು ಮಾದರಿಯ ಎನಿಸಿತು ಎಂದು ಹೇಳಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಅಧ್ಯಕ್ಷೆ ಲಲಿತಮ್ಮ ಯಡಿಯಾಪುರ, ವಿಸ್ತಾರ್ ಸಂಸ್ಥೆಯ ಸಹಾಯಕ ನಿರ್ದೇಶಕಿ ಆಶಾ ವಿ, ಮಮತಾಜ್ ಬೇಗಂ, ಕೌಶರ್ ಬೇಗಂ, ಬಸವರಾಜ್ ಗು ಹಳ್ಳಿಕೇರಿ, ದೇವರಾಜ್ ಮನ್ನಾಪುರ, ಇತರರು ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ

ಚಾಮರಾಜನಗರ, : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಹರದನಹಳ್ಳಿ ಮತ್ತು ಬೇಗೂರು ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಡಿಸೆಂಬರ್ 19 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಮೂಡ್ನಾಕೂಡು, ಮುಕ್ಕಡಹಳ್ಳಿ, ಉಡಿಗಾಲ, ನಂಜದೇವನಪುರ, ಕಲ್ಪುರ, ದೇವಲಾಪುರ, ತಮ್ಮಡಹಳ್ಳಿ, ಎನ್.ಜೆ.ವೈ ಮತ್ತು ಕಬ್ಬಳ್ಳಿ, ಸೋಮಳ್ಳಿ, ಪಡಗೂರು, ಬೆಳಚಲವಾಡಿ, ನಿಟ್ರೆ, ಅಗತಗೌಡನಹಳ್ಳಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

ಚಾಮರಾಜನಗರ, : ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಡ್ರೋನ್ ಆಧಾರಿತ ಫೋಟೊಗ್ರಾಫಿ ಮತ್ತು ವೀಡಿಯೋಗ್ರಾಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಅನುಕೂಲವಾಗುವ ಡ್ರೋನ್ ತರಬೇತಿಗೆ ಪರಿಶಿಷ್ಟ ಪಂಗಡದ ಯುವಕ ಯುವತಿಯರಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 23 ರವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯ ಆಸಕ್ತ ಪರಿಶಿಷ್ಟಪಂಗಡದ ಯುವಕ ಯುವತಿಯರು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಚಾಮರಾಜನಗರ, ಕೊಳ್ಳೇಗಾಲ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಗುಂಡ್ಲುಪೇಟೆ ಹಾಗೂ ಯಳಂದೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್ 23ರೊಳಗೆ ಸಲ್ಲಿಸಬೇಕು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಹೆಚ್. ಎಸ್. ಬಿಂದ್ಯಾ ತಿಳಿಸಿದ್ದಾರೆ.

## ಮೇಕೆ ಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

ಚಾಮರಾಜನಗರ: ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಯುವತಿಯರಿಗೆ ಸ್ವ ಉದ್ಯೋಗ ಕೈಗೊಳ್ಳಲು ಊಟ ವಸತಿಗಳೊಂದಿಗೆ ಉಚಿತವಾಗಿ ಮೇಕೆ ಸಾಕಾಣಿಕೆ ತರಬೇತಿ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಡಿಸೆಂಬರ್ 19 ರಿಂದ ತರಬೇತಿ ಪ್ರಾರಂಭಿಸಲಾಗುತ್ತಿದ್ದು, ಆಸಕ್ತಿಯುಳ್ಳ 18 ರಿಂದ 45 ವರ್ಷದೊಳಗಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರು ಆಧಾರ್ ಕಾರ್ಡ್, ಪಡಿತರ ಚೀಟಿ ನಕಲು ಪ್ರತಿ ಮತ್ತು 4 ಭಾವಚಿತ್ರದೊಂದಿಗೆ ಕಚೇರಿಯನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು. ತರಬೇತಿಯನ್ನು ಮಾದಾಪುರದ ಸಂತೇಮರಹಳ್ಳಿ ರಸ್ತೆಯ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡ ಪೆಟ್ರೋಲ್ ಬಂಕ್ ಎದುರಿನ ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 9606098878, 8722483393, 9739067155 ಅನ್ನು ಸಂಪರ್ಕಿಸುವಂತೆ ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮ್ಮೇಳನ ಮುಂದೂಡಿಕೆ

**ಚಾಮರಾಜನಗರ, :** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಡಿಸೆಂಬರ್ 20 ರಿಂದ 22ರವರೆಗೆ ಮಂಡ್ಯದಲ್ಲಿ ನಡೆಯಲಿರುವುದರಿಂದ ಸ್ವದೇಶಿ ವಿಜ್ಞಾನ ಆಂದೋಳನ-ಕರ್ನಾಟಕ ಮತ್ತು ಚಾಮರಾಜನಗರ ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ಡಿಸೆಂಬರ್ 19 ರಿಂದ 21ರವರೆಗೆ ಚಾಮರಾಜನಗರ ವಿಶ್ವವಿದ್ಯಾನಿಲಯದ ಸುವರ್ಣಗಂಗೋತ್ರಿಯ ಆವರಣದಲ್ಲಿ ಆಯೋಜಿಸಲಾಗಿದ್ದ 18ನೇ ಕನ್ನಡ ವಿಜ್ಞಾನ ಸಮ್ಮೇಳನವನ್ನು ಮುಂದೂಡಲಾಗಿದೆ ಎಂದು ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಸಚಿವರು ತಿಳಿಸಿದ್ದಾರೆ.

# ಕ್ರೀಡೆ ದೈಹಿಕ, ಮಾನಸಿಕ ಆರೋಗ್ಯಕ್ಕೆ ಸಹಕಾರಿ



**ಚಾಮರಾಜನಗರ:** ಕ್ರೀಡೆಯು ದೈಹಿಕ ಚಟುವಟಿಕೆ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಸಹಕಾರಿಯಾಗಿದೆ ಎಂದು ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ ಅವರು ತಿಳಿಸಿದರು.

ನಗರದ ಜೆ.ಎಸ್‌ಎಸ್ ಶಿಕ್ಷಣ ಸಂಸ್ಥೆಯ ಕ್ರೀಡಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಜೆ.ಎಸ್‌ಎಸ್ ಶಿಕ್ಷಣ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 14 ರಿಂದ 17 ವರ್ಷ ವಯೋಮಿತಿಯ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಬಾಲಕ, ಬಾಲಕಿಯರ ಮೈಸೂರು ವಿಭಾಗ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯನ್ನು ಜೆ.ಎಸ್‌ಎಸ್ ಶಿಕ್ಷಣ ಸಂಸ್ಥೆಯ ಒಳಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕ್ರೀಡೆ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೂ ಸಹಕಾರಿಯಾಗಿದೆ. ಉತ್ತಮವಾಗಿ ಆಡಿದ ಮಕ್ಕಳನ್ನು ತೀರ್ಪುಗಾರರು ನಿಷ್ಪಕ್ಷಪಾತವಾಗಿ ಆಯ್ಕೆ ಮಾಡಬೇಕು. ವಿಭಾಗೀಯ ಮಟ್ಟದಲ್ಲಿ ವಿಜೇತರಾದ ಮಕ್ಕಳು ರಾಜ್ಯಮಟ್ಟದಲ್ಲಿಯೂ ಆಯ್ಕೆಯಾಗಿ ಜಿಲ್ಲೆಗೆ ಕೀರ್ತಿ ತರಬೇಕೆಂದು ಮಹಮ್ಮದ್ ಅಸ್ಗರ್ ಮುನ್ನ ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ರಾಮಚಂದ್ರ ರಾಜೇ ಅರಸ್ ಅವರು ಪಂದ್ಯಾವಳಿಯಲ್ಲಿ ಮೈಸೂರು ವಿಭಾಗದ ಎಂಟು ಜಿಲ್ಲೆಗಳು ಭಾಗವಹಿಸುತ್ತಿವೆ. ಈ ಕ್ರೀಡೆಯಲ್ಲಿ ಜಯಗಳಿಸಿದ ಮಕ್ಕಳು ರಾಜ್ಯಮಟ್ಟಕ್ಕೆ ಆಯ್ಕೆ ಆಗಲಿದ್ದಾರೆ. ಪೋಷಕರು ಕ್ರೀಡೆಗಳಲ್ಲಿ ಭಾಗವಹಿಸಲು ಮಕ್ಕಳಿಗೆ ಪ್ರೋತ್ಸಾಹ ನೀಡಬೇಕು. ಓದಿನ ಜೊತೆಗೆ ಕ್ರೀಡೆಯನ್ನು ಮೈಗೂಡಿಸಿಕೊಂಡಲ್ಲಿ ಭವಿಷ್ಯ ಉಜ್ವಲವಾಗುತ್ತದೆ ಎಂದರು.

ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್ ಅವರು ಮಾತನಾಡಿ ಮಕ್ಕಳು ರಾಜ್ಯ ಹಾಗೂ ಅಂತರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಜಯಗಳಿಸಿ ಚಾಮರಾಜನಗರ ಜಿಲ್ಲೆ ಹಾಗೂ ಮೈಸೂರು ವಿಭಾಗಕ್ಕೆ ಉತ್ತಮ ಹೆಸರನ್ನು ತರಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ತಿಳಿಸಿದರು.

ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಡಾ. ರೇಣುಕಾದೇವಿ ಅವರು ಮಾತನಾಡಿ ಮಕ್ಕಳು ಓದಿನ ಜೊತೆಗೆ ಕ್ರೀಡೆಯಲ್ಲಿ ಭಾಗವಹಿಸಬೇಕು. ಕ್ರೀಡೆ ಪ್ರತಿಯೊಬ್ಬರಿಗೂ ಬಹಳ ಅಗತ್ಯವಿದೆ. ಪ್ರಸ್ತುತ ದಿನಗಳಲ್ಲಿ ಅತಿಯಾದ ಮೊಬೈಲ್ ಬಳಕೆಯಿಂದಾಗಿ ದೈಹಿಕ ಚಟುವಟಿಕೆ ಕಡೆ ಗಮನ ಹರಿಸುವುದು ಕಡಿಮೆಯಾಗುತ್ತಿದೆ. ಈ ರೀತಿಯ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಉತ್ತಮ ಆರೋಗ್ಯ ವೃದ್ಧಿಯಾಗಲಿದೆ ಎಂದರು.

ನಗರಸಭೆ ಸದಸ್ಯರಾದ ಕುಮುದ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ. ಹನುಮಶೆಟ್ಟಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಆರ್. ಶಂಕರ್, ಜೆ.ಎಸ್‌ಎಸ್ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಎನ್. ಮಹದೇವಸ್ವಾಮಿ, ಮೈಸೂರು ವಿಭಾಗೀಯ ಕಾರ್ಯದರ್ಶಿಗಳು ಹಾಗೂ ದೈಹಿಕ ಶಿಕ್ಷಣ ಉಪನಿರ್ದೇಶಕರಾದ ಪರಶುರಾಮಪ್ಪ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಎಸ್. ಬಸವರಾಜು, ಇನ್ನಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

## ಭಕ್ತರಹಳ್ಳಿಯ ಗ್ರಾಮ ಪಂಚಾಯಿತಿ ಅಕ್ರಮ ಮತದಾನ


ಶಿಡ್ಲಘಟ್ಟ : ಡಿಸೆಂಬರ್ 8 ರಂದು ನಡೆದ ಮತದಾನದಲ್ಲಿ ಭಕ್ತರಹಳ್ಳಿಯ ಮತಗಟ್ಟೆ-2ರಲ್ಲಿ ಒಟ್ಟು 983 ಮತದಾನ ನಡೆದಿತ್ತು, ಡಿ.12ರಂದು ಮತ ಎಣಿಕೆ ಕಾರ್ಯ ನಡೆದಾಗ 980 ಬ್ಯಾಲೆಟ್ ಪೇಪರ್‌ಗಳಷ್ಟೆ ಇತ್ತು , ಜತೆಗೆ ಬ್ಯಾಲೆಟ್ ಪೇಪರ್‌ಗಳನ್ನೆ ಹೋಲುವ 18 ಹೆಚ್ಚುವರಿ ಡೂಪ್ಲಿಕೇಟ್ ಬ್ಯಾಲೆಟ್ ಪೇಪರ್‌ಗಳು ಸಹ ಕಂಡು ಬಂದಿದೆ ಎಂದು ಕಾಂಗ್ರೆಸ್ ಬೆಂಬಲಿತ ಪರಾಜಿತ ಅಭ್ಯರ್ಥಿ ಬಿ.ಚಿದಾನಂದಮೂರ್ತಿ ದೂರಿದರು.

ತಾಲ್ಲೂಕಿನ ಭಕ್ತರಹಳ್ಳಿಯ ಮಾಜಿ ಶಾಸಕ ದಿ.ವೆಂಕಟರಾಯಪ್ಪ ಅವರ ನಿವಾಸದಲ್ಲಿ ಭಕ್ತರಹಳ್ಳಿಯ ಕಾಂಗ್ರೆಸ್ ಮುಖಂಡರು ಹಾಗೂ ಚುನಾವಣೆಯಲ್ಲಿ ಪರಾಜಿತ ಅಭ್ಯರ್ಥಿಗಳು ಮಾಧ್ಯಮಗೋಷ್ಠಿ ನಡೆಸಿ ಭಕ್ತರಹಳ್ಳಿಯ ಗ್ರಾಮ ಪಂಚಾಯಿತಿ ಚುನಾವಣೆಯ ಮತದಾನದಲ್ಲಿ ಅಕ್ರಮ ನಡೆದಿರುವ ಬಗ್ಗೆ ಗಂಭೀರ ಆರೋಪ ಮಾಡಿ ತನಿಖೆಗೆ ಆಗ್ರಹಿಸಿದರು.

ತಾಲ್ಲೂಕಿನ ಭಕ್ತರಹಳ್ಳಿ ಗ್ರಾಮದ ಮತಗಟ್ಟೆ-2 ರಲ್ಲಿ ಕಳೆದ 8 ರಂದು ನಡೆದ ಮತದಾನದಲ್ಲಿ ಅಕ್ರಮ ನಡೆದಿದೆ. ಮತ ಎಣಿಕೆ ವೇಳೆ ಅಕ್ರಮವಾಗಿರುವುದು ಬಹಿರಂಗಗೊಂಡಿದೆ ಎಂದು ಭಕ್ತರಹಳ್ಳಿ ಮತಗಟ್ಟೆ-2ರ ಪರಾಜಿತ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಬಿ.ಚಿದಾನಂದಮೂರ್ತಿ ಗಂಭೀರ ಆರೋಪ ಮಾಡಿದರು.

ಮತದಾರರಿಗೆ ನೀಡಿದ ಆ 3 ಬ್ಯಾಲೆಟ್ ಪೇಪರ್‌ಗಳು ಮತಪೆಟ್ಟಿಗೆಯಲ್ಲಿ ಇಲ್ಲದೆ ಎಲ್ಲಿ ಹೋದವು, ಏನಾದವು ?. ಜತೆಗೆ ಬ್ಯಾಲೆಟ್ ಪೇಪರ್ ಹೋಲುವ 18 ಮಾದರಿ ಮತಪತ್ರಗಳು ಮತಪೆಟ್ಟಿಗೆಯಲ್ಲಿ ಹೇಗೆ ಬಂದವು ? ಎಂದು ಪ್ರಶ್ನಿಸಿದ್ದಾರೆ. ಮತ ಎಣಿಕೆ ಸಮಯದಲ್ಲಿ ಕಾಣೆಯಾದ 3 ಬ್ಯಾಲೆಟ್ ಪೇಪರ್ ಮತ್ತು ಹೆಚ್ಚುವರಿಯಾಗಿ ಕಾಣಿಸಿಕೊಂಡ 18 ಡೂಪ್ಲಿಕೇಟ್ ಬ್ಯಾಲೆಟ್ ಪೇಪರ್‌ಗಳು ಮತಪೆಟ್ಟಿಗೆಯಲ್ಲಿ ಹೇಗೆ ಬಂದವು ಎಂದು ತಹಸೀಲ್ದಾರರು ಹಾಗೂ ಮತ ಎಣಿಕೆ ಮಾಡಿದ ಅಧಿಕಾರಿಗಳನ್ನು ಮತ ಎಣಿಕೆಯ ಸ್ಥಳದಲ್ಲೆ ಪ್ರಶ್ನಿಸಿದೆ ,ಆದರೆ ಅಧಿಕಾರಿಗಳಿಂದ ಸ್ಪಷ್ಟ ಉತ್ತರ ಸಿಗಲಿಲ್ಲ, ಬದಲಿಗೆ ನೀವು ನ್ಯಾಯಕ್ಕಾಗಿ ಕೋರ್ಟಿಗೆ ಹೋಗಬಹುದು ಎಂದಷ್ಟೆ ಹೇಳಿ ನಮ್ಮನ್ನು ದಿಕ್ಕು ತಪ್ಪಿಸಿ ಮತ ಎಣಿಕೆ ಕಾರ್ಯ ಮುಗಿಸಿದರು ಎಂದು ಮತ ಎಣಿಕೆ ಕಾರ್ಯದ ಅಕಾರಿಗಳು, ತಹಸೀಲ್ದಾರರ ಕಾರ್ಯವೈಖರಿಗೆ ಬಗ್ಗೆ ಅನುಮಾನ ವ್ಯಕ್ತಪಡಿಸಿದರು.

ಸಂಬಂಧಿಸಿದ ದಾಖಲೆಗಳನ್ನು ಕೊಡಲು ನಾವು ಕೇಳಿದ್ದಕ್ಕೆ ಚುನಾವಣಾಕಾರಿ ಮೇಲೆ ತಹಸೀಲ್ದಾರರು, ತಹಸೀಲ್ದಾರರ ಮೇಲೆ ಚುನಾವಣಾಕಾರಿಗಳು ಬೆರಳು ತೋರಿಸಿ ಕಾಲ ಹರಣ ಮಾಡಿದರೆ ವಿನಹ ನಾವು ಕೇಳಿದ ದಾಖಲೆಗಳನ್ನು, ಮಾಹಿತಿಯನ್ನು ಕೊಡಲಿಲ್ಲ ಎಂದು ದೂರಿದರು.ತಹಸೀಲ್ದಾರರನ್ನು ನಾವು ಕೇಳಬಯಸುವ ಮಾಹಿತಿ, ದಾಖಲೆಗಳನ್ನು ಕೇಳುತ್ತೇವೆ, ಕೊಡದಿದ್ದಲ್ಲಿ ತಾಲ್ಲೂಕು ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸುತ್ತೇವೆ , ನ್ಯಾಯ ಸಿಗುವವರೆಗೂ ಹೋರಾಟ ಮುಂದುವರೆಸುತ್ತೇನೆ, ನ್ಯಾಯಾಲಯಕ್ಕೂ ಹೋಗುತ್ತೇವೆ ಎಂದು ಸ್ಪಷ್ಟಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಹಾಪ್‌ಕಾಮ್ಸ್ ಮಾಜಿ ಅಧ್ಯಕ್ಷ ಬಿ.ವಿ.ಮುನೇಗೌಡ, ಕೋಟೆ ಚನ್ನೇಗೌಡ, ನಂಜುಂಡಾರಾಧ್ಯ, ಪರಾಜಿತ ಅಭ್ಯರ್ಥಿ ಮಧುಗೌಡ, ವಿಶ್ವನಾಥ್, ಬಿ.ಕೆ.ಮುರಳಿ, ಹಾಲೇರಿ ಮಧುಗೌಡ, ಲಕ್ಷ್ಮಿನಾರಾಯಣಪ್ಪ, ಪ್ರತೀಶ್ ಮತ್ತಿತರ ಕಾಂಗ್ರೆಸ್ ಮುಖಂಡರು ಹಾಜರಿದ್ದರು.



## ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಧರಣಿ



ಚಿಕ್ಕಬಳ್ಳಾಪುರ: ವಿವಿಧ ಬೇಡಿಕೆಗಳನ್ನುಈಡೇರಿಸುವಂತೆ ಚಳಿ ಮತ್ತು ಬಿಸಿಲು ಲೆಕ್ಕಿಸದೆ ಅಂಗನವಾಡಿ ನೌಕರರು ನಗರದ ಹೊರವಯದಲ್ಲಿರುವ ಜಿಲ್ಲಾಡಳಿತ ಭವನದ ಬಳಿ ಮಂಗಳವಾರ ಅಹೋರಾತ್ರಿ ಧರಣಿ ನಡೆಸಿದರು.

ಕನಿಷ್ಠ ವೇತನ, ಗ್ರಾಚ್ಯುಟಿ,ಅಂಗನವಾಡಿ ಕೇಂದ್ರಗಳ ಮೇಲ್ದರ್ಜೆ,ಗುಣಮಟ್ಟದ ಅಹಾರ ವಿತರಣೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಅಂಗನವಾಡಿ ನೌಕರರ ಸಂಘದಿಂದ ಮಂಗಳವಾರ ಮತ್ತು ಬುಧವಾರ ಅಹೋರಾತ್ರಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಈ ಭಾಗವಾಗಿ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಬಳಿ ಅಂಗನವಾಡಿ ನೌಕರರು ಧರಣಿ ನಡೆಸಿದರು.ಜಿಲ್ಲಾಡಳಿತ ಭವನ ಪ್ರವೇಶದ ಕಾರಿಡಾರ್‌ನಲ್ಲಿಯೇ ಕುಳಿತರು. ಮಂಗಳವಾರ ಮಧ್ಯಾಹ್ನ ನಗರದಲ್ಲಿ ಬಿಸಿಲು ಹೆಚ್ಚಿತ್ತು. ಇಂತಹ ಸುಡು ಬಿಸಿಲಿನಲ್ಲಿಯೇ ಜಿಲ್ಲಾಡಳಿತ ಭವನದ ಬಳಿ ಸಮಾವೇಶಗೊಂಡರು. ಸಂಜೆ ಆಗುತ್ತಿದ್ದಂತೆ ತೀವ್ರ ಚಳಿ ಅಡರಿತು.

ರಾತ್ರಿ ವಿಪರೀತ ಚಳಿಯಲ್ಲಿಯೇ ಜಿಲ್ಲಾಡಳಿತ ಭವನದ ಬಳಿಯೇ ಮಲಗಿದರು. ಕಾಂಗ್ರೆಸ್ ಸರ್ಕಾರ ಅಂಗನವಾಡಿ ನೌಕರರಿಗೆ 15,000 ಕನಿಷ್ಠ ವೇತನ ಕೊಡುವುದಾಗಿ ಭರವಸೆ ನೀಡಿತ್ತು. ಅದರೆ ಅಧಿಕಾರಕ್ಕೆ ಬಂದು ವರ್ಷವಾದರೂ ಭರವಸೆ ಈಡೇರಿಸಿಲ್ಲ. ನೌಕರರಿಗೆ ಸಮಯಕ್ಕೆ ಸರಿಯಾಗಿ ವೇತನ ನೀಡುತ್ತಿಲ್ಲ, ನೌಕರರೇ ಹಣ ನೀಡಿ ಮೊಟ್ಟೆ ತರಕಾರಿ ಖರೀದಿಸಿಬೇಕಾಗಿದೆ. ನೌಕರರಿಗೆ ನೌಕರರನ್ನು 3 ಮತ್ತು 4ನೇ ದರ್ಜೆ ನೌಕರರನ್ನಾಗಿ ಪರಿಗಣಿಸಬೇಕು ಎಂದು ಪ್ರತಿಭಟನಕಾರರು ಒತ್ತಾಯಿಸಿದರು. ಮಾತೃ ವಂದನಾ ಚುಣಾವಣೆ ಕಾರ್ಯಗಳು ಸೇರಿದಂತೆ ಇಲಾಖೇತರ ಕೆಲಸಗಳಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆ. ಗೌರವಧನವಿಲ್ಲದ ಅಂಗನವಾಡಿ ನೌಕರರು ಇಲಾಖೇತರ ಕೆಲಸಗಳನ್ನು ನಿಭಾಯಿಸಬೇಕಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಗುಣಮಟ್ಟದಆಹಾರ ಪದಾರ್ಥಗಳು ಸಿಗುತ್ತಿಲ್ಲ. ರವೆ, ಬೆಲ್ಲ, ಮಸಾಲೆ ಇತ್ಯಾದಿ ಆಹಾರ ಪದಾರ್ಥಗಳು ಗುಣಮಟ್ಟ ದಿಂದ ಕೂಡಿಲ್ಲ. ರವೆಯಲ್ಲಿ ಹುಳುಗಳು ಕಾಣಿಸಿಕೊಳ್ಳುತ್ತಿವೆ. ರಾಜ್ಯದ ಎಲ್ಲ ಕಡೆ ಏಕಮಾದರಿಯ ಆಹಾರ ಪದಾರ್ಥಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರಿಂದ ಈ ಭಾಗದ ಮಕ್ಕಳು ಆಹಾರ ಸೇವನೆ ಮಾಡಲು ಕಷ್ಟವಾಗುತ್ತಿದೆ. ಈ ಹಿಂದಿನ ಮಾದರಿಯಲ್ಲೇ ಜಿಲ್ಲಾಧಿಕಾರಿ ನೇತೃತ್ವದಲ್ಲೇ ಆಹಾರ ಪದಾರ್ಥಗಳನ್ನು ವಿತರಣೆ ಮಾಡಬೇಕು ಎಂದು ಒತ್ತಾಯಿಸಿದರು.

ಅಂಗನವಾಡಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷೆ ಲಕ್ಷ್ಮಿದೇವಮ್ಮ, ಸಿಐಟಿಯು ಜಿಲ್ಲಾ ಕಾರ್ಯದರ್ಶಿರತ್ನಮ್ಮ, ವೆಂಕಟಲಕ್ಷ್ಮಮ್ಮ,ಸುಜಾತಾ,ಲಕ್ಷ್ಮಮ್ಮ,ಮಂಜುಳಾ,ಭಾಗ್ಯಲಕ್ಷ್ಮಮ್ಮ ಹಾಗೂ ಅಪಾರ ಸಂಖ್ಯೆಯ ನೌಕರರು ಅಹೋರಾತ್ರಿಯ ಧರಣಿಯಲ್ಲಿ ಪಾಲ್ಗೊಂಡಿದ್ದರು.

## ಸೇತುವೆಗೆ ಡಿಕ್ಕಿ ಹೊಡೆದ ಬಸ್

ಶಿರಾ: ಚಾಲಕನ ನಿಯಂತ್ರಣ ತಪ್ಪಿ ಕೆಎಸ್‌ಆರ್‌ಟಿಸಿ ಬಸ್‌ವೊಂದು ಸೇತುವೆಗೆ ಡಿಕ್ಕಿ ಹೊಡೆದು ಸಿಲುಕಿಕೊಂಡಿರುವ ಘಟನೆ ನಗರದ ಹೊರವಲಯದಕಲ್ಲುಕೋಟೆ ಸೇತುವೆ ಬಳಿ ನಡೆದಿದೆ. ಅದೃಷ್ಟವಶಾತ್, ಯಾವುದೇ ಅನಾಹುತ ಸಂಭವಿಸಿಲ್ಲ. ಆದ್ರೆ ಬಸ್ ನಲ್ಲಿದ್ದ 7ಕ್ಕೂ ಹೆಚ್ಚು ಪ್ರಯಾಣಿಕರಿಗೆ ಇದರು ಎನ್ನಲಾಗಿದೆ ಇಂದು ಬೆಳಿಗ್ಗೆ ಸುಮಾರು 6.30 ರ ಸಮಯದಲ್ಲಿ ಶಿರಾ ಯಿಂದ ಬೆಜ್ಜಿಹಳ್ಳಿ ಕಡೆಗೆ ಹೋಗುವ ಮಾರ್ಗದಲ್ಲಿ ಘಟನೆ ನಡೆದಿದೆ ರಸ್ತೆಯಲ್ಲಿ ಸುಮಾರು ಗುಡ್ಡಗಳು ಇದ್ದು ಅದನ್ನು ತಪ್ಪಿಸಲು



ಕಲ್ಲುಕೋಟೆಬಳಿಯ ಸೇತುವೆಗೆ ಬಸ್ ಡಿಕ್ಕಿ ಹೊಡೆದಿದೆ. ಆದ್ರೆ ಸೇತುವೆ ಕೆಳಗೆ ಬಸ್ ಉರುಳಿಲ್ಲ. ಬದಲಾಗಿದ್ದ ಡಿಕ್ಕಿ ಹೊಡೆದು ಸೇತುವೆ ತಡೆಗೋಡೆಗೆ ಸಿಲುಕಿಕೊಂಡಿದೆ. ಅಪಘಾತ ಸಂಭವಿಸಿದ ಹಿನ್ನೆಲೆಯಲ್ಲಿ ಪ್ರಯಾಣಿಕರನ್ನು ಮತ್ತೊಂದು ಬಸ್‌ನಲ್ಲಿ ಕಳುಹಿಸಲಾಗಿದೆ. ಸ್ಥಳಕ್ಕೆ ಶಿರಾ ನಗರ ಪೊಲೀಸರು ಭೇಟಿ ನೀಡಿಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಸೇನೆಯಿಂದ ನಿವೃತ್ತಿ; ಗ್ರಾಮಸ್ಥರಿಂದ ಅದ್ದೂರಿ ಸ್ವಾಗತ



**ಕುಕನೂರು** : ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ , ಕುಕನೂರು ತಾಲೂಕಿನ ಬನ್ನಿಕೊಪ್ಪ ಗ್ರಾಮದ ವೀರ ಸುಪುತ್ರ ಹವಾಲ್ದಾರ ಅರುಣಕುಮಾರ ರುದ್ರಪ್ಪ ಗೊಂದಿಯವರಿಗೆ ಗ್ರಾಮಸ್ಥರಿಂದ ಅದ್ದೂರಿ ಸ್ವಾಗತ ಕೋರಲಾಯಿತು. 20 ವರ್ಷ 8 ತಿಂಗಳುಗಳ ಕಾಲ ಭಾರತೀಯ ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿ ಸ್ವಗ್ರಾಮ ಬನ್ನಿಕೊಪ್ಪಕ್ಕೆ ಆಗಮಿಸಿದಾಗ ಅವರನ್ನು ಅತ್ಯಂತ ಗೌರವ ಪೂರಕವಾಗಿ, ಹಾರ ತುರಾಯಿ ಹಾಕಿ, ಡೊಳ್ಳು ಬಡಿಯುತ್ತ, ಪಟಾಕಿ ಸಿಡಿಸುತ್ತ, ಪುಷ್ಪ ಮಳೆಗರೆಯುತ್ತ ಊರಿನ ಪ್ರಮುಖ ಬೀದಿಗಳಲ್ಲಿ ತೆರದ ವಾಹನದಲ್ಲಿ ಮೆರವಣಿಗೆಯೊಂದಿಗೆ ಸ್ವಾಗತಿಸಿ, ಬನ್ನಿಕೊಪ್ಪದ ಶ್ರೀ ಚನ್ನಬಸವೇಶ್ವರ ಮಠದ ಆವರಣದಲ್ಲಿ ಅವರನ್ನು ಸನ್ಮಾನಿಸಿ ಅವರ ನಿವೃತ್ತಿ ಜೀವನ ಸುಖಕರವಾಗಿರಲೆಂದು ನೆರೆದವರು ಹಾರೈಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯ ಮಾಜಿ ಸೈನಿಕರಾದ ಗೋವಿಂದರಡ್ಡಿ ಚವಡಿ, ಸಿದ್ದನಗೌಡ ತೆಗ್ಗಿನಮನಿ, ಟ ಅಶೋಕ್ ಯರಾಶಿ, ಬಸವರಾಜ್ ಮಾಳೆಕೊಪ್ಪ, ಸಂಗಮೇಶ ಗೊಂದಿ, ಮಾಜಿ ಸೈನಿಕರು ಹಾಗೂ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ನಾಗರಾಜ ವೆಂಕಟಾಪುರ, ಗ್ರಾ.ಪಂ.ಸದಸ್ಯರಾದ ವೀರಪ್ಪ ಗೊಂದಿ, ವಿಜಯಲಕ್ಷ್ಮಿ ಯರಾಶಿ, ಶಾಂತಮ್ಮ ಆಲೂರ್, ಗವಾಯಿಗಳಾದ ಬಸವರಾಜ್ ಅಡವಳ್ಳಿ, ಚನ್ನಪ್ಪ ಗೊಂದಿ, ಉಮೇಶಗೌಡ ಪೋ ಪಾಟೀಲ್, ಅಮರೇಶ್ ಹಿರೇಮನಿ, ರುದ್ರಪ್ಪ ಗೊಂದಿ, ಷಣ್ಮುಖಪ್ಪ ಯರಾಶಿ, ವೀರಣ್ಣ ಗೊಂದಿ, ಶರಣಪ್ಪಗೌಡ ತೆಗ್ಗಿನಮನಿ, ಶರಣಪ್ಪ ಗುಡ್ಲಾನೂರ್, ಮಾರುತಿ ಚಂಡಿ, ಚನ್ನಪ್ಪ ಮೆಣಸಿನಕಾಯಿ, ನಾಗರಾಜ ಹಳ್ಳಿಕೇರಿ, ಗವಿಸಿದ್ದಪ್ಪ ಮೆಣಸಿನಕಾಯಿ, ಊರಿನ ಗುರು ಹಿರಿಯರು, ಯುವಕರು, ತಾಯಂದಿರು, ಶಾಲಾ ವಿದ್ಯಾರ್ಥಿಗಳು, ನೆರೆಯ ಊರುಗಳ ಗುರು-ಹಿರಿಯರು, ಕುಟುಂಬಸ್ಥರು, ಹಾಜರಿದ್ದು ಜೀವನ ಸುಖಕರವಾಗಿರಲೆಂದು ಶುಭ ಹಾರೈಸಿದರು.

## ಸುದ್ದಿ ಸಂಜೆ

### ಅಂಗಾಂಗ ದಾನ ಜಾಗೃತಿ ಸಮಿತಿಯ ಜಿಲ್ಲಾಧ್ಯಕ್ಷರಾಗಿ ಎಂ.ಬಿ ಕೃಷ್ಣಮೂರ್ತಿ

ಮುಳಬಾಗಿಲು. : ರಾಷ್ಟ್ರೀಯ ಅಂಗಾಂಗ ದಾನ ಜಾಗೃತಿ ಸಮಿತಿಕೋಲಾರ ಜಿಲ್ಲಾಧ್ಯಕ್ಷರು ಸಮಾಜ ಸೇವಕಎಂ.ಬಿ. ಕೃಷ್ಣಮೂರ್ತಿ ರವರು ಗ್ರಾಮ ಭಾರತಿ ಟ್ರಸ್ಟ್ & ಮುಳಬಾಗಿಲು ಫುಡ್ ಬ್ಯಾಂಕ್ ಮೂಲಕ ಸಮಾಜ ಸೇವೆಗ್ರಾಮ ಭಾರತಿ ಟ್ರಸ್ಟ್ ಸಂಸ್ಥಾಪಕಎಂಬಿ. ಕೃಷ್ಣಮೂರ್ತಿ ಯವರನ್ನುಆಯ್ಕೆ ಮಾಡಲಾಗಿದೆ. ಎಂದು। ಸಂಚಾಲಕ ಪ್ರೀತು ದಶವಂತ ಇಂಡಿ ತಿಳಿಸಿದ್ದಾರೆ ಕೃಷ್ಣಮೂರ್ತಿ ಅವರ ಆಯ್ಕೆಯನ್ನು ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷೆ ರುನ್ನಿ ಲಕ್ಷ್ಮಿರಾಣಿ ಕೆ. ಉಪಾಧ್ಯಕ್ಷೆ ಪ್ರಭಾ ವಸಂತ. ರಾಷ್ಟ್ರೀಯ ಅಧ್ಯಕ್ಷ ಶಿವಾನಂದ ಹೂಗಾರ ಅನುಮೋದನೆ ನೀಡಿಕೋಲಾರ ನೂತನ ಜಿಲ್ಲಾಧ್ಯಕ್ಷರು. ಅಭಿನಂದಿಸಿದ್ದಾರೆ ಕೋಲಾರ ಜಿಲ್ಲೆ ಮುಳಬಾಗಿಲು ದೇಹದಾನ. ನೇತ್ರದಾನ. ದಲ್ಲಿ ಗ್ರಾಮ ಭಾರತಿ ಟ್ರಸ್ಟ್ ಹಾಗೂ ಅಂಗಾಂಗದಾನ ಜಾಗೃತಿ ಕ್ಷೇತ್ರದಲ್ಲಿ ಮುಳಬಾಗಿಲು ಫುಡ್ ಬ್ಯಾಂಕ್ ವಿವಿಧ ರಾಜ್ಯಗಳಲ್ಲಿ ಸೇವೆ ಮೂಲಕ ಅವಿರತ ಸಮಾಜ ಸೇವೆ ಸಲ್ಲಿಸುತ್ತಿರುವ ರಾಷ್ಟ್ರೀಯ ಸಲ್ಲಿಸುತ್ತಿರುವ ಕೃಷ್ಣಮೂರ್ತಿರವರ ದೇಹಾಂಗದಾನ ಜಾಗೃತಿ ನೇತೃತ್ವದಲ್ಲಿ ಕೋಲಾರ ಜಿಲ್ಲೆಯಲ್ಲಿ ಸಮಿತಿಯು ಕರ್ನಾಟಕ ರಾಜ್ಯದ ಅಂಗಾಂಗ ದಾನ ಜಾಗೃತಿ ಹೆಚ್ಚಿನ ಕೋಲಾರ ಜಿಲ್ಲಾ ಘಟಕದ ಪ್ರಮಾಣದಲ್ಲಿ ಆಗಲಿ. ಎಂದು ಶುಭ ಹಾರೈಸಿದ್ದಾರೆ.



### ಮಂಜು ಆವರಿಸುವುದು ಅಪರೂಪದ ಸನ್ನಿವೇಶ

**ಶಿರಾ:** ಬಹುತೇಕ ಮಳೆ ಮರೆಯಾಗಿದೆ. ವಿವಿಧೆಡೆ ಚಳಿ ಶುರುವಾಗಿದೆ. ಶಿರಾ ನಗರ ಸೇರಿದಂತೆ ಸುತ್ತಮುತ್ತ ಪ್ರದೇಶಗಳಲ್ಲಿ ಮುಂಜಾನೆ ಮಂಜು ಆವರಿಸತೊಡಗಿದ್ದು, ಚಳಿಯೂ ಹೆಚ್ಚಾಗತೊಡಗಿದೆ.

ಮಂಜು ಕವಿದ ವಾತಾವರಣ ಪುಳಕಿತಗೊಂಡ ಜನ ನಗರದಲ್ಲಿ ಮಂಗಳವಾರ ಬೆಳಗ್ಗೆ ಬೇಗ ಎದ್ದು ಮನೆಯಿಂದ ಹೊರ ಹೊರಟವರಿಗೆ ದಟ್ಟ ಮಂಜು ಕವಿದ ವಾತಾವರಣ ರಸ್ತೆಯನ್ನು ಮಬ್ಬಾಗಿಸಿತ್ತು..

ಬೆಳಗ್ಗೆ ಬೇಗ ಎದ್ದು ಮನೆಯಿಂದ ಹೊರ ಹೊರಟವರಿಗೆ ದಟ್ಟ ಮಂಜು ಕವಿದ ವಾತಾವರಣ ರಸ್ತೆಯನ್ನು ಮಬ್ಬಾಗಿಸಿತ್ತು.. ಅದೇ ವಾತಾವರಣ ಸಾಕಷ್ಟು ಮಂದಿಯನ್ನು ಪುಳುಕಿತಗೊಳಿಸಿತು.

ಸಾಕಷ್ಟು ಮಂದಿ ಬೆಚ್ಚಗೆ ಮಲಗಿದ್ದರೆ, ಇನ್ನು ಬಹಳ ಮಂದಿಗೆ ವಾಯು ವಿಹಾರ, ವಾಕಿಂಗ್, ಜಾಗಿಂಗ್ ಕ್ರೇಜ್. ಇಂಥ ಹವ್ಯಾಸ ಇದ್ದವರಿಗೆ ಬೆಳಗಿನ ಮಂಜಿನ ಚೆಲ್ಲಾಟ ಮುದ ನೀಡಿತು. ಬೆಳಗ್ಗೆ 6 ರಿಂದಲೇ ಮಂಜು ಇತ್ತಾದರೂ , 9 ರ ಸುಮಾರಿಗೆ ದಟ್ಟವಾಗ ತೊಡಗಿತು. 8 ಆಗುವಷ್ಟರಲ್ಲಿ ಸುತ್ತಲಿನ ಎರಡು ಮೀಟರ್ ದೂರದ ವಾತಾವರಣ ಮಬ್ಬು. ಏನೂ ಕಾಣದಂತೆ ಮಂಜು ಆವರಿಸಿತ್ತು.

ಬೆಳಗ್ಗೆ ವಾಕಿಂಗ್, ಜಾಗಿಂಗ್ ಹೋಗಿದ್ದ ಮಂದಿ ದಟ್ಟ ಮಂಜು ಕವಿದ ವಾತಾವರಣದ ಮಜಾ ಅನುಭವಿಸಿದರು. ಮಂಜು ಆವರಿಸುವುದು ಅಪರೂಪದ ಸನ್ನಿವೇಶ. ಹೀಗಾಗಿ ಇದನ್ನು ಕಣ್ತುಂಬಿಕೊಂಡವರು ಪುಳುಕಿತಗೊಂಡದ್ದು ಸುಳ್ಳಲ್ಲ.

### ಅರ್ಜಿ ಆಹ್ವಾನ

**ಚಾಮರಾಜನಗರ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟ ಪಂಗಡ ಜನಾಂಗದ ನಿರುದ್ಯೋಗಿ ಯುವಕ, ಯುವತಿಯರಿಗೆ ಲಘುವಾಹನ ತರಬೇತಿ, ಟೈಲರಿಂಗ್ (ಹೆಣ್ಣುಮಕ್ಕಳಿಗೆ), ಕಂಪ್ಯೂಟರ್ ತರಬೇತಿ, ಅಗರ್ ಬತ್ತಿ ತಯಾರಿಕೆ, ಮೇಣದಬತ್ತಿ ತಯಾರಿಕೆ, ವೈರ್ ಅಥವಾ ಬಿದಿರು ಬುಟ್ಟಿ ತಯಾರಿಕೆ ಮತ್ತು ಜೇನು ಕೃಷಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ನಿರುದ್ಯೋಗಿ ಅಭ್ಯರ್ಥಿಗಳು ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅರ್ಜಿಯನ್ನು ನಗರದ ಕೊಳದ ಬೀದಿಯ ಶಿವು ಡ್ರೈವಿಂಗ್ ಸ್ಕೂಲ್ ಹತ್ತಿರದ ತಾಲ್ಲೂಕು ಪರಿಶಿಷ್ಟವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಡಿಸೆಂಬರ್ 31 ರೊಳಗೆ ಸಲ್ಲಿಸಬಹುದು. ಒಬ್ಬ ಅಭ್ಯರ್ಥಿಯು ಒಂದು ತರಬೇತಿಗೆ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಒಂದಕ್ಕಿಂತ ಹೆಚ್ಚು ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯ ಆಯ್ಕೆಯನ್ನು ರದ್ದುಗೊಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ 08226-223823 ಸಂಪರ್ಕಿಸುವಂತೆ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕರು ಕಾರ್ಯಪ್ರವೃತ್ತರಾದಾಗ ಮಾತ್ರ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ತಲುಪಲು ಸಾಧ್ಯ




ಮಾಲೂರು : ಮಕ್ಕಳಲ್ಲಿ ಜ್ಞಾನಭಿವೃದ್ಧಿಯ ಕೌಶಲ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಕರು ಕಾರ್ಯಪ್ರವೃತ್ತರಾದಾಗ ಮಾತ್ರ ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ತಲುಪಲು ಸಾಧ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಸ್. ಚಂದ್ರಕಲಾ ಹೇಳಿದರು.

ತಾಲ್ಲೂಕಿನ ಸಂತೇಹಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಗೆ ರೋಟರಿ ಸಂಸ್ಥೆ ಬೆಂಗಳೂರು ವತಿಯಿಂದ ಗ್ರೀನ್ ಬೋರ್ಡ್ ಡಿಸ್ಕ್‌ಗಳನ್ನು ವಿತರಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ರೋಟರಿ ಸಂಸ್ಥೆಯ ಕೌಶಿಕ್, ಆಶಾದೇವಿ ಅವರ ಬಳಿ ರೋಟರಿ ಸಂಸ್ಥೆಯ ಪ್ರಾಯೋಜಕರಾದ ಹೇಮಾ ಮಾಲಿನಿ ಅವರು ರೋಟರಿ ಸಂಸ್ಥೆಯರೊಂದಿಗೆ ಸಂಪರ್ಕವನ್ನು ಬೆಳೆಸಿ ಗ್ರಾಮೀಣ ಭಾಗದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗುವಂತಹ ಸಾಕಷ್ಟು ಭೌತಿಕ ಸೌಲಭ್ಯಗಳನ್ನು ಕೊಡಿಸುವ ನಿಟ್ಟಿನಲ್ಲಿ ರೋಟರಿ ಸಂಸ್ಥೆವರು ಉಚಿತವಾಗಿ ಶೈಕ್ಷಣಿಕ ಪರಿಕರಣಗಳನ್ನು ನೀಡಿದ್ದು, ಮಕ್ಕಳಿಗೆ ಈ ಪರಿಕರಗಳನ್ನು ಸದುಪಯೋಗಪಡಿಸಿಕೊಂಡು ಶಿಕ್ಷಕರು ದಾನಿಗಳು ನೀಡಿರುವಂತಹ ವಸ್ತುಗಳನ್ನು ಕಾಯಂ ದಾಸ್ತನವಹಿಗೆ ತೆಗೆದುಕೊಂಡು ದಾಖಲೆಗಳನ್ನು ನಿರ್ವಹಿಸುವ ಜೊತೆಗೆ ಮಕ್ಕಳಲ್ಲಿ ಜ್ಞಾನಭಿವೃದ್ಧಿಯನ್ನು ಕೌಶಲ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಶಿಕ್ಷಕರು ಕಾರ್ಯಪ್ರವೃತ್ತರಾಗಬೇಕು ಶಿಕ್ಷಕರು ತಮ್ಮ ವೃತ್ತಿ ಕೌಶಲ್ಯವನ್ನು ಹೆಚ್ಚಿಸಿಕೊಂಡು ಮಕ್ಕಳಲ್ಲಿ ಶೈಕ್ಷಣಿಕ ಪ್ರಗತಿಯನ್ನು ಸಾಧಿಸುವಂತೆ ಮಾಡಬೇಕು ಎಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಸಂತೆಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಮಾಯಮ್ಮ ನಾರಾಯಣಸ್ವಾಮಿ, ಶಿಕ್ಷಣ ಇಲಾಖೆಯ ಎಸ್.ಮೋಹನ್, ನಿವೃತ್ತ ಸಹಾಯಕ ಶಿಕ್ಷಣಾಧಿಕಾರಿ ಬಾಲಕೃಷ್ಣಪ್ಪ, ಶಾಲೆಯ ಮುಖ್ಯ ಶಿಕ್ಷಕಿ ಜ್ಯೋತಿಪ್ರಭ , ನಿವೃತ್ತ ಶಿಕ್ಷಕ ಎ. ವಿ ಮುನಿಯಪ್ಪ ಮತ್ತು ಶಾಲೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಪೂರ್ಣಾನಂದ ಸ್ವಾಮೀಜಿ ಕುರುಡುಮಲೆಗೆ ಭೇಟಿ

**ಮುಳಬಾಗಲು** : ಬೆಂಗಳೂರಿನ ಶ್ರೀ ಕ್ಷೇತ್ರ ತೈಲೇಶ್ವರ ಗಾಣಿಗರ ಮಹಾ ಸಂಸ್ಥಾನ ಮಠದಲ್ಲಿ 2025ರ ಜನವರಿ 11 ರಂದು ನಡೆಯಲಿರುವ ರಾಜ್ಯಮಟ್ಟದ ಗಾಣಿಗರ ಹಬ್ಬ ಪ್ರಯುಕ್ತ ಡಿಸೆಂಬರ್ 19 ರಂದು ಬೆಳಿಗ್ಗೆ 10 ಗಂಟೆಗೆ ಕುರುಡುಮಲೆ ಶ್ರೀ ವಿನಾಯಕ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ನಂತರ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಮಠದ ಪೀಠಾಧ್ಯಕ್ಷ ಶ್ರೀ ಪೂರ್ಣಾನಂದ ಪುರಿ ಮಹಾ ಸ್ವಾಮೀಜಿ ಚಾಲನೆ ನೀಡಲಿದ್ದಾರೆ ಎಂದು ಟ್ರಸ್ಟ್ನ ಸಂಚಾಲಕ ಪಿ.ಜಿ. ವಿಜಯ್ ಕುಮಾರ್ ಗಾಣಿಗ ತಿಳಿಸಿದ್ದಾರೆ. ಅವರು ಪತ್ರಿಕಾ ಹೇಳಿಕೆ ನೀಡಿ 2025ರ ಜನವರಿ 11 ರಂದು ಶ್ರೀ ಕ್ಷೇತ್ರ ತೈಲೇಶ್ವರ ಗಾಣಿಗರ ಮಹಾ ಸಂಸ್ಥಾಪಕ ಗುರುಗಳ ಪೀಠಾರೋಹಣದ ದ್ವಿತೀಯ ವಾರ್ಷಿಕೋತ್ಸವ ಮತ್ತು ನೂತನವಾಗಿ ನಿರ್ಮಿಸಿರುವ ಶಾಲಾ ಕಟ್ಟಡದ ಉದ್ಘಾಟನಾ ಸಮಾರಂಭಕ್ಕೆ ಸಮುದಾಯದ ಹೆಚ್ಚಿನ ಮಂದಿ ಭಾಗವಹಿಸಲು ಜಾಗೃತಿ ಮೂಡಿಸಲಾಗುತ್ತಿದೆ



ಜಿಲ್ಲೆಯ ಸಮುದಾಯದವರು ಕುರುಡುಮಲೆಯಲ್ಲಿ ನಡೆಯುವ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು. ಈ ಕಾರ್ಯಕ್ರಮಕ್ಕೆ ಸಮುದಾಯದ ರಾಜ್ಯಮಟ್ಟದ ಮುಖಂಡರು ಆಗಮಿಸಲಿದ್ದಾರೆ ಎಂದು ತಿಳಿಸಿದರು.




# ಅಂದಿನಿಂದಲೂ ಉಪೇಂದ್ರ ಅಂದ್ರೆ ವಿಶೇಷ ಪ್ರೀತಿ'



ಬುದ್ಧಿವಂತ ನಟ–ನಿರ್ದೇಶಕ ಖ್ಯಾತಿಯ ಉಪೇಂದ್ರ ಸಾರಥ್ಯದ ಬಹುನಿರೀಕ್ಷಿತ 'ಯುಐ' ಚಿತ್ರದ ಪ್ರೀ ರಿಲೀಸ್ ಈವೆಂಟ್ ಚಂದನವನದ ಗಣ್ಯರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು. ವರ್ಣರಂಜಿತ ಸಮಾರಂಭದಲ್ಲಿ ಶಿವರಾಜಕುಮಾರ್, ದುನಿಯಾ ವಿಜಯ್, ಡಾಲಿ ಧನಂಜಯ್ ಸೇರಿದಂತೆ ಅನೇಕ ಗಣ್ಯರು ಭಾಗಿಯಾಗಿದ್ದರು.

ಜಿ.ಮನೋಹರನ್ ಮತ್ತು ಕೆ.ಪಿ. ಶ್ರೀಕಾಂತ್ ನಿರ್ಮಿಸಿರುವ ಚಿತ್ರವಿದು. ಏಳೆಂಟು ವರ್ಷಗಳ ಬಳಿಕ ಉಪೇಂದ್ರ ನಿರ್ದೇಶಿಸಿ, ನಟಿಸಿರುವ ಬಹು ನಿರೀಕ್ಷಿತ "ಯು ಐ" ಚಿತ್ರದ ಪ್ರೀ ರಿಲೀಸ್ ಕಾರ್ಯಕ್ರಮಕ್ಕೆ ಕರುನಾಡ ಚಕ್ರವರ್ತಿ ಶಿವರಾಜಕುಮಾರ್, ದುನಿಯಾ ವಿಜಯ್, ನಟರಾಕ್ಷಸ ಡಾಲಿ ಧನಂಜಯ್, ಪ್ರಿಯಾಂಕಾ ಉಪೇಂದ್ರ, ನಿರ್ಮಾಪಕರಾದ ಉದಯ್ ಕೆ ಮೆಹ್ತಾ, ರಮೇಶ್ ರೆಡ್ಡಿ, ಕಾರ್ತಿಕ್ ಗೌಡ, ಯೋಗಿ ಜಿ ರಾಜ್, ಜಗದೀಶ್, ನಿರ್ದೇಶಕರಾದ ಪವನ್ ಒಡೆಯರ್, ಡಾ. ಸೂರಿ, ವೀರೇಶ್ ಚಿತ್ರಮಂದಿರದ ಕುಶಾಲ್ ಸೇರಿದಂತೆ ಮೊದಲಾದ ಸಾಕ್ಷಿಯಾಗಿ ಸಿನಿಮಾ ಯಶಸ್ಸಿಗೆ ಶುಭ ಕೋರಿದರು.

ಶಿವರಾಜಕುಮಾರ್ ಮಾತನಾಡಿ, ನಾನು "ಶ್" ಚಿತ್ರದ ಪ್ರೀಮಿಯರ್ ಶೋ ಅನ್ನು ಪಲ್ಲವಿ ಚಿತ್ರಮಂದಿರದಲ್ಲಿ ನೋಡಿದ್ದೆ. ಆನಂತರ "ಓಂ" ಚಿತ್ರದ ಚಿತ್ರೀಕರಣ ಸಮಯದಲ್ಲಿ ಉಪೇಂದ್ರ ಅವರ ಕಾರ್ಯವೈಖರಿ ನೋಡಿ, ನೀವು ಭಾರತೀಯ ಚಿತ್ರರಂಗದ ಮಹಾನ್ ನಿರ್ದೇಶಕರಲ್ಲೊಬ್ಬರಾಗುತ್ತೀರ ಎಂದು ಹೇಳಿದ್ದೆ. ಆಗಿನಿಂದಲೂ ನನಗೆ ಉಪೇಂದ್ರ ಅವರನ್ನು ಕಂಡರೆ ವಿಶೇಷ ಪ್ರೀತಿ. ನಾನು ಕೂಡಾ ಈ ಸಿನಿಮಾ ನೋಡುವ ಕಾತುರದಲ್ಲಿದ್ದೇನೆ ಎಂದು ತಿಳಿಸಿದರು.

ನಾವು ಉಪೇಂದ್ರ ಅವರ ನಿರ್ದೇಶನಕ್ಕೆ ಅಭಿಮಾನಿಗಳು. ಅವರ ಚಿತ್ರಗಳನ್ನು ನೋಡಿ ಬೆಳೆದವರು ನಾವು. ಒಂಭತ್ತು ವರ್ಷಗಳ ನಂತರ ಉಪೇಂದ್ರ ಅವರು ನಿರ್ದೇಶಿಸಿರುವ ಈ ಚಿತ್ರವನ್ನು ನೋಡಲು ಕಾಯುತ್ತಿರುವುದಾಗಿ ದುನಿಯಾ ವಿಜಯ್ ಹಾಗೂ ಡಾಲಿ ಧನಂಜಯ್ ಹೇಳಿದರು.

ಇಂದು ನಮ್ಮ ಚಿತ್ರಕ್ಕೆ ಪ್ರೋತ್ಸಾಹ ನೀಡಲು ಬಂದಿರುವ ಶಿವಣ್ಣ, ವಿಜಯ್, ಧನಂಜಯ್ ಸೇರಿದಂತೆ ಎಲ್ಲಾ ಗಣ್ಯರಿಗೆ ಧನ್ಯವಾದ ಅರ್ಪಿಸಿ ಮಾತನಾಡಿದ ನಾಯಕ ಹಾಗೂ ನಿರ್ದೇಶಕ ಉಪೇಂದ್ರ, ಈ ಚಿತ್ರ ಆರಂಭವಾಗಲು ಕಾರಣ ಕೆ.ಪಿ. ಶ್ರೀಕಾಂತ್. 50 ವರ್ಷಗಳ ಇತಿಹಾಸವಿರುವ ಲಹರಿ ಸಂಸ್ಥೆ ಈ ಚಿತ್ರ ನಿರ್ಮಾಣ ಮಾಡಿದ್ದು, ಮನೋಹರನ್ ಹಾಗೂ ಶ್ರೀಕಾಂತ್ ಅವರು ನಿರ್ಮಾಪಕರಾಗಿದ್ದಾರೆ. ನವೀನ್, ಲಹರಿ ವೇಲು, ನಾಗೇಂದ್ರ ನಿರ್ಮಾಣಕ್ಕೆ ಸಾಥ್ ನೀಡಿದ್ದಾರೆ.

ಇದು ನನ್ನೊಬ್ಬನ ಚಿತ್ರವಲ್ಲ. ನನ್ನ ತಂಡದ ಚಿತ್ರ. ಈ ಚಿತ್ರ ಉತ್ತಮವಾಗಿ ಮೂಡಿಬರಲು ಇವರೆಲ್ಲರ ಸಹಕಾರವೇ ಕಾರಣ. ಈ ಸಮಯದಲ್ಲಿ ಚಿತ್ರತಂಡದ ಪ್ರತಿಯೊಬ್ಬರಿಗೂ ಧನ್ಯವಾದ ತಿಳಿಸುತ್ತೇನೆ. ಇದೇ ಡಿಸೆಂಬರ್ 20ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ಎಲ್ಲರೂ ನೋಡಿ ಎಂದರು.

ಸಮಾರಂಭಕ್ಕೆ ಆಗಮಿಸಿರುವ ಎಲ್ಲಾ ಗಣ್ಯರಿಗೂ ಹಾಗೂ ಚಿತ್ರತಂಡದವರಿಗೆ ಧನ್ಯವಾದ. ಇದೇ 20 ವಿಶ್ವದಾದ್ಯಂತ ಕನ್ನಡ ಸೇರಿದಂತೆ ಅನೇಕ ಭಾಷೆಗಳಲ್ಲಿ ಪ್ಯಾನ್ ಇಂಡಿಯಾ ಚಿತ್ರವಾಗಿ "ಗಖ" ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಈಗಾಗಲೇ ಮುಂಗಡ ಬುಕ್ಕಿಂಗ್ ಆರಂಭವಾಗಿದ್ದು, ಆಲ್ ಮೋಸ್ಟ್ ಫುಲ್ ಆಗಿದೆ. ಆರಂಭದಲ್ಲೇ ನಮ್ಮ ಚಿತ್ರಕ್ಕೆ ಸಿಗುತ್ತಿರುವ ಬೆಂಬಲಕ್ಕೆ ಮನ ತುಂಬಿ ಬಂದಿದೆ ಎಂದರು ನಿರ್ಮಾಪಕ ಕೆ.ಪಿ. ಶ್ರೀಕಾಂತ್ ಹಾಗೂ ಸಹ ನಿರ್ಮಾಪಕ ನವೀನ್. ಕಾರ್ಯಕ್ರಮದಲ್ಲಿ ಚಿತ್ರದ ನಾಯಕಿ ರೀಷ್ಮಾ ನಾಣಯ್ಯ, ಕಲಾವಿದರಾದ ರವಿಶಂಕರ್, ಸುಧೀ, ನಿಧಿ ಸುಬ್ಬಯ್ಯ, ನೀತು, ಕಾರ್ಯಕಾರಿ ನಿರ್ಮಾಪಕ ಲಹರಿ ವೇಲು ಹಾಗೂ ವಿತರರಕರಾದ ಕೆ.ವಿ. ಎನ್ ಸಂಸ್ಥೆಯ ಸುಪ್ರೀತ್ ಸೇರಿ ಹಲವರು "ಗಖ" ಕುರಿತು ಮಾತನಾಡಿದರು.



# 'ಸಿನಿಮಾ ತಡವಾಗಿದ್ದಕ್ಕೆ ಕ್ಷಮಿಸಿ, ಲೇಟಾದ್ರೂ ಲೇಟೆಸ್ಟಾಗಿ ಬರ್ತೀವಿ'

ಕನ್ನಡ ಚಿತ್ರರಂಗದ ಕೀರ್ತಿ, ಅಭಿನಯ ಚಕ್ರವರ್ತಿ ಸುದೀಪ್ ಮುಖ್ಯಭೂಮಿಕೆಯ ಮುಂದಿನ ಬಹುನಿರೀಕ್ಷಿತ ಸಿನಿಮಾ 'ಮ್ಯಾಕ್ಸ್' ಬಿಡುಗಡೆಗೆ ದಿನಗಣನೆ ಆರಂಭಗೊಂಡಿದೆ. ಅಮೋಘ ಅಭಿನಯ, ವ್ಯಕ್ತಿತ್ವ, ನಡೆನುಡಿಯಿಂದ ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಸಂಪಾದಿಸಿರುವ ಕಿಚ್ಚನ ಮುಂದಿನ ಸಿನಿಮಾ ಕಣ್ತುಂಬಿಕೊಳ್ಳಲು ಪ್ರೇಕ್ಷಕರು ಸಜ್ಜಾಗಿದ್ದಾರೆ. ಪ್ರಮೋಶನ್ ಭಾಗವಾಗಿ ಇತ್ತೀಚೆಗೆ 'ಖಂಟಿ ಡಿಂಚಿಡಿ' ಶೀರ್ಷಿಕೆಯ ಹಾಡು ಅನಾವರಣಗೊಂಡಿದೆ.

ಕಲೈಪುಲಿ ಎಸ್.ತನು ಅವರ ವಿ.ಕ್ರಿಯೇಷನ್ಸ್ ಹಾಗೂ ಸುದೀಪ್ ಅವರ ಕಿಚ್ಚ ಕ್ರಿಯೇಷನ್ಸ್ ನಿರ್ಮಾಣದ 'ಮ್ಯಾಕ್ಸ್' ಸಿನಿಮಾಗೆ ವಿಜಯ್ ಕಾರ್ತಿಕೇಯ [illegible]ಕ್ಷನ್ ಕಟ್ ಹೇಳಿದ್ದಾರೆ. ಸುದೀಪ್ ಪೊಲೀಸ್ ಅಧಿಕಾರಿ ಪಾತ್ರದಲ್ಲಿ ನಾಯಕರಾಗಿ ನಟಿಸಿದ್ದಾರೆ. ಬಹುನಿರೀಕ್ಷಿತ ಚಿತ್ರಕ್ಕಾಗಿ ಅನೂಪ್ ಭಂಡಾರಿ ಬರೆದಿರುವ, ವಿಜಯ್ ಪ್ರಕಾಶ್ ಹಾಡಿರುವ ಹಾಗೂ ಅಜನೀಶ್ ಲೋಕನಾಥ್ ಸಂಗೀತ ನೀಡಿರುವ 'ಖಂಟಿ ಡಿಂಚಿಡಿ' ಶೀರ್ಷಿಕೆಯ ಲಿರಿಕಲ್ ವಿಡಿಯೋ ಸಾಂಗ್ ಅನ್ನು ಇತ್ತೀಚೆಗೆ ಚಿತ್ರತಂಡ ಅದ್ದೂರಿಯಾಗಿ ಬಿಡುಗಡೆ ಮಾಡಿದೆ.

ಬೆಂಗಳೂರಿನ ಒರಾಯನ್ ಮಾಲ್‌ನ ಆವರಣದಲ್ಲಿರುವ ಕೆರೆಯಂಗಳದಲ್ಲಿ ನಡೆದ ವರ್ಣರಂಜಿತ ಸಮಾರಂಭಕ್ಕೆ ಸಹಸ್ರಾರು ಅಭಿಮಾನಿಗಳು ಸಾಕ್ಷಿಯಾದರು. ಮ್ಯಾಕ್ಸ್ ಸಿನಿಮಾದ ಸಾಂಗ್ ಹಾಗೂ ಟ್ರೇಲರ್‌ಗೆ ಅಭಿಮಾನಿಗಳು ಫಿದಾ ಆದ್ರು. ಕಿಚ್ಚ ಸುದೀಪ್, ನಿರ್ಮಾಪಕ ಕಲೈಪುಲಿ ಎಸ್ ತನು, ನಿರ್ದೇಶಕ ವಿಜಯ್ ಕಾರ್ತಿಕೇಯ, ನಟಿಯರಾದ ಸಂಯುಕ್ತ ಹೊರನಾಡು, ಸುಕೃತ ವಾಗ್ಲೆ ಸೇರಿದಂತೆ ಮೊದಲಾದವರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸಾಂಗ್ ರಿಲೀಸ್ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು."ನಿಮ್ಮನ್ನೆಲ್ಲಾ ನೋಡಿ ಬಹಳ ಖುಷಿ ಆಗುತ್ತಿದೆ. ಎರಡೂವರೆ ವರ್ಷಗಳ ನಂತರ ಡಿಸೆಂಬರ್ 25ರಂದು ನನ್ನ ಅಭಿನಯದ ಮ್ಯಾಕ್ಸ್ ಚಿತ್ರ ಬಿಡುಗಡೆಯಾಗುತ್ತಿದೆ. ತಡವಾಗಿರುವುದಕ್ಕೆ ನಿಮ್ಮಲ್ಲಿ ಕ್ಷಮೆ ಕೇಳುತ್ತೇನೆ. ಆದರೆ, ನಾವು ಲೇಟಾಗಿ ಬಂದರೂ ಲೇಟೆಸ್ಟಾಗಿ ಬರುತ್ತೇವೆ. ನಿಮ್ಮೆಲ್ಲರ ಪ್ರೋತ್ಸಾಹ ಸದಾ ಇರಲಿ" ಎಂದು ಸುದೀಪ್ ಮನವಿ ಮಾಡಿದರು.

"ಇಂದು ಸುದೀಪ್ ಅವರ ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಕಂಡು ಆನಂದವಾಗುತ್ತಿದೆ" ಎಂದು ಮಾತು ಆರಂಭಿಸಿದ ನಿರ್ಮಾಪಕ ಕಲೈಪುಲಿ ಎಸ್. ತನು, "ಡಿಸೆಂಬರ್ 25 ನಮ್ಮ ಚಿತ್ರ ವಿಶ್ವದಾದ್ಯಂತ ಅದ್ದೂರಿಯಾಗಿ ತೆರೆಗಪ್ಪಳಿಸಲಿದೆ. ನಮ್ಮೆಲ್ಲರ ಬೆಂಬಲವಿರಲಿ" ಎಂದರು.

ಸುದೀಪ್ ಅವರೊಂದಿಗೆ ವರಲಕ್ಷ್ಮೀ ಶರತ್‌ಕುಮಾರ್, ತೆಲುಗು ನಟ ಸುನೀಲ್, ಶರತ್ ಲೋಹಿತಾಶ್ವ, ಪ್ರಭಾಕರ್, ಪ್ರಮೋದ್ ಶೆಟ್ಟಿ, ನರೇನ್ ಸೇರಿ ಹಲವರು ನಟಿಸಿದ್ದಾರೆ. 50 ಕೋಟಿ ರೂಪಾಯಿ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣಗೊಂಡಿದೆ. ಸುದೀಪ್ ನಟನೆಯ ಜೊತೆ ನಿರ್ಮಾಣವನ್ನೂ ಮಾಡಿರುವ ಹಿನ್ನೆಲೆಯಲ್ಲಿ ಮ್ಯಾಕ್ಸ್ ಮೇಲಿನ ನಿರೀಕ್ಷೆ ದೊಡ್ಡದಿದೆ. ಸಿನಿಮಾ ಕನ್ನಡ ಅಲ್ಲದೇ ಐದು ಭಾಷೆಗಳಲ್ಲಿ ಅದ್ದೂರಿಯಾಗಿ ಬಿಡುಗಡೆಯಾಗಲಿದೆ.

# 20 ವರ್ಷಗಳ ಬಳಿಕ ನನಸಾಯ್ತು ಅಪ್ಪು ಕನಸು

ನಿರ್ಮಾಪಕಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಶಿಕ್ಷಣ ಕ್ಷೇತ್ರ ಪ್ರವೇಶಿಸುತ್ತಿದ್ದಾರೆ. 'ಜೂನಿಯರ್ ಟೋಸ್ ಇಂಟರ್ನ್ಯಾಷನಲ್ ಪ್ರೀಸ್ಕೂಲ್' ಅನ್ನು ಪ್ರಾರಂಭಿಸಲು ಅವರು ಸುನಿತಾ ಗೌಡ, ಸ್ಫೂರ್ತಿ ವಿಶ್ವಾಸ್, ಶ್ರುತಿ ಕಿರಣ್ ಮತ್ತು ಡಾ.ಬಿಂದು ರಾಣಾ ಅವರೊಂದಿಗೆ ಕೈಜೋಡಿಸಿದ್ದಾರೆ.

ಜೂನಿಯರ್ ಟೋಸ್ ಇಂಟರ್ನ್ಯಾಷನಲ್ ಪ್ರೀಸ್ಕೂಲ್, ಮಕ್ಕಳ ಕಲಿಕೆ ಮತ್ತು ಬೆಳವಣಿಗೆಗೆ ಹೊಸ ದಾರಿ ನಿರ್ಮಿಸಲು ಸಜ್ಜಾಗಿದೆ. ಖ್ಯಾತ ಶಿಕ್ಷಣತಜ್ಞೆ ಸುನೀತಾ ಗೌಡ ನೇತೃತ್ವದಲ್ಲಿ, ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರ ದೂರದೃಷ್ಟಿಯ ಪ್ರೋತ್ಸಾಹ ಮತ್ತು ಡಾ.ಬಿಂದು ರಾಣಾ ಅವರ ಅತ್ಯಾಧುನಿಕ ಪಠ್ಯಕ್ರಮದೊಂದಿಗೆ ಈ ಶಾಲೆಯನ್ನು ಮಕ್ಕಳಲ್ಲಿ ಅವರ ಆರಂಭಿಕ ವರ್ಷಗಳಲ್ಲಿ ನಾಯಕತ್ವ, ಸೃಜನಶೀಲತೆ ಮತ್ತು ಉದ್ಯಮಶೀಲತೆಯ ಚಿಂತನೆಯನ್ನು ಪೋಷಿಸಲು ವಿನ್ಯಾಸಗೊಳಿಸಲಾಗಿದೆ.

ನಾಯಕತ್ವ ತರಬೇತಿದಾರರು ಮತ್ತು ಪ್ರೇರಕ ಭಾಷಣಕಾರ್ತಿ ಸ್ಫೂರ್ತಿ ವಿಶ್ವಾಸ್ ಅವರು ತಮ್ಮ ಅನುಭವದೊಂದಿಗೆ ಮುಂದಿನ ತಲೆಮಾರಿನ ಆತ್ಮವಿಶ್ವಾಸಿ ಯುವ ನಾಯಕರಿಗೆ ಸ್ಫೂರ್ತಿ ನೀಡಲು ಕೈಜೋಡಿಸಿದ್ದಾರೆ. ಈ ಯೋಜನೆ ಇಂಡಿಯನ್ ವುಮನ್ ಅಚೀವರ್ಸ್ ಅವಾರ್ಡ್ಸ್ ಕಾರ್ಯಕ್ರಮದಲ್ಲಿ, ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಮತ್ತು ಶಿಕ್ಷಣತಜ್ಞೆ ಐಶ್ವರ್ಯಾ ಡಿ.ಕೆ. ಎಸ್ ಹೆಗ್ಡೆ ಅವರ ಸಾನಿಧ್ಯದಲ್ಲಿ ಉದ್ಘಾಟನೆಯಾಯಿತು.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅಶ್ವಿನಿ ಪುನೀತ್ ರಾಜ್‌ಕುಮಾರ್, ನಾನು ಮತ್ತು ಪುನೀತ್ 20 ವರ್ಷಗಳಿಂದ ಶಿಕ್ಷಣ ಕ್ಷೇತ್ರವನ್ನು ಪ್ರವೇಶಿಸುವ ಕನಸು ಕಂಡಿದ್ದೆವು. ಈ ಯೋಜನೆ ನಮ್ಮ ಕನಸನ್ನು ನನಸಾಗಿಸುತ್ತಿದೆ. ಪ್ರತೀ ಮಗುವಿನ ಸಾಮರ್ಥ್ಯವನ್ನು ಪೋಷಿಸುವ ಶಾಲೆಗಳನ್ನು ರಚಿಸುವುದು, ಎಜುಕೇಶನ್ ಎಕ್ಸಲೆನ್ಸ್ ಮಾತ್ರವಲ್ಲದೇ ಪಾತ್ರ ಮತ್ತು ನಾಯಕತ್ವವನ್ನೂ ನಿರ್ಮಿಸುವುದು ನಮ್ಮ ಉದ್ದೇಶ ಎಂದು ತಿಳಿಸಿದರು.

ಸಚಿವ ಡಾ.ಸುಧಾಕರ್ ಮಾತನಾಡಿ, ಶಿಕ್ಷಣ ವ್ಯಕ್ತಿಯ ಭವಿಷ್ಯದ ಸ್ಥಾಪನೆಯ ಪ್ರಮುಖ ಕೀಲಿ. ಪ್ರೀಸ್ಕೂಲ್‌ಗಳಲ್ಲಿ ಕಳೆದ ಹಲವು ವರ್ಷಗಳಿಂದ ಪಠ್ಯಕ್ರಮದಲ್ಲಿ ಗಣನೀಯ ಬದಲಾವಣೆಗಳು ನಡೆದಿವೆ. ಈ ಮಹಿಳಾ ತಂಡವು ಶಿಕ್ಷಣ ಕ್ಷೇತ್ರಕ್ಕೆ ಕಾಲಿಡುತ್ತಿರುವುದು ಸಂತೋಷದ ವಿಚಾರ ಎಂದು ತಿಳಿಸಿದರು.

ಬೆಂಗಳೂರು ನಗರದಲ್ಲಿ ಐದು ಕೇಂದ್ರಗಳಿಂದ ಆರಂಭ: ಮೊದಲ ಐದು ಕಲಿಕಾ ಕೇಂದ್ರಗಳು ಬೆಂಗಳೂರಿನಲ್ಲಿ ಪ್ರಾರಂಭವಾಗಲಿದ್ದು, ಆಧುನಿಕ ಸೌಲಭ್ಯಗಳು, ಅನುಭವಿ ಶಿಕ್ಷಕರು ಮತ್ತು ನವೀನ ಪಠ್ಯಕ್ರಮ ಇರಲಿವೆ. ಈ ಕೇಂದ್ರಗಳು ಕೇವಲ ಶಾಲೆಗಳಷ್ಟೇ ಅಲ್ಲ, ಅವು ಮಕ್ಕಳಿಗೆ ಸೃಜನಶೀಲವಾಗಿ ಚಿಂತಿಸಲು, ಆತ್ಮವಿಶ್ವಾಸದಿಂದ ನಡೆದುಕೊಳ್ಳಲು ಮತ್ತು ಧೈರ್ಯದಿಂದ ನಾಯಕತ್ವ ತೋರಲು ಪ್ರೇರಣೆ ನೀಡುವ ಪರಿವರ್ತನಾತ್ಮಕ ಸ್ಥಳಗಳಾಗಿ ರೂಪುಗೊಳ್ಳುತ್ತಿವೆ. ಈ ಯೋಜನೆಯ ಕುರಿತು ಮಾತನಾಡಿದ ಸುನಿತಾ ಗೌಡ, ಭವಿಷ್ಯಕ್ಕೆ ಸಿದ್ಧವಾಗಿರುವ ಪೀಳಿಗೆಯನ್ನು ರಚಿಸುವ ನಿಟ್ಟಿನಲ್ಲಿ ಇದೊಂದು ಹೆಜ್ಜೆಯಾಗಿದೆ. ಈ ಕೇಂದ್ರಗಳು ಮಕ್ಕಳನ್ನು ಧೈರ್ಯದಿಂದ ಕನಸು ಕಾಣಲು, ಸೃಜನಾತ್ಮಕವಾಗಿ ಯೋಚಿಸಲು ಮತ್ತು ಆತ್ಮವಿಶ್ವಾಸದಿಂದ ಮುನ್ನಡೆಯಲು ಸಬಲೀಕರಣಗೊಳಿಸುತ್ತವೆ ಎಂದು ತಿಳಿಸಿದ್ದಾರೆ.

ಡಾ.ಬಿಂದು ರಾಣಾ ಮಾತನಾಡಿ, "ನಮ್ಮ ಪಠ್ಯಕ್ರಮವನ್ನು ಮಕ್ಕಳಿಗೆ ವೈಜ್ಞಾನಿಕ ತತ್ವಗಳು, ಸೃಜನಶೀಲತೆ ಮತ್ತು ನಾಯಕತ್ವವನ್ನು ಸಂಯೋಜಿಸುವ ಅಡಿಪಾಯವನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರಯಾಣವು ಬೆಂಗಳೂರಿನಿಂದ ಆರಂಭವಾಗುತ್ತಿದ್ದರೂ, ಈ ತಂಡ ಈ ಉಪಕ್ರಮವನ್ನು ಭಾರತದೆಲ್ಲೆಡೆಯ ನಗರಗಳಿಗೆ ವಿಸ್ತರಿಸುವ ಉತ್ಸಾಹವನ್ನು ಹೊಂದಿದೆ.



# 4 ಎಸೆತಗಳಲ್ಲಿ ನಾಲ್ಕು ವಿಕೆಟ್: ಡಬಲ್ ಹ್ಯಾಟ್ರಿಕ್‌ನೊಂದಿಗೆ ಚರಿತ್ರೆ ಸೃಷ್ಟಿಸಿದ ಬೌಲರ್!

ಕ್ರಿಕೆಟ್‌ನಲ್ಲಿ ಹ್ಯಾಟ್ರಿಕ್ ವಿಕೆಟ್ ಪಡೆಯುವುದು ಸುಲಭದ ಮಾತಲ್ಲ, ಆದರೆ ಇಲ್ಲೊಬ್ಬ ಬೌಲರ್ ಡಬಲ್ ಹ್ಯಾಟ್ರಿಕ್ ವಿಕೆಟ್ ಪಡೆದು ಚರಿತ್ರೆ ಸೃಷ್ಟಿಸಿದ್ದಾರೆ.

ಹೌದು, ಐಸಿಸಿ ಪುರುಷರ ಖಿ20 ವಿಶ್ವಕಪ್ ಅಮೆರಿಕ ಸಬ್ ರೀಜಿನಲ್ ಕ್ವಾಲಿಫೈಯರ್ ಪಂದ್ಯದಲ್ಲಿ ಈ ದಾಖಲೆ ನಿರ್ಮಾಣವಾಗಿದೆ. ಸೈಮನ್ ಐಲ್ಯಾಂಡ್ಸ್ ವಿರುದ್ಧ ನಡೆದ ಪಂದ್ಯದಲ್ಲಿ ಅರ್ಜೆಂಟೀನಾದ ಆಟಗಾರ ಹೆರ್ನಾನ್ ಫೆನ್ನೆಲ್ ಡಬಲ್ ಹ್ಯಾಟ್ರಿಕ್ ಸಾಧನೆ ಮಾಡಿದ್ದಾರೆ. ಫೆನೆಲ್ 4 ಎಸೆತಗಳಲ್ಲಿ 4 ವಿಕೆಟ್ ಪಡೆದು ಇತಿಹಾಸ ನಿರ್ಮಿಸಿದರು. ಅವರು ಓವರ್‌ನ ಮೂರನೇ ಎಸೆತದಲ್ಲಿ ಟ್ರಾಯ್ ಟೇಲರ್ ಅವರನ್ನು ಔಟ್ ಮಾಡಿದರು ನಂತರ ಮುಂದಿನ ಮೂರು ಎಸೆತಗಳಲ್ಲಿ ಅಲೆಸ್ಟೈರ್ ಇಫ್ಲೆ, ರೊನಾಲ್ಡ್ ಎಬ್ಯಾಂಕ್ಸ್ ಮತ್ತು ಅಲೆಜಾಂಡ್ರೊ ಮಾರಿಸ್ ಅವರ ವಿಕೆಟ್‌ಗಳನ್ನು ಕಬಳಿಸುವ ಮೂಲಕ ಚರಿತ್ರೆ ಸೃಷ್ಟಿಸಿದ್ದಾರೆ.




ಇದರೊಂದಿಗೆ ಈ ಪಂದ್ಯದಲ್ಲಿ ಫೆನ್ನೆಲ್ ಒಟ್ಟು 5 ವಿಕೆಟ್‌ಗಳನ್ನು ಪಡೆದು ಹೆಚ್ಚು ವಿಕೆಟ್ ಪಡೆದ ಬೌಲರ್ ಎನಿಸಿಕೊಂಡರು. ಅವರು ತಮ್ಮ ವಿಧ್ವಂಸಕ ಬೌಲಿಂಗ್ ಮೂಲಕ ಕೇವಲ 14 ರನ್ ನೀಡಿದರು. ಈ ಮೂಲಕ ಟಿ–20 ಕ್ರಿಕೆಟ್ ಇತಿಹಾಸದಲ್ಲಿ ಡಬಲ್ ಹ್ಯಾಟ್ರಿಕ್‌ಗಳಿಸಿದ ಆರನೇ ಬೌಲರ್ ಎನಿಸಿಕೊಂಡರು. ಲಸಿತ್ ಮಾಲಿಂಗ, ರಶೀದ್ ಖಾನ್, ಕರ್ಟಿಸ್ ಕ್ಯಾಂಫರ್, ಜೇಸನ್ ಹೋಲ್ಡರ್ ಮತ್ತು ವಾಸಿಮ್ ಯಾಕೋಬ್ ಒಳಗೊಂಡಿರುವ ಬೌಲರ್‌ಗಳ ಪಟ್ಟಿಗೆ ಫೆನ್ನೆಲ್ ಸೇರಿದ್ದಾರೆ.

ಈ ಡಬಲ್ ಹ್ಯಾಟ್ರಿಕ್‌ನೊಂದಿಗೆ 36 ವರ್ಷದ ಅರ್ಜೆಂಟೀನಾದ ವೇಗಿ ಟಿ20 ಕ್ರಿಕೆಟ್‌ನಲ್ಲಿ ಒಂದಕ್ಕಿಂತ ಹೆಚ್ಚು ಹ್ಯಾಟ್ರಿಕ್ ಗಳಿಸಿದ ಬೌಲರ್‌ಗಳ ಪಟ್ಟಿಯಲ್ಲಿ ಸ್ಥಾನ ಪಡೆದರು. ಇದಕ್ಕೂ ಮೊದಲು, ಫೆನ್ನೆಲ್ ಐಸಿಸಿ ಪುರುಷರ ಖಿ20 ವಿಶ್ವಕಪ್ ಅಮೆರಿಕದ ಪ್ರಾದೇಶಿಕ ಅರ್ಹತಾ ಪಂದ್ಯದ 2021ರಲ್ಲಿ ಪನಾಮ ವಿರುದ್ಧ ಈ ಸಾಧನೆ ಮಾಡಿದ್ದರು. ಒಟ್ಟಾರೆ ಈ ಸಾಧನೆ ಮಾಡಿದ ವಿಶ್ವದ ಆರನೇ ಬೌಲರ್ ಎನಿಸಿಕೊಂಡರು. ಇದುವರೆಗೆ ವಾಸಿಂ ಅಬ್ಬಾಸ್, ಪ್ಯಾಟ್ ಕಮ್ಮಿನ್ಸ್, ಮಾರ್ಕ್ ಪಾವ್ಲೋವಿಚ್, ಟಿಮ್ ಸೌದಿ ಮತ್ತು ಲಸಿತ್ ಮಾಲಿಂಗ ಮಾತ್ರ ಡಬಲ್ ಹ್ಯಾಟ್ರಿಕ್ ಸಾಧನೆ ಮಾಡಿದ್ದಾರೆ.

ಪೆನ್ನೆಲ್ 5 ವಿಕೆಟ್ ಪಡೆದರೂ ಈ ಪಂದ್ಯದಲ್ಲಿ ಅರ್ಜೆಂಟೀನಾ ಸೋಲನುಭವಿಸಿತು. ಮೊದಲು ಬ್ಯಾಟ್ ಮಾಡಿದ್ದ ಕೇಮನ್ ಐಲ್ಯಾಂಡ್ಸ್ ತಂಡ 116 ರನ್ ಗಳಿಸಿತು. ಇದಕ್ಕುತ್ತರವಾಗಿ ಅರ್ಜೆಂಟೀನಾ 94 ರನ್‌ಗಳಿಗೆ ಸರ್ವಪತನ ಕಂಡಿತು. ಅಂತಿಮವಾಗಿ ಅರ್ಜೆಂಟೀನಾ ಈ ಪಂದ್ಯವನ್ನು 22 ರನ್‌ಗಳಿಂದ ಕಳೆದುಕೊಂಡಿತು.

# 'ಅಂಗಾರೋನ್' ಹಾಡಿಗೆ ಪತ್ನಿ ಜೊತೆ ಸೂರ್ಯಕುಮಾರ್ ಯಾದವ್ ಡ್ಯಾನ್ಸ್!



ದಿ ರೂಲ್ ಚಿತ್ರದ ನಿರೀಕ್ಷೆ ಎಂದಿಗಿಂತಲೂ ಹೆಚ್ಚಾಗಿದೆ. ಅಲ್ಲು ಅರ್ಜುನ್ ಪುಷ್ಪರಾಜ್ ಆಗಿ ಮತ್ತು ರಶ್ಮಿಕಾ ಮಂದಣ್ಣ ಶ್ರೀವಲ್ಲಿಯಾಗಿ ನಟಿಸಿರುವ ಈ ಚಿತ್ರವು ಮೊದಲ ಚಿತ್ರವನ್ನು ಬ್ಲಾಕ್‌ಬಸ್ಟರ್ ಆಗಿ ಮಾಡಿದ ಅದೇ ಅದ್ಭುತ ಆಕ್ಷನ್ ಮತ್ತು ನೃತ್ಯವನ್ನು ಭರವಸೆ ನೀಡುತ್ತದೆ. ಫಹಾದ್ ಫಾಸಿಲ್ ಖಳನಾಯಕ ಭನ್ವರ್ ಸಿಂಗ್ ಶೇಖಾವತ್ ಆಗಿ ಮರಳುತ್ತಾರೆ, ಇದು ಅವನಿಗೂ ಪುಷ್ಪರಾಜನಿಗೂ ನಡುವಿನ ಮುಖಾಮುಖಿಯನ್ನು ಇನ್ನಷ್ಟು ರೋಮಾಂಚನ ಗೊಳಿಸುತ್ತದೆ.

ಪುಷ್ಪ 2 ಚಿತ್ರದ ಪ್ರಮುಖ ಆಕರ್ಷಣೆಗಳಲ್ಲಿ ಒಂದು 'ಅಂಗಾರೋನ್' ಹಾಡು. ಉತ್ಸಾಹಭರಿತ ಬೀಟ್ ಮತ್ತು ಕ್ಯಾಚಿ ಹುಕ್ ಸ್ಟೆಪ್‌ಗಳೊಂದಿಗೆ, ಈ ಹಾಡು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಹಿಟ್ ಆಗಿದೆ. ಅಭಿಮಾನಿಗಳು ವೈರಲ್ ವೀಡಿಯೊಗಳಲ್ಲಿ ಹಾಡಿನ ನೃತ್ಯ ಸ್ಟೆಪ್‌ಗಳನ್ನು ಮರುಸೃಷ್ಟಿಸುತ್ತಿದ್ದಾರೆ, ಇದು ಅದರ ಜನಪ್ರಿಯತೆಗೆ ಮತ್ತಷ್ಟು ಸೇರಿಸುತ್ತದೆ. ಈ ಟ್ರೆಂಡ್‌ಗೆ ಸೇರಿದವರಲ್ಲಿ ಭಾರತೀಯ ಕ್ರಿಕೆಟಿಗ ಸೂರ್ಯಕುಮಾರ್ ಯಾದವ್ ಕೂಡ ಒಬ್ಬರು. ಒಂದು ಮದುವೆಯಲ್ಲಿ ಅವರು ಮತ್ತು ಅವರ ಪತ್ನಿ ಅಂಗಾರೋನ್‌ಗೆ ನೃತ್ಯ ಮಾಡುವ ವೀಡಿಯೊ ಆನ್‌ಲೈನ್‌ನಲ್ಲಿ ಕಾಣಿಸಿಕೊಂಡಿತು ಮತ್ತು ತಕ್ಷಣವೇ ವೈರಲ್ ಆಯಿತು. ಕ್ರಿಕೆಟಿಗನ ಭರ್ಜರಿ ಡ್ಯಾನ್ಸ್ ಅಭಿಮಾನಿಗಳಿಗೆ ಹುಚ್ಚೆದ್ದು ಕುಣಿಯುವಂತೆ ಮಾಡಿದೆ.

ಅಲ್ಲು ಅರ್ಜುನ್ ಅವರ ಅಭಿಮಾನಿ ಪೇಜ್ ಒಂದು ಈ ವೀಡಿಯೊವನ್ನು ಹಂಚಿಕೊಂಡಿದ್ದು, "ಕ್ರಿಕೆಟಿಗ @surya_14kumar #Angaron ಸೂಸೆಕಿ ಹಾಡಿಗೆ ನೃತ್ಯ ಮಾಡುತ್ತಿದ್ದಾರೆ @alluarjun #Pushpa2TheRule" ಎಂದು ಬರೆದು ಚಿತ್ರ ಮತ್ತು ಅದರ ಧ್ವನಿಪಥದ ಬಗ್ಗೆ ಉತ್ಸಾಹವನ್ನು ಹೆಚ್ಚಿಸಿದೆ.

ಸುಕುಮಾರ್ ನಿರ್ದೇಶನದ ಪುಷ್ಪ 2: ದಿ ರೂಲ್ ಅನ್ನು ಮೈತ್ರಿ ಮೂವಿ ಮೇಕರ್ಸ್ ಮತ್ತು ಸುಕುಮಾರ್ ರೈಟಿಂಗ್ಸ್ ನಿರ್ಮಿಸಿದ್ದಾರೆ, ಸಂಗೀತವನ್ನು ಟಿ–ಸೀರೀಸ್ ನೀಡಿದೆ. ಅದರ ಪ್ರಬಲ ದೃಶ್ಯಗಳು, ಅದ್ಭುತ ಪ್ರದರ್ಶನಗಳು ಮತ್ತು ಮರೆಯಲಾಗದ ಧ್ವನಿಪಥದೊಂದಿಗೆ, ಈ ಚಿತ್ರವು 5 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಈ ಚಿತ್ರ ಬ್ಲಾಕ್‌ಬಸ್ಟರ್ ಆಗುವ ನಿರೀಕ್ಷೆಯಿದೆ. ಅಂಗಾರೋನ್‌ನ ಹಾಡಿನ ಕ್ರೇಜ್ ಯಾವ ಮಟ್ಟಿಗೆ ಸುಂಟರಗಾಳಿ ಎಬ್ಬಿಸಿದೆ ಎಂದರೆ ದೇಶಾದ್ಯಂತ ಭಾಷೆ ಗಡಿ ಇಲ್ಲದೆ ಈ ಹಾಡಿಗೆ ಸ್ಟೆಪ್ ಹಾಕುತ್ತಿದ್ದಾರೆ. ಇದು ಚಿತ್ರತಂಡದ ಉತ್ಸಾಹವನ್ನು ಇನ್ನಷ್ಟು ಹೆಚ್ಚಿಸಿದೆ, ಮತ್ತು ಅಭಿಮಾನಿಗಳು ಪುಷ್ಪರಾಜ್ ಅವರನ್ನು ಮತ್ತೆ ಪರದೆಯ ಮೇಲೆ ನೋಡಲು ಕಾಯಲು ಸಾಧ್ಯವಿಲ್ಲ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-27 Email-mussanje2010@gmail.com, Phone: **9448074878**